30 January 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನಾವು ಒಬ್ಬರಿಗೆ ಅದೆಷ್ಟೇ ನೆರವಾಗಲಿ,
ಆದರೆ ಅವರು ನೆನಪಿನಲ್ಲಿಡುವುದು
ಸಹಾಯ ಮಾಡದ ಸಮಯವನ್ನು ಮಾತ್ರ!

-ಸ್ನೇಹಾ ಆನಂದ್

info.varthaman@gmail.com



ಸಿಎಂಗೆ ಕ್ಲೀನ್ ಚಿಟ್: ಸತ್ಯಕ್ಕೆ ಜಯ: ಕಾಂಗ್ರೆಸ್ ಕಾರ್ಯಕರ್ತರ ಸಂಭ್ರಮ — ಪುಟ ಸಂ. 2



ಕೇಂದ್ರ ಸರ್ಕಾರದ ವಿರುದ್ಧ ಜಾಹೀರಾತು: ರಾಜ್ಯ ಸರ್ಕಾರದ ವಜಾಗೆ ಬಿಜೆಪಿ ಆಗ್ರಹ — ಪುಟ ಸಂ. 3



ಎಸ್‌ಸಿ ಮೋರ್ಚಾ ಸದೃಢಗೊಂಡರೆ ಗೆಲುವು: ಎನ್.ಮಹೇಶ್ ಕರೆ — ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 87 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ವಿಧಾನಸಭೆಯಲ್ಲಿ ಬಿಜೆಪಿ ಸಭಾತ್ಯಾಗ

## ಕೇಂದ್ರ ಸರ್ಕಾರದ ವಿರುದ್ಧ ಜಾಹೀರಾತಿಗೆ ವಿಪಕ್ಷಗಳ ವಿರೋಧ

**ಬೆಂಗಳೂರು:** ಕೇಂದ್ರ ಸರ್ಕಾರ ಜಾರಿಗೆ ತಂದಿರುವ ವಿಬಿ–ಜಿ ರಾಮ್ ಜಿ ಕಾಯ್ದೆಯನ್ನು ವಿರೋಧಿಸಿ ರಾಜ್ಯ ಸರ್ಕಾರ ಪತ್ರಿಕೆಗಳಲ್ಲಿ ಜಾಹೀರಾತು ನೀಡಿರುವದನ್ನು ವಿರೋಧಿಸಿ ಗುರುವಾರ ವಿಧಾನಸಭೆಯಲ್ಲಿ ಪ್ರತಿಪಕ್ಷ ಬಿಜೆಪಿ ಸಭಾತ್ಯಾಗ ಮಾಡಿತು.

ಸಿದ್ದರಾಮಯ್ಯ ನೇತೃತ್ವದ ಸರ್ಕಾರ ತೆರಿಗೆದಾರರ ಹಣವನ್ನು ಸುಳ್ಳು ಪ್ರಚಾರಕ್ಕಾಗಿ ದುರುಪಯೋಗಪಡಿಸಿಕೊಂಡಿದೆ ಎಂದು ಪ್ರತಿಪಕ್ಷ ಬಿಜೆಪಿ ಆರೋಪಿಸಿತು. ವಿಧಾನಸಭೆಯಲ್ಲಿ ಜಾಹೀರಾತು ವಿಷಯವನ್ನು ಪ್ರಸ್ತಾಪಿಸಿದ ಬಿಜೆಪಿ ಶಾಸಕ ಸುರೇಶ್ ಕುಮಾರ್, ಎಲ್ಲಾ ಪತ್ರಿಕೆಗಳಲ್ಲಿ ಮುಖಪುಟ ಜಾಹೀರಾತು ಇದೆ. ಸರ್ಕಾರವು



ತೆರಿಗೆದಾರರ ಹಣವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಟೀಕಿಸಿದರು.

ಕಾಂಗ್ರೆಸ್ ಪಕ್ಷ ಕೇಂದ್ರ ಸರ್ಕಾರದ ಕಾಯ್ದೆಯ ವಿರುದ್ಧ ಜಾಹೀರಾತು ನೀಡಿದ್ದರೆ ಒಪ್ಪಿಕೊಳ್ಳಬಹುದು. ಆದರೆ ವಿಬಿ–ಜಿ ರಾಮ್ ಜಿ ಕಾಯ್ದೆಯ ವಿರುದ್ಧ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ನೀಡಿದ ಇಂತಹ ಜಾಹೀರಾತು ಒಪ್ಪಿಕೊಳ್ಳಲು ಸಾಧ್ಯವಿಲ್ಲ ಎಂದು ಹೇಳಿದರು.

ವಿಪಕ್ಷ ನಾಯಕ ಆರ್.ಅಶೋಕ್ ಮಾತನಾಡಿ, ಜನರ ತೆರಿಗೆ ಹಣವನ್ನು ಬಳಸಿ ಜಾಹೀರಾತು ನೀಡಿರುವುದು ತಪ್ಪು. ಮಹಾತಗಾಂಧೀಜಿಯವರಿಗೂ ಅಪಮಾನ ಮಾಡಿದ್ದಾರೆ ಎಂದರು.

ಜಾಹೀರಾತು ನೀಡಿರುವುದನ್ನು ಸಮರ್ಥಿಸಿಕೊಂಡ ಸಚಿವ ಪ್ರಿಯಾಂಕ್ ಖರ್ಗೆ ಅವರು, ಗುಜರಾತ್ ಸರ್ಕಾರ ಪ್ರಧಾನಿ ನರೇಂದ್ರ ಮೋದಿ ರ ಹುಟ್ಟು ಹಬ್ಬದ ಜಾಹೀರಾತು ಕೊಟ್ಟಿದೆ. ಇದು ಜನರ ತೆರಿಗೆ ಹಣದಿಂದ ನೀಡಲಾಗಿದೆ. ಕೋವಿಡ್ ಸಂದರ್ಭದಲ್ಲಿ ವ್ಯಾಕ್ಸಿನ್ ಕೊಟ್ಟಿದ್ದಕ್ಕೆ ಥ್ಯಾಂಕ್ಸ್ ಮೋದಿ ಜಿ ಎಂದು ಹಿಂದಿನ ಬಿಜೆಪಿ ಸರ್ಕಾರ ಜಾಹೀರಾತು ಕೊಟ್ಟಿತ್ತು. ಗಾಂಧಿಯನ್ನು ಕೊಂದ ನಾಥುರಾಮ್ ಗೋಡ್ಸೆ ಪರ ಬಿಜೆಪಿ ಸಂಸದರು ಮಾತನಾಡುತ್ತಾರೆ. ಇದು ಯಾವ

ಪುಟ 2ಕ್ಕೆ

## ಫೆ.4ರವರೆಗೆ ಅಧಿವೇಶನ ವಿಸ್ತರಣೆ

**ಬೆಂಗಳೂರು:** ರಾಜ್ಯ ವಿಧಾನಮಂಡಲದ ಅಧಿವೇಶನವನ್ನು ಫೆಬ್ರವರಿ 4ರವರೆಗೆ ಇನ್ನೂ ನಾಲ್ಕು ದಿನಗಳವರೆಗೆ ವಿಸ್ತರಿಸಲಾಗುವುದು ಎಂದು ಸ್ಪೀಕರ್ ಯು.ಟಿ. ಖಾದರ್ ಗುರುವಾರ ಪ್ರಕಟಿಸಿದರು.

ಜನವರಿ 22 ರಿಂದ ಪ್ರಾರಂಭವಾದ ವಿಶೇಷ ಜಂಟಿ ಅಧಿವೇಶನ ಜನವರಿ 31ರಂದು ಮುಕ್ತಾಯಗೊಳ್ಳ ಬೇಕಿತ್ತು. ಆದರೆ ನಿನ್ನೆ ನಡೆದ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯಲ್ಲಿ ಮನರೇಗಾ ಕಾಯ್ದೆ ಕುರಿತು ಸಮಗ್ರ ಚರ್ಚೆ ನಡೆಸಲು ಅಧಿವೇಶನವನ್ನು ವಿಸ್ತರಿಸುವ ಬಗ್ಗೆ ಸಿಎಂ ಸಿದ್ದರಾಮಯ್ಯ ಒಲವು ವ್ಯಕ್ತಪಡಿಸಿದ್ದರು. ಈ ಹಿನ್ನೆಲೆಯಲ್ಲಿ ಅಧಿವೇಶನವನ್ನು ಫೆಬ್ರವರಿ 4 ರವರೆಗೆ ಮುಂದುವರಿಸಲು ಇಂದು ನಡೆದ ಸದನ ಸಲಹಾ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ಯು.ಟಿ ಖಾದರ್ ತಿಳಿಸಿದರು.

ವಿಧಾನಸಭೆಯ ಜಂಟಿ ಅಧಿವೇಶನವನ್ನು ಉದ್ದೇಶಿಸಿ ರಾಜ್ಯಪಾಲರು ಮಾಡಿದ ಭಾಷಣದ ಕುರಿತು ಜನವರಿ 30ರಂದು ಚರ್ಚೆ ನಡೆಯಲಿದೆ. ಜನವರಿ 31ರಂದು ಅಧಿವೇಶನ ಇರುವುದಿಲ್ಲ. ಫೆಬ್ರವರಿ 2ರಂದು ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉತ್ತರಿಸಲಿದ್ದಾರೆ ಎಂದು ಖಾದರ್ ಸದನಕ್ಕೆ ತಿಳಿಸಿದರು

# ಬಿಲ್ ಬಾಕಿ: ಗುತ್ತಿಗೆದಾರರ ಮುಷ್ಕರ

**ರಾಜ್ಯ ಸರ್ಕಾರಕ್ಕೆ ಮಾರ್ಚ್ 5ರ ಡೆಡ್‌ಲೈನ್: ಕಾಮಗಾರಿ ಸ್ಥಗಿತಕ್ಕೆ ನಿರ್ಧಾರ**

**ಬೆಂಗಳೂರು:** ರಾಜ್ಯ ಸರ್ಕಾರದಿಂದ ಬಾಕಿ ಇರುವ 38 ಸಾವಿರ ಕೋಟಿಯನ್ನು ಮಾರ್ಚ್ 5ರೊಳಗೆ ಬಿಡುಗಡೆ ಮಾಡದಿದ್ದರೆ ರಾಜ್ಯದಾದ್ಯಂತ ಕಾಮಗಾರಿಗಳನ್ನು ನಿಲ್ಲಿಸಿ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲಾಗುವುದು ಎಂದು ರಾಜ್ಯ ಗುತ್ತಿಗೆದಾರರ ಸಂಘ ಎಚ್ಚರಿಕೆ ನೀಡಿದೆ.

ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಂಜುನಾಥ್ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಳೆದ ಮೂರು ವರ್ಷದಿಂದ ಬಿಲ್ ಪಾವತಿಯಾಗದ ಕಾರಣ ಗುತ್ತಿಗೆದಾರರು ಆರ್ಥಿಕ ಸಂಕಷ್ಟದಲ್ಲಿದ್ದಾರೆ. ಸಾಲ ಪಾವತಿಸಲಾಗದೆ ವಿಷ ಕುಡಿಯುವ ಸ್ಥಿತಿಗೆ ತಲುಪಿದ್ದಾರೆ ಎಂದು ತಿಳಿಸಿದರು.

ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಸಣ್ಣ ನೀರಾವರಿ, ನಗರಾಭಿವೃದ್ಧಿ, ವಸತಿ, ಕಾರ್ಮಿಕ, ಬಿಬಿಎಂಪಿ (ಜಿಬಿಎ)ನಲ್ಲಿ 2021–22, 2022–23, 2023–24ರಿಂದ

ಪುಟ 2ಕ್ಕೆ

### ಯಾವ ಇಲಾಖೆಯಲ್ಲಿ ಎಷ್ಟು ಬಾಕಿ?

- **ಲೋಕೋಪಯೋಗಿ ಇಲಾಖೆ:** 8,370.76 ಕೋಟಿ
- **ಜನಸಂಪನ್ಮೂಲ ಇಲಾಖೆ:** 13,000 ಕೋಟಿ
- **ಆರ್.ಡಿ.ಪಿ.ಆರ್.** 3800 ಕೋಟಿ
- **ಸಣ್ಣ ನೀರಾವರಿ ಇಲಾಖೆ:** 3000 ಕೋಟಿ
- **ನಗರಾಭಿವೃದ್ಧಿ ಇಲಾಖೆ** 2000 ಕೋಟಿ
- **ವಸತಿ ಮತ್ತು ವಕ್ಫ್ ಇಲಾಖೆ:** 2600 ಕೋಟಿ
- **ಕಾರ್ಮಿಕ ಇಲಾಖೆ** 2000 ಕೋಟಿ
- **ಜಿಬಿಎ:** 2600 ಕೋಟಿ
- **ಒಟ್ಟು ಬಾಕಿ:** 37,370.76 ಕೋಟಿ

### ಬಿಜೆಪಿಗಿಂತ 'ಕೈ ಕಮಿಷನ್' ಹೆಚ್ಚಳ

**ಬೆಂಗಳೂರು:** ಹಿಂದಿನ ಬಿಜೆಪಿ ಸರ್ಕಾರಕ್ಕಿಂತ ಕಾಂಗ್ರೆಸ್ ಸರ್ಕಾರದಲ್ಲಿ ಕಮಿಷನ್ ಪ್ರಮಾಣ ಹೆಚ್ಚಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುತ್ತಿಗೆದಾರರ ಸಭೆ ಕರೆದರೆ ಎಲ್ಲ ಮಾಹಿತಿಯನ್ನು ದಾಖಲೆ ಸಹಿತ ನೀಡುತ್ತೇವೆ ಎಂದು ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಂಜುನಾಥ್ ಆರೋಪಿಸಿದರು.

ಈ ಸರ್ಕಾರದಲ್ಲಿ ಪರ್ಸೆಂಟೇಜ್ ಜಾಸ್ತಿ ಆಗಿದೆ. ಎಲ್ಲಾ ಇಲಾಖೆಯಲ್ಲೂ ಹಣ ಬಿಡುಗಡೆಗೆ ಜಾಸ್ತಿ ತಗೋಳ್ತಾರೆ. 40, 60, 80 ಪರ್ಸೆಂಟ್ ಅಂತಾ ಹೇಳಲ್ಲ. ಆದರೆ ಹಣ ಬಿಡುಗಡೆಗೆ ಹೆಚ್ಚು ಪರ್ಸಂಟೇಜ್ ಇದೆ. ಅದನ್ನ ನಾವು ಬಹಿರಂಗಪಡಿಸುತ್ತೇವೆ. ನೀರಾವರಿ ಮತ್ತು ಪಿಡಬ್ಲ್ಯೂಡಿ ಇಲಾಖೆಯಲ್ಲಿ ಈ ಹಿಂದಿನಂತೆ ಇದೆ. ಕೆಲವು ಇಲಾಖೆಗಳಲ್ಲಿ ಜಾಸ್ತಿ ಆಗಿದೆ ಎಂದು ಸರ್ಕಾರದ ವಿರುದ್ಧ ಕಿಡಿಕಾರಿದರು.

ನಗರಾಭಿವೃದ್ಧಿ ಇಲಾಖೆ ಅಷ್ಟೇ ಅಲ್ಲ, ವಸತಿ ಇಲಾಖೆಯಲ್ಲೂ ಕೂಡ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿದೆ. ಸಪರೇಟ್ ಆಫೀಸ್‌ಗಳನ್ನ ಮಾಡಿಕೊಂಡು ಮಧ್ಯವರ್ತಿಗಳು ಕೆಲಸ ಮಾಡ್ತಾ ಇದ್ದಾರೆ. ಹೇಳಿದ ಹಾಗೇ ಕೇಳದೇ ಇದ್ದರೆ ಟೆಂಡರ್ ಕ್ಯಾನ್ಸಲ್ ಮಾಡ್ತೇವೆ ಅಂತಾರೆ. ಈ ಬಗ್ಗೆ ಚರ್ಚಿಸಲು ಕೂಡಲೇ ಸಿಎಂ ಜತೆ ಕರೆಯಬೇಕು. ಒಂದು ವೇಳೆ ಸಭೆ ಕರೆಯಲಿಲ್ಲ ಅಂದರೆ ದಾಖಲೆ ಬಿಡುಗಡೆ ಮಾಡುತ್ತೇವೆಂದು ಎಚ್ಚರಿಸಿದರು. ನಗರಾಭಿವೃದ್ಧಿ


ಪುಟ 2ಕ್ಕೆ

# ಸಚಿವ ಕೆ.ಜೆ.ಜಾರ್ಜ್ ರಾಜೀನಾಮೆ ವದಂತಿ

# ಅಧಿವೇಶನದಲ್ಲೂ ಪ್ರತಿಧ್ವನಿ

## ಯತೀಂದ್ರ ಹಸ್ತಕ್ಷೇಪಕ್ಕೆ ಜಾರ್ಜ್ ಬೇಸರ | ಬಿಜೆಪಿ ನಾಯಕರ ಆರೋಪ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ಸಿದ್ದರಾಮಯ್ಯ ತಮ್ಮ ಇಲಾಖೆಯಲ್ಲಿ ಹಸ್ತಕ್ಷೇಪ ಮಾಡುತ್ತಿರುವುದರಿಂದ ಬೇಸತ್ತು ಇಂಧನ ಸಚಿವ ಕೆ.ಜೆ.ಜಾರ್ಜ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಲು ಮುಂದಾಗಿದ್ದರು ಎಂಬ ವಿಚಾರ ಗುರುವಾರ ವಿಧಾನಸಭೆ ಅಧಿವೇಶನದಲ್ಲಿ ಪ್ರತಿಧ್ವನಿಸಿದ ಪ್ರಸಂಗ ನಡೆಯಿತು.



ಇಂಧನ ಇಲಾಖೆ ಅಧಿಕಾರಿಗಳ ವರ್ಗಾವಣೆ ವಿಚಾರವಾಗಿ ತಮ್ಮನ್ನು ವಿಶ್ವಾಸಕ್ಕೆ



ಪಡೆಯದೆ ಕ್ರಮ ಕೈಗೊಳ್ಳಲಾಗಿದೆ ಎಂಬ ಕಾರಣಕ್ಕಾಗಿ ಅಸಮಾಧಾನಗೊಂಡು ಸಚಿವ ಕೆ.ಜೆ ಜಾರ್ಜ್ ರಾಜೀನಾಮೆ ನೀಡಲು ಮುಂದಾಗಿದ್ದರು. ಸಿದ್ದರಾಮಯ್ಯ ಅವರಿಗೆ ರಾಜೀನಾಮೆ ಪತ್ರ ನೀಡಲು ಮುಂದಾಗಿದ್ದರು. ಆಗ ಸಿಎಂ ಅವರ ಕಾನೂನು ಸಲಹೆಗಾರ ಪೊನ್ನಣ್ಣ ಮಧ್ಯೆ ಪ್ರವೇಶಿಸಿ ಸಚಿವ ಜಾರ್ಜ್ ಮನವೊಲಿಸಿದರು ಎಂಬ ವಿಚಾರ ಮಾಧ್ಯಮಗಳಲ್ಲಿ ವರದಿಯಾಗಿದೆ ಎಂಬ ಈ ಬಗ್ಗೆ ವಿಧಾನಸಭೆಯಲ್ಲಿ ಬಿಜೆಪಿ ಶಾಸಕರು ಪ್ರಸ್ತಾಪ ಮಾಡಿದರು. ಸ್ವತಃ ಕೆ.ಜೆ.ಜಾರ್ಜ್ ಸ್ಪಷ್ಟನೆ ನೀಡಿದರು.

ಇಂಧನ ಇಲಾಖೆಯ ಕೆಲವು ಅಧಿಕಾರಿಗಳನ್ನು ವರ್ಗಾವಣೆ ಮಾಡಲು ಸಿಎಂ ಕಚೇರಿ ಮುಂದಾಗಿತ್ತು. ಸಿಎಂ ಪುತ್ರ ಯತೀಂದ್ರ ಸಿದ್ದರಾಮಯ್ಯ ಇಂಧನ ಇಲಾಖೆ ಆಡಳಿತದಲ್ಲಿ ತೀವ್ರ ಹಸ್ತಕ್ಷೇಪ ಮಾಡುತ್ತಿದ್ದರು. ಇದರಿಂದ ಅಸಮಾಧಾನಗೊಂಡ ಕೆ.ಜೆ ಜಾರ್ಜ್ ಸಿಎಂ ನಿವಾಸಕ್ಕೆ ತೆರಳಿ ಪ್ರಶ್ನಿಸಿದ್ದರು. ಅಲ್ಲದೆ ಸಚಿವ ಸಂಪುಟ ಸಭೆಗೂ ಗೈರಾಗಿದ್ದರು ಎಂದು ಹೇಳಲಾಗಿತ್ತು.

ಇಲಾಖೆ ಮಂತ್ರಿಯಾಗಿ ನನ್ನ ಮಾತಿಗೆ ಬೆಲೆ ಇಲ್ಲ ಎಂದಾದರೆ ನಾನೇಕೆ ಇಲ್ಲಿ ಇರಲಿ ಎಂದು ಸಚಿವರು ಬೇಸರ ಹೊರ ಹಾಕಿದ್ದರು ಎಂಬ ಮಾಹಿತಿ ಇದೆ. ಬಳಿಕ ಸಿಎಂ ಸಿದ್ದರಾಮಯ್ಯ ಅವರ ಕಾನೂನು ಸಲಹೆಗಾರ ಎ.ಎಸ್ ಪೊನ್ನಣ್ಣ ಅವರು ಸಂಧಾನ ನಡೆಸಿ ಸಚಿವರನ್ನು ಸಮಾಧಾನ ಪಡಿಸಿದ್ದರು ಎಂಬ ಮಾಹಿತಿ ಕೇಳಿ ಬಂದಿತ್ತು.

### ಸದನದಲ್ಲಿ ಕಾವೇರಿದ ಚರ್ಚೆ

ವಿಧಾನಸಭೆಯಲ್ಲಿ ಗುರುವಾರ ಪ್ರಶ್ನೋತ್ತರ ಅವಧಿಯ ಬಳಿಕ ಈ ವಿಚಾರವಾಗಿ ಬಿಜೆಪಿ ಸದಸ್ಯ ಸುನೀಲ್ ಕುಮಾರ್ ಪ್ರಸ್ತಾಪ ಮಾಡಿದರು. ಇಂಧನ ಸಚಿವ ಕೆ.ಜೆ ಜಾರ್ಜ್ ರಾಜೀನಾಮೆ ಕೊಟ್ಟಿದ್ದಾರೆ. ಸಿಎಂ ಮಗನ ಹಸ್ತಕ್ಷೇಪದ ಕಾರಣಕ್ಕಾಗಿ ರಾಜೀನಾಮೆ ಕೊಟ್ಟಿದ್ದಾರೆ ಎಂಬ ಸುದ್ದಿ ಬಂದಿದೆ, ಈ ಬಗ್ಗೆ ಸ್ಪಷ್ಟನೆ ಕೊಡಿ ಎಂದು ಆಗ್ರಹಿಸಿದರು.

ಸದನದಲ್ಲಿ ಸ್ಪಷ್ಟನೆ ನೀಡಿದ ಸಚಿವ ಕೆ.ಜೆ.ಜಾರ್ಜ್ ಅವರು, ನಾನು ರಾಜೀನಾಮೆ ಕೊಡಲು ಮುಂದಾಗಿದ್ದೇನೆ ಎಂದು ಬಿಜೆಪಿಯವರು ಹೇಳಿದ್ದಾರೆ. ನಾನು ಮಾಧ್ಯಮಗಳಿಗೆ ಹಾಗೇ ಹೇಳಿದ್ದೇನಾ? ನನಗೆ ಸಿಎಂ ಸಿದ್ದರಾಮಯ್ಯ ಮೇಲೆ ಸಂಪೂರ್ಣ ನಂಬಿಕೆ ಇದೆ. ಈ ಮಾಹಿತಿ ಸತ್ಯಕ್ಕೆ ದೂರವಾಗಿದೆ ಎಂದು ತಿಳಿಸಿದರು.

ಹಿಂದೆಲ್ಲಾ ದಿನಕ್ಕೆ ಮೂರು ಬಾರಿ ನ್ಯೂಸ್ ಬರುತ್ತಿತ್ತು. ಈಗ ಗಂಟೆಗೊಂದು ಬ್ರೇಕಿಂಗ್ ನ್ಯೂಸ್ ಬರುತ್ತಿದೆ. ಮಾಧ್ಯಮದವರೇ ಈ ಸುದ್ದಿಯನ್ನು ಸೃಷ್ಟಿ ಮಾಡುತ್ತಿದ್ದಾರೆ. ನಾನು ರಾಜೀನಾಮೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ. ನನಗೆ ಸಿಎಂ ಹಾಗೂ ಸರ್ಕಾರದ ಮೇಲೆ ಸಂಪೂರ್ಣ ನಂಬಿಕೆ ಮತ್ತು ಬೆಂಬಲ ಇದೆ ಎಂದು ತಿಳಿಸಿದರು.



## ಇಮ್ಮಡಿ ಮಹದೇವಸ್ವಾಮಿಗೆ ಮಹದೇಶ್ವರ ಬೆಟ್ಟಕ್ಕೆ ನಿರ್ಬಂಧ

**ಚಾಮರಾಜನಗರ:** ಸುಳ್ವಾಡಿ ಮಾರಮ್ಮನ ದೇಗುಲದ ವಿಷಪ್ರಸಾದ ದುರಂತ ಪ್ರಕರಣದ ಆರೋಪಿ ಇಮ್ಮಡಿ ಮಹದೇವಸ್ವಾಮಿಗೆ ಮಲೆ ಮಹದೇಶ್ವರ ಬೆಟ್ಟಕ್ಕೆ ಪ್ರವೇಶಕ್ಕೆ ನಿರ್ಬಂಧ ವಿಧಿಸಿ ಹನೂರು ತಹಸೀಲ್ದಾರ್ ಚೈತ್ರಾ ಆದೇಶ ಹೊರಡಿಸಿದ್ದಾರೆ.

ಪ್ರಕರಣದಲ್ಲಿ ಜಾಮೀನಿನ ಮೇಲೆ ಜೈಲಿನಿಂದ ಇಮ್ಮಡಿ ಮಹದೇವಸ್ವಾಮಿ ಹೊರ ಬಂದಿದ್ದಾರೆ. ಸಾಲೂರು ಮಠದಲ್ಲಿ ನಡೆಯಲಿರುವ ಪಟ್ಟದ ಮಹದೇವ ಸ್ವಾಮೀಜಿ 32ನೇ ಸಂಸ್ಮರಣೋತ್ಸವದಲ್ಲಿ ಭಾಗವಹಿಸಲು ಆರೋಪಿ ಇಮ್ಮಡಿ ಮಹದೇವಸ್ವಾಮಿ ಮುಂದಾಗಿದ್ದರು. ಆರೋಪಿ ಭಾಗವಹಿಸಿದರೆ ಪ್ರತಿಭಟನೆ ಮಾಡುವುದಾಗಿ ಸಂತ್ರಸ್ತರು ಹಾಗೂ ದಲಿತ ಸಂಘಟನೆಗಳು ಎಚ್ಚರಿಕೆ ನೀಡಿದ್ದರು. ಸಾಲೂರು ಮಠದ ಆವರಣ ಪ್ರವೇಶಕ್ಕೆ ಅವಕಾಶ ನೀಡಬಾರದು ಎಂದು ಪೊನ್ನಾಚಿ ಮಹದೇವಸ್ವಾಮಿ ಮನವಿ ಮಾಡಿದ್ದರು.

ಪುಟ 2ಕ್ಕೆ

## ಸರ್ಕಾರಿ ಗೌರವಗಳೊಂದಿಗೆ ಮಹಾರಾಷ್ಟ್ರ ಡಿಸಿಎಂ ಅಜಿತ್ ಪವಾರ್ ಅಂತ್ಯಕ್ರಿಯೆ



**ಮುಂಬೈ:** ವಿಮಾನ ಅಪಘಾತದಲ್ಲಿ ನಿಧನರಾದ ಮಹಾರಾಷ್ಟ್ರ ಡಿಸಿಎಂ ಅಜಿತ್ ಪವಾರ್ ಅಂತ್ಯಕ್ರಿಯೆ ಸಕಲ ಸರ್ಕಾರಿ ಗೌರವಗಳೊಂದಿಗೆ ಬಾರಾಮತಿಯಲ್ಲಿ ಗುರುವಾರ ನಡೆಯಿತು. ಅಜಿತ್ ಅವರ ಪಾರ್ಥಿವ ಶರೀರಕ್ಕೆ

ಪುಟ 2ಕ್ಕೆ

## ಸರ್ಕಾರಿ ನೌಕರರಿಗೆ ಖಾದಿ ಬಟ್ಟೆ ಕಡ್ಡಾಯ




**ಬೆಂಗಳೂರು:** ಸರ್ಕಾರಿ ನೌಕರರಿಗೆ ಖಾದಿ ಬಟ್ಟೆ ಕಡ್ಡಾಯಗೊಳಿಸಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಮಹತ್ವ ನಿರ್ಧಾರ ತೆಗೆದುಕೊಂಡಿದ್ದಾರೆ.

ಯೋಜನೆಗೆ ಏಪ್ರಿಲ್ 24ರಿಂದ ಸರ್ಕಾರ ಚಾಲನೆ ನೀಡಲಿದೆ. ಎಲ್ಲಾ ಸರ್ಕಾರಿ ನೌಕರರು ಕಡ್ಡಾಯವಾಗಿ ಪ್ರತಿ ತಿಂಗಳ ಮೊದಲ

ಪುಟ 2ಕ್ಕೆ

## ಋತುಚಕ್ರ ರಜೆ: ಆದೇಶ ಹೊರಡಿಸಿದ ಶಿಕ್ಷಣ ಇಲಾಖೆ

**ಬೆಂಗಳೂರು:** ಉದ್ಯೋಗಸ್ಥ ಮಹಿಯರಿಗೆ ಕಡ್ಡಾಯವಾಗಿ ಋತುಚಕ್ರ ರಜೆ ನೀಡಲು ಶಿಕ್ಷಣ ಇಲಾಖೆ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ. ಶಾಲಾ ಶಿಕ್ಷಣ ಇಲಾಖೆ ಆಯುಕ್ತರಿಂದ ರಜೆ ನೀಡಲು ಆದೇಶ ಹೊರಡಿಸಿದ್ದು, ಋತುಚಕ್ರ ರಜೆಗೆ ಷರತ್ತು ವಿಧಿಸಲಾಗಿದೆ.




**ಷರತ್ತುಗಳೇನು:** ಮಹಿಳಾ ನೌಕರರು ಆಯಾ ತಿಂಗಳ ಋತುಚಕ್ರ ರಜೆಯನ್ನು ಆಯಾ ತಿಂಗಳಿನಲ್ಲಿಯೇ ಬಳಸಿಕೊಳ್ಳಬೇಕು. ಹಿಂದಿನ ತಿಂಗಳ ಋತುಚಕ್ರ ರಜೆಯನ್ನು ಮುಂದಿನ ತಿಂಗಳಿಗೆ ವಿಸ್ತರಿಸಲು ಅವಕಾಶವಿರುವುದಿಲ್ಲ. ಪ್ರತಿ ತಿಂಗಳು ಒಂದು ದಿನದ ಋತುಚಕ್ರ ರಜೆ ಪಡೆಯಲು ಮಹಿಳಾ ನೌಕರರು ಯಾವುದೇ ವೈದ್ಯಕೀಯ ಪ್ರಮಾಣ ಪತ್ರವನ್ನು ಒದಗಿಸುವ ಅವಶ್ಯಕತೆ ಇರುವುದಿಲ್ಲ. ಋತುಚಕ್ರ ಹೊಂದಿರುವ 18 ರಿಂದ 52 ವಯಸ್ಸಿನ ಮಹಿಳಾ ಸರ್ಕಾರಿ ನೌಕರರು ಈ ರಜೆಯನ್ನು

ಪುಟ 2ಕ್ಕೆ

## ರಾಜ್ಯಪಾಲರ ಫೋನ್ ಕದ್ದಾಲಿಕೆ ಮಾಡಿಲ್ಲ

**ಭವಿಷ್ಯದಲ್ಲಿಯೂ ಮಾಡಲ್ಲ | ಸಚಿವ ಜಿ.ಪರಮೇಶ್ವರ ತಿರುಗೇಟು**

**ಬೆಂಗಳೂರು:** ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರ ಫೋನ್ ಕರೆಗಳನ್ನು ರಾಜ್ಯ ಸರ್ಕಾರ ಕದ್ದಾಲಿಸುತ್ತಿದೆ ಎಂಬ ವಿರೋಧ ಪಕ್ಷದ ಬಿಜೆಪಿ ಆರೋಪವನ್ನು ಗೃಹ ಸಚಿವ ಜಿ.ಪರಮೇಶ್ವರ ನಿರಾಕರಿಸಿದರು.

ನಗರದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಕ್ಕೆ ಫೋನ್ ಟ್ಯಾಪಿಂಗ್ ಮಾಡುವ ಅಗತ್ಯವಿಲ್ಲ. ನಾವು ಯಾರ ಫೋನ್ ಕದ್ದಾಲಿಕೆ ಮಾಡಿಲ್ಲ. ಭವಿಷ್ಯದಲ್ಲಿಯೂ ಮಾಡುವುದಿಲ್ಲ. ಅಲ್ಲದೆ, ನಮಗೆ ಅದರ ಅಗತ್ಯವಿಲ್ಲ. ಬಿಜೆಪಿ ಪ್ರತಿದಿನ ಮುಂಜಾನೆಯಿಂದ ಸಂಜೆಯವರೆಗೆ ನೂರಾರು ಆರೋಪಗಳನ್ನು ಮಾಡುತ್ತದೆ. ಆದರೆ, ಅವೆಲ್ಲವುಗಳಿಗೆ ಉತ್ತರಿಸುವ ಅಗತ್ಯವಿಲ್ಲ ಎಂದು ಹೇಳಿದರು.

ರಾಜ್ಯ ವಿಧಾನಸಭೆಯಲ್ಲಿ ಕಾಂಗ್ರೆಸ್ ಸರ್ಕಾರ ರಾಜ್ಯಪಾಲರ ಫೋನ್ ಕದ್ದಾಲಿಕೆ ಮಾಡುತ್ತಿದೆ ಎಂಬ ಬಿಜೆಪಿ ಆರೋಪದ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿದ ಪರಮೇಶ್ವರ, ಕೇಸರಿ ಪಕ್ಷದ ನಾಯಕರ ಆರೋಪಕ್ಕೆ ಈ ಹಿಂದೆ



ಬಿಜೆಪಿ ಸರ್ಕಾರ ಮಾಡಿರುವುದನ್ನೇ, ಕಾಂಗ್ರೆಸ್ ಮಾಡುತ್ತಿದೆ ಎಂಬಂತೆ ಊಹಿಸಿದೆ ಎಂದು ಟೀಕಿಸಿದರು.

ಚಿಕ್ಕಮಗಳೂರು ಜಿಲ್ಲೆಯ ಪೊಲೀಸ್ ಅಧಿಕಾರಿಯೊಬ್ಬರು ಇನ್ನೂ ಜಾರಿಗೆ ಬಂದಿಲ್ಲದ ಕಾನೂನನ್ನು ಉಲ್ಲೇಖಿಸಿ ನೋಟಿಸ್ ನೀಡಿದ್ದಾರೆ ಎಂಬ ಬಿಜೆಪಿ ಆರೋಪದ ಕುರಿತು ಮಾತನಾಡಿದ ಪರಮೇಶ್ವರ, ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

ನಾವು ಈಗಾಗಲೇ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) ಕುರಿತು ಪೊಲೀಸ್

ಪುಟ 2ಕ್ಕೆ

## ಹರಿಪ್ರಸಾದ್ ವಿವಾದ: ಪರಿಷತ್ ಕಲಾಪ ಬಲಿ

**ಬೆಂಗಳೂರು:** ವಿಧಾನ ಪರಿಷತ್ ಕಾಂಗ್ರೆಸ್ ಸದಸ್ಯ ಬಿ.ಕೆ. ಹರಿಪ್ರಸಾದ್ ಅವರ ವಿವಾದಾತ್ಮಕ ಹೇಳಿಕೆಗೆ ಗುರುವಾರ ವಿಧಾನ ಪರಿಷತ್ ಕಲಾಪ ಬಲಿಯಾಯ್ತು.

'ವಿಪಕ್ಷ ನಾಯಕ ತಲೆ ಹಿಡುಕ' ಎಂದಿದ್ದ ಬಿ.ಕೆ.ಹರಿಪ್ರಸಾದ್ ಕ್ಷಮೆ ಕೇಳಬೇಕೆಂದು ವಿಪಕ್ಷ ಸದಸ್ಯರು ಗುರುವಾರ ಪಟ್ಟು ಹಿಡಿದರು. ಇದು ಕಲಾಪದಲ್ಲಿ ಗದ್ದಲ, ಕೋಲಾಹಲಕ್ಕೆ ಕಾರಣ ಆಯಿತು.

ಕಲಾಪದಲ್ಲಿ ಜನವರಿ 23ರಂದು, ಬಿಜೆಪಿ– ಆರ್‌ಎಸ್‌ಎಸ್ ವಿರುದ್ಧ ವಿವಾದಾತ್ಮಕ ಮಾತುಗಳನ್ನ ಬಿ.ಕೆ.ಹರಿಪ್ರಸಾದ್ ಆಡಿದ್ದರು. ಬಿಜೆಪಿ ಮತ್ತು ಆರ್‌ಎಸ್‌ಎಸ್ ನವರು ಯಾವ ಮಹಿಳೆಯರನ್ನೂ ಬಿಟ್ಟಿಲ್ಲ, ಪೋಕ್ಸೋ ಕೇಸ್ ನಲ್ಲಿ ಇರೋರು, ಲಫಂಗಗಳು ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದರು. ಇದಕ್ಕೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ನೀನು ತಲೆ ಹಿಡುಕ ಎಂದಿದ್ದರು.

ರಾಜ್ಯಪಾಲರ ವಿಚಾರವಾಗಿ ಚರ್ಚೆ ಮಾಡುವಾಗ ರಾಜ್ಯಪಾಲರಿಗೆ ಕೈ ತೋರಿಸದೇ ಕಾಲು ತೋರಿಸೋಕೆ ಆಗುತ್ತದೆಯೇ ಎಂದು ಬಿ.ಕೆ.ಹರಿಪ್ರಸಾದ್ ಹೇಳಿದರು. ಹರಿಪ್ರಸಾದ್ ಅವರನ್ನ ಅಮಾನತು ಮಾಡುವಂತೆ


ಪುಟ 2ಕ್ಕೆ

## ಮುಡಾ: ಹೋರಾಟಕ್ಕೆ ಕಾಂಗ್ರೆಸ್ ಬೆಂಬಲ!

**ಕೋರ್ಟ್ ಆದೇಶ ಪ್ರಶ್ನಿಸಿ ಹೈಗೆ ಅರ್ಜಿ: ಸ್ನೇಹಮಯಿ**

**ಮೈಸೂರು:** ಮುಡಾ ಹಗರಣದ ವಿಚಾರದಲ್ಲಿ ನ್ಯಾಯ ನನ್ನ ಹೋರಾಟಕ್ಕೆ ನ್ಯಾಯ ಸಿಗಲಿದೆ. ಎದೆಗುಂದ ಬೇಡಿ ಎಂದು ಕಾಂಗ್ರೆಸ್ ನಾಯಕರೇ ಹೇಳಿದ್ದಾರೆ ಎಂದು ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಹೇಳಿದರು.

ಮುಡಾ ನಿವೇಶನ ಅಕ್ರಮ ಹಂಚಿಕೆ ವಿಚಾರದಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಅವರ ಕುಟುಂಬಕ್ಕೆ ಜನಪ್ರತಿನಿಧಿ ನ್ಯಾಯಾಲಯದಿಂದ ರಿಲೀಫ್ ಸಿಕ್ಕ ವಿಚಾರವಾಗಿ ಮಾಧ್ಯಮಗಳ ಜೊತೆ ಮಾತನಾಡಿದರು. ಈ ವೇಳೆ ಜನಪ್ರತಿನಿಧಿ ನ್ಯಾಯಾಲಯದ ಆದೇಶ ಪ್ರಶ್ನಿಸಿ ಹೈಕೋರ್ಟ್ಗೆ ಅರ್ಜಿ ಹಾಕುತ್ತೇನೆ. ನನ್ನ ಜೊತೆ ಈಗಲೂ ಕಾಂಗ್ರೆಸ್, ಜೆಡಿಎಸ್ ಹಾಗೂ ಬಿಜೆಪಿಯ ಬಹಳಷ್ಟು ಜನ ಸಂಪರ್ಕದಲ್ಲಿ ಇದ್ದಾರೆ. ಅವರೆಲ್ಲ ಎದೆ ಗುಂದ ಬೇಡಿ ನ್ಯಾಯ ಸಿಕ್ಕೆ ಸಗಲಿದೆ ಎಂದು ಧೈರ್ಯ ತುಂಬಿದ್ದಾರೆ ಎಂದು ತಿಳಿಸಿದರು.



ಮೂಡಾ ಸೈಟ್ ವಿಚಾರದಲ್ಲಿ ಸಿಎಂ ಹಾಗೂ ಅವರ ಕುಟುಂಬ ತಪ್ಪು ಮಾಡಿರುವುದು ನಿಜ. ಸಿಎಂ ಕುಟುಂಬಕ್ಕೆ ಶಿಕ್ಷೆ ಕೊಡಿಸುವವರೆಗೂ ಹೋರಾಟ ಮಾಡುತ್ತೇನೆ. 50:50 ಅನುಪಾತದಲ್ಲಿ ಸೈಟ್ ಪಡೆದ ಎಲ್ಲರಿಗೂ ಸಂಕಷ್ಟ ಕಟ್ಟಿಟ್ಟ ಬುತ್ತಿ. ಎಲ್ಲಾ ಸೈಟ್ ಸರ್ಕಾರಕ್ಕೆ ವಾಪಸ್ ಕೊಡಿಸುತ್ತೇನೆ ಎಂದು ಹೇಳಿದರು.

ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತ ನೀಡಿದ್ದ ಬಿ ರಿಪೋರ್ಟ್ ಅನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಒಪ್ಪಿದೆ. ಇದರೊಂದಿಗೆ

ಪುಟ 2ಕ್ಕೆ

# ಭಾರತ ಸಂವಿಧಾನ ಶ್ರೇಷ್ಠವಾದದ್ದು



ಚಾಮರಾಜನಗರ, ಬಾಬಾ ಸಾಹೇಬ್ ಡಾ.ಬಿ. ಆರ್.ಅಂಬೇಡ್ಕರ್ ಅವರು ರಚಿಸಿಕೊಟ್ಟಿರುವ ಭಾರತದ ಸಂವಿಧಾನ ಇಡೀ ವಿಶ್ವದಲ್ಲೇ ಶ್ರೇಷ್ಠ ವಾಗಿದೆ ಎಂದು ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಎನ್. ಜೋಸೆಫ್ ಹೇಳಿದರು.

ತಾಲೂಕಿನ ಮಾದಾಪುರ ಸಂತ ತೆರೇಸಾ ವಿದ್ಯಾಮಂದಿರದಲ್ಲಿ ನಡೆದ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯಅತಿಥಿಯಾಗಿ ಭಾಗವಹಿಸಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. 1950ರಲ್ಲಿ ದೇಶಕ್ಕೆ .ಸಂವಿಧಾನ ಜಾರಿಗೆ ಬಂದಿತು. ಸಂವಿಧಾನವು ಭಾರತವನ್ನು ಒಂದು ಸ್ವಾತಂತ್ರ್ಯ, ಸಮಾನತೆ ಮತ್ತು ನ್ಯಾಯದ ಮೇಲೆ ನಿಂತ ಗಣರಾಜ್ಯೋತ್ಸವವನ್ನಾಗಿ ರೂಪಿಸಿದೆ ಎಂದರು.

ನಮ್ಮ ಹಕ್ಕುಗಳು, ಕರ್ತವ್ಯಗಳನ್ನು ಪಾಲಿಸುವ ಜವಾಬ್ದಾರಿಯೂ ನಮ್ಮ ಮೇಲಿದೆ. ಗಣರಾಜ್ಯೋತ್ಸವವು ದೇಶದ ಏಕತೆ, ಅಖಂಡಂತೆ, ಪ್ರಜಾಪ್ರಭುತ್ವದ ಮೌಲ್ಯಗಳನ್ನು ರೂಪಿಸುತ್ತದೆ ಎಂದರು.

ಪ್ರೌಢಶಾಲೆಯಮುಖ್ಯ ಶಿಕ್ಷಕರಾದ ಜಾರ್ಜ್. ಡಿಸೋಜಾ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಸುನೀಲ್ ಬಾಸ್ಕೋ ಗಣರಾಜ್ಯೋತ್ಸವದ ಬಗ್ಗೆ ಮಾತನಾಡಿದರು ಶಾಲೆಯ ಮುಖ್ಯಸ್ಥ ವಂದನೆ ಸ್ವಾಮಿ. ಅಂತೋಣಿ ರಾಜ್ ಅಧ್ಯಕ್ಷತೆ ವಹಿಸಿದ್ದ ಮಾತನಾಡಿದರು.ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು. ದೈಹಿಕ ಶಿಕ್ಷಣ ಶಿಕ್ಷಕ ಎನ್.ರಾಜು ವಂದಿಸಿದರು. ಕಮಲ ನಿರೂಪಿಸಿದರು. ವೇದಾವತಿ ವಂದಿಸಿದರು. ಶಿಕ್ಷಕರು, ಶಾಲಾ ಮಕ್ಕಳು, ಪೋಷಕರು ಸಿಬ್ಬಂದಿಗಳು ಹಾಜರಿದ್ದರು.

# ಒತ್ತುವರಿ ಜಮೀನು ರಸ್ತೆ ತೆರವು




ಕೊಳ್ಳೇಗಾಲ: ತಾಲ್ಲೂಕಿನ ಮುಳ್ಳೂರು ಗ್ರಾಮದಿಂದ ಗೊಬ್ಬಳಿಪುರ ಗ್ರಾಮದವರೆಗೆ ಒತ್ತುವರಿಯಾಗಿರುವ ಜಮೀನು ರಸ್ತೆಯನ್ನು ತೆರವುಗೊಳಿಸಲಾಯಿತು.

ಮುಳ್ಳೂರು ಗ್ರಾಮದ ಸರ್ವೇ.ನಂ.66/3, 68, 79, 76 ನಕಾಶೆಯಂತೆ ದಾರಿ ಇದ್ದು ಒತ್ತುವರಿಯಾಗಿ ರುವುದರಿಂದ ಗ್ರಾಮದ ಶಿವಕುಮಾರ್ ಹಾಗೂ ಪ್ರಗತಿಪರ ರೈತರ ಮನವಿ ಮೇರೆಗೆ ತಹಶಿಲ್ದಾರ್ ರವರ ಆದೇಶದ ಮೇರೆಗೆ ತೆರವುಗೊಳಿಸಿದರು. ನಮ್ಮ ಪೂರ್ವಜರು 50 ವರ್ಷಗಳ ಹಿಂದೆ ಮುಳ್ಳೂರುನಿಂದ ಗೊಬ್ಬಳಿಪುರದ ರಸ್ತೆಯನ್ನು ಒತ್ತುವರಿ ಮಾಡಿದ್ದರಿಂದ ಇಲ್ಲಿನ ಜಮೀನುಗಳಿಗೆ ಹಾಗೂ ದೇವಸ್ಥಾನಕ್ಕೆ ಹೋಗಲು ತೊಂದರೆಯಾಗುತ್ತಿತ್ತು. ಈಗ ಎಲ್ಲರಿಗೂ ರಸ್ತೆ ಅವಶ್ಯಕತೆ ಇದುದ್ದರಿಂದ ಎಲ್ಲಾ ರೈತರು ಸ್ವಯಂ ಪ್ರೇರಿತಾವಾಗಿ ಒತ್ತುವರಿ ತೆರವು ಮಾಡಲು ಅವಕಾಶ ನೀಡಿದ್ದಾರೆ. ನಮ್ಮ ಪ್ರಗತಿಪರ ರೈತರ ಅರ್ಜಿ ಸಲ್ಲಿಸಿದ್ದ ಮೇರೆಗೆ ತಹಶಿಲ್ದಾರ್ ರವರು ತೆರವುಗೊಳಿಸುತ್ತಿದ್ದಾರೆ. ತಹಶಿಲ್ದಾರ್ ರವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಇಂದು ತೆರವು ಮಾಡುತ್ತಿರುವುದು ಕಳೆದ 25 ವರ್ಷಗಳ ಶಿವಕುಮಾರ್ ರವರ ಹೋರಾಟ ಫಲವೆಂದು ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು.

ತಹಶಿಲ್ದಾರ್ ರವರ ಆದೇಶದ ಮೇರೆಗೆ ಸ್ಥಳಕ್ಕೆ ಗ್ರಾಮ ಲೆಕ್ಕಿಗ ರಕ್ಷಿತಾ, ರಾಜಸ್ವ ನಿರೀಕ್ಷಕ ನಿರಂಜನ್, ಸರ್ವೆಯರ್ ಪುಟ್ಟಸ್ವಾಮಿ ರಸ್ತೆ ತೆರವುಗೊಳಿಸಿದರು. ಈ ಸಂಧರ್ಭದಲ್ಲಿ ಮುಳ್ಳೂರು ಗ್ರಾ.ಪಂ ಅಧ್ಯಕ್ಷ ಕಮಲಮ್ಮ, ಸದಸ್ಯರು ಮಹದೇವಮ್ಮ, ಶೇಖರ್ ಹಾಗೂ ಗ್ರಾಮಸ್ಥರು ಇದ್ದರು.

## ಕೃಷ್ಣ ವಂದನ



ಸ್ನೇಹಾ ಆನಂದ್



### ಹೇ ಕೃಷ್ಣಾ !

ತಂದೆಯಾದೆ , ತಾಯಿಯಾದೆ
ಬಂಧು ಬಳಗ, ಆತ್ಮೀಯನಾದೆ !
ಉಸಿರಾದೆ,ಹಸಿರಾದೆ,
ಮನದ ಮಂದಿರದಲ್ಲಿ ಪಸರಿಸಿದೆ!

ಧನವಾದೆ, ಧಾನ್ಯವಾದೆ,
ದೇಹದೊಳಗೆ ನಿಂತು ಆತ್ಮವಾದೆ!
ಪ್ರಕೃತಿಯೂ ನೀನೇ , ಪುರುಷನೂ ನೀನೆ,
ನಮ್ಮ ಬಾಳಿನ ಬೆಳಕು ನೀನೆ!

ಬದುಕು ನೀನೇ, ಬಯಕೆ ನೀನೆ,
ಅಂತರಾತ್ಮದೊಳು ನುಡಿಸುವವನು ನೀನೆ!
ಆದಿ ನೀನೇ ಅಂತ್ಯ ನೀನೆ
ಜೀವನಕೆ ಆಮ್ಲಜನಕವೂ ನೀನೆ!

ಜೀವಿಯ ಜನಕನು ನೀನೇ,
ಜತನದಿ ಕಾಯುವವ ನೀನೆ!
ಕ್ಷಣ ಕ್ಷಣದ ಲೆಕ್ಕ ಇಟ್ಟವ ನೀನೆ,
ಅದಕ್ಕೆ ತಕ್ಕಂತೆ ಫಲ ನೀಡುವವನು ನೀನೆ!

# ಕುಸಿತ ಬೆಲೆ ರೈತ ಕಂಗಾಲು




ಗುಂಡ್ಲುಪೇಟೆ: ರೈತ ಬೆಳೆಯುವ ತರಕಾರಿಗಳ ಬೆಲೆ ಏಕಾಏಕಿ ಕುಸಿತವಾದಾಗ ಸಾವಿರಾರು ರೂ ಗಳ ಬಂಡವಾಳ ಮಣ್ಣು ಪಾಲಾಗುತ್ತದೆ, ಅದರಂತೆ ಈಗ ಬೀಟ್ ರೋಟ್ ಬೆಳೆ ಬೆಳೆದ ರೈತರ ಕಥೆಯಾಗಿದೆ ಬೀಟ್ರೋಟ್ ಬೆಳೆ ಕೆ,ಜಿ ಗೆ ಏಳು–ಎಂಟು ರೂ ಗೆ ಬೆಲೆ ಇಳಿದ ಕಾರಣ ಹಾಕಿದ ಬಂಡವಾಳವು ಬಾರದೆ ರೈತ ಕಂಗಾಲಾಗಿದ್ದಾನೆ.

ತಾಲ್ಲೂಕಿನ ಹೆಗ್ಗಡಹಳ್ಳಿ ಗ್ರಾಮದ ಪ್ರಕಾಶ್ ಎಂಬ ರೈತ ಪತ್ರಿಕೆಯೊಂದಿಗೆ ಸಂಕಷದಟದ ಬಗ್ಗೆ ಅಳಲು ತೊಡಿಕೊಂಡಿದ್ದಾರೆ, ಬಿಟ್ರೋಟ್ ಬೆಳೆಬೆಳೆದು ಲಕ್ಷಾಂತರ ರೂ ನಷ್ಟವಾಗಿದೆ ಬಂಡವಾಳ ಹಾಕಿದ ಹಣವೂ ವಾಪಸದಸು ಬರದಂತಾಗಿದೆ ಬೆಳೆ ಕಿತ್ತು ಹಸುವಿಗೆ ಹಾಕುವ ಪರಿಸ್ಥಿತಿ ಎದುರಾಗಿದೆ ಎಂದರು.

ಬೆಳೆದ ಬೆಳೆ ಕಿತ್ತು ಮಾರುಕಟ್ಟೆಗೆ ಹಾಕಲು ಬರುವ ಅದಾಯ ಕೂಲಿ ಕಾರ್ಮಿಕರಿಗೆ ಕೊಡಲು, ಮಾರುಕಟ್ಟೆ ಗೆ ಸಾಗಿಸಲು ಅಟೊ ಬಾಡಿಗೆಗೆ ಸಾಲುವುದಿಲ್ಲ, ಇನ್ನೂ ರೈತ ಬಿತ್ತನೆ ಬೀಜ, ಗೊಬ್ಬರ ಸೇರಿದಂತೆ ಮೂರು ತಿಂಗಳು ಕಷ್ಟಪಟ್ಟು ಬೆಳೆಗೆ ಉತ್ತಮಬೆಲೆ ಸಿಗಂತಾಗಿದೆ ಎಂದು ರೈತ ಪ್ರಕಾಶ್ ಬೇಸರ ಹೊರಹಾಕಿದರು.

# ಶಾಲಾ ಶಿಬಿರ ಕಾರ್ಯಕ್ರಮ

ಗುಂಡ್ಲುಪೇಟೆ: ತಾಲೂಕಿನ ಕೆಲಸೂರು ವಲಯದ ಬನ್ನಿತಲಾಪುರ ಗ್ರಾಮದಲ್ಲಿ ಸರಕಾರಿ ಉನ್ನತಿಕರಿಸಿದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಅವರಣದಲ್ಲಿ ಕ್ಷೇತ್ರ ಶೀ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಸಂಸ್ಥೆ ವತಿಯಿಂದ ಶಾಲಾ ಶಿಬಿರ ಕಾರ್ಯಕ್ರಮ ನಡೆಯಿತ ಶಾಲೆಯ ಹಿರಿಯ ಮುಖ್ಯ ಶಿಕ್ಷಕ ದೊಡ್ಡಬಸವಯ್ಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ಶಾಲೆಯಲ್ಲಿ ಮಕ್ಕಳಿಗೆ ಧರ್ಮಸ್ಥಳ ಸಂಸ್ಥೆ ಯಿಂದ ಹಲವು ಕಾರ್ಯಕ್ರಮ ಗಳನ್ನುನಡೆಸುತ್ತಿದ್ದು ಪ್ರಬಂಧ ಸ್ಪರ್ಧೆ ಮತ್ತು ಚಿತ್ರಕಲಾ ಸ್ಪರ್ಧೆ ಹಮ್ಮಿ ಕೊಂಡಿದ್ದು ಸುಮಾರು 100 ವಿದ್ಯಾರ್ಥಿಗಳು ಭಾಗವಹಿಸಿದ್ದರು. ಪ್ರಬಂಧ ಸ್ಪರ್ಧೆಯಲ್ಲಿ ವಿಜೇತ 3 ಮಕ್ಕಳಿಗೆ. ಮತ್ತು ಚಿತ್ರಕಲಾ ಸ್ಪರ್ಧೆಯಲ್ಲಿ 3 ವಿದ್ಯಾರ್ಥಿಗಳಿಗೆ ಬಹುಮಾನ ನೀಡಿ ಗೌರವಿಸಲಾಯಿತು. ಈ ಕಾರ್ಯಕ್ರಮದಲ್ಲಿ ವಲಯ ಮೇಲ್ವಿಚಾರಕ ಆದರ್ಶ್, ಶಾಲೆಯ ಸಹ ಶಿಕ್ಷಕರು ಮತ್ತು ಆ ಭಾಗದ ಸೇವಾಪ್ರತಿನಿದಿಗಳು ಮತ್ತು ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು...



# ರಾಜ್ಯ ಸರ್ಕಾರದ ವಜಾಗೆ ಬಿಜೆಪಿ ಆಗ್ರಹ



ಮೈಸೂರು: ರಾಷ್ಟ್ರಪತಿಗಳು ಅಂಕಿತ ಹಾಕಿರುವ ಕೇಂದ್ರ ಸರ್ಕಾರದ ಕಾಯ್ದೆ ವಿರುದ್ಧ ರಾಜ್ಯ ಕಾಂಗ್ರೆಸ್ ಸರ್ಕಾರ ಜಾಹೀರಾತು ನೀಡಿರುವುದು ಒಕ್ಕೂಟ ವ್ಯವಸ್ಥೆಗೆ ವಿರುದ್ಧ ಹಾಗೂ ಸಂವಿಧಾನ ಬಾಹಿರ. ಕೂಡಲೇ ರಾಷ್ಟ್ರಪತಿಗಳು ಮಧ್ಯಪ್ರವೇಶಿಸಿ ರಾಜ್ಯ ಸರ್ಕಾರವನ್ನು ವಜಾಗೊಳಿಸಬೇಕು ಎಂದು ಬಿಜೆಪಿ ವಕ್ತಾರ ಎಂ.ಜಿ.ಮಹೇಶ್ ಆಗ್ರಹಿಸಿದರು.

ನಗರದ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಮನರೇಗಾ ಯೋಜನೆಯಡಿ 500 ಕೋಟಿ ಭ್ರಷ್ಟಾಚಾರ ನಡೆದಿದೆ. ಭ್ರಷ್ಟಾಚಾರದಲ್ಲಿ ಕರ್ನಾಟಕ ಮೂರನೇ ಸ್ಥಾನದಲ್ಲಿದೆ. ಅಲ್ಲದೆ ಯೋಜನೆಯ ಹಣ ಸರಿಯಾಗಿ ಬಳಕೆಯಾಗುತ್ತಿರಲಿಲ್ಲ. ಇದನ್ನು ಮನಗಂಡ ಕೇಂದ್ರ ಸರ್ಕಾರ ಗ್ರಾಮೀಣ ಭಾಗದ ಅಭಿವೃದ್ಧಿಯೊಂದಿಗೆ ವಿಕಸಿತ ಭಾರತಕ್ಕೆ ವಿಬಿ ಜೀ ರಾಮ್ ಜೀ ಕಾಯ್ದೆ ಜಾರಿಗೊಳಿಸಿದೆ. ರಾಷ್ಟ್ರಪತಿಗಳ ಅನುಮೋದನೆಯೊಂದಿಗೆ ಜಾರಿಗೆ ಬರುವ ಸಂವಿಧಾನಾತ್ಮಕ ಕಾಯ್ದೆಯನ್ನು ರಾಜ್ಯ ಸರ್ಕಾರ ವಿರೋಧಿಸುವಂತಿಲ್ಲ. ಈ ಕುರಿತು ಸುಪ್ರೀಂ ಕೋರ್ಟ್ ಆದೇಶವೇ ಇದೆ. ಸರ್ಕಾರದ ಜಾಹೀರಾತುಗಳು ರಾಜಕೀಯವಾಗಿ ತಟಸ್ಥವಾಗಿರಬೇಕು. ಆಡಳಿತದಲ್ಲಿರುವ ಪಕ್ಷಕ್ಕೆ ವಿರುದ್ಧವಾಗಿರುವ ಸರ್ಕಾರ ರಾಜಕೀಯ ಪಕ್ಷಗಳನ್ನು ನಕಾರಾತ್ಮಕವಾಗಿ ಬಿಂಬಿಸಬಾರದು ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ. ಆದರೂ ರಾಜ್ಯ ಸರ್ಕಾರ ರಾಜಕೀಯ ಉದ್ದೇಶದ ಜಾಹೀರಾತುಗಳನ್ನು ಪ್ರಕಟಿಸಿದ್ದು, ಇದು ನ್ಯಾಯಾಲಯದ ಆದೇಶಕ್ಕೂ ವಿರುದ್ಧವಾಗಿದೆ ಎಂದು ಅವರು ದೂರಿದರು.

ರಾಜ್ಯ ಸರ್ಕಾರದ ಜಾಹೀರಾತುಗಳು ಕೇಂದ್ರ ಸರ್ಕಾರದ ವಿರುದ್ಧ ಅತಿರೇಕದ ಟೀಕೆಗಳನ್ನು ಒಳಗೊಂಡಿದ್ದು, ಸುಳ್ಳು ಮಾಹಿತಿ ಹರಡುವ ಪ್ರಯತ್ನವಾಗಿದೆ. ರಾಜ್ಯ ತೆರಿಗೆದಾರರ ಹಣವನ್ನು ಬಳಸಿಕೊಂಡು ರಾಜಕೀಯ ದ್ವೇಷ ಸಾಧಿಸಲಾಗುತ್ತಿದೆ. ಇದು ಆರ್ಟಿಕಲ್ 356ರ ಉಲ್ಲಂಘನೆಯಾಗಿದ್ದು, ರಾಷ್ಟ್ರಪತಿಗಳು ಕೂಡಲೇ ಮಧ್ಯಪ್ರವೇಶಿಸಿ ಸರ್ಕಾರವನ್ನು ವಜಾಗೊಳಿಸಬೇಕೆಂದು ಒತ್ತಾಯಿಸಿದರು.ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಈ ಜಾಹೀರಾತು ನೀಡಲಾಗಿದ್ದು, ಕೇಂದ್ರ ಸರ್ಕಾರದ ವಿರುದ್ಧ ಜನರನ್ನು ಎತ್ತಿಕಟ್ಟುವ ಉದ್ದೇಶ ಇದರಲ್ಲಿ ಸ್ಪಷ್ಟವಾಗಿದೆ.

> ಕಾಯ್ದೆ ಕುರಿತು ವಿಶೇಷ ಅಧಿವೇಶನ ನಡೆಸಿ ಚರ್ಚೆ ನಡೆಸಿದ ಬಳಿಕವೂ ಜಾಹೀರಾತು ನೀಡಿ ಸಾರ್ವಜನಿಕರ ತೆರಿಗೆ ಹಣವನ್ನು ಪೋಲು ಮಾಡುವುದು ಎಷ್ಟು ಸರಿ. ರಾಜ್ಯ ಸರ್ಕಾರದ ಈ ನಡೆ ಖಂಡನೀಯ ಹಾಗೂ ಸಂವಿಧಾನ ಬಾಹಿರ.
>
> –ಎಲ್.ನಾಗೇಂದ್ರ ಬಿಜೆಪಿ ನಗರಾಧ್ಯಕ್ಷ

ನರೇಗಾ ಅಡಿಯಲ್ಲಿ ಕೆಲಸ ನೀಡುವ ಜವಾಬ್ದಾರಿ ರಾಜ್ಯ ಸರ್ಕಾರದ್ದೇ ಆಗಿದ್ದು, ಕೇಂದ್ರ ಸರ್ಕಾರ ಹಣ ಒದಗಿಸುತ್ತದೆ. ಕೆಲಸ ನೀಡಲು ವಿಫಲವಾದ ರಾಜ್ಯ ಸರ್ಕಾರ, ಕೇಂದ್ರದ ಮೇಲೆ ಆರೋಪ ಮಾಡುತ್ತಿದೆ. 15ನೇ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಅನುದಾನ ಹಂಚಿಕೆ ನಡೆಯುತ್ತಿದ್ದು, ಕೇಂದ್ರ ಸರ್ಕಾರಕ್ಕೆ ತಾರತಮ್ಯ ಮಾಡುವ ಅಧಿಕಾರವೇ ಇಲ್ಲ. ಆದರೂ ರಾಜ್ಯ ಸರ್ಕಾರ ಅನ್ಯಾಯವಾಗಿದೆ ಎಂದು ಹೇಳಿ ಜನರನ್ನು ದಾರಿ ತಪ್ಪಿಸುತ್ತಿದೆ. ಈ ಎಲ್ಲಾ ವಿಷಯಗಳ ಬಗ್ಗೆ ಕಾನೂನು ಹೋರಾಟ ನಡೆಸಲಾಗುವುದು, ರಾಜ್ಯಪಾಲರಿಗೆ ದೂರು ನೀಡಲಾಗುವುದು. ಸುಳ್ಳು ಜಾಹೀರಾತುಗಳನ್ನು ತಕ್ಷಣ ನಿಲ್ಲಿಸಿ ಜನರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು. ರಾಜ್ಯಪಾಲರು ಸಂವಿಧಾನದ ಸಂರಕ್ಷಕರಾಗಿದ್ದರೂ, ಅವರ ವಿರುದ್ಧ ವಿಧಾನಸಭೆಯಲ್ಲಿ ನಿರ್ಣಯ ಕೈಗೊಂಡಿರುವುದು ಅತಿರೇಕದ ವರ್ತನೆ. ರಾಷ್ಟ್ರಪತಿಗಳಿಂದ ನೇಮಕಗೊಂಡ ರಾಜ್ಯಪಾಲರ ಬಗ್ಗೆ ಈ ರೀತಿಯ ನಡವಳಿಕೆ ಯಾವ ರಾಜ್ಯದಲ್ಲಿಯೂ ಕಂಡುಬಂದಿಲ್ಲ. ರಾಜ್ಯ ಸರ್ಕಾರ ಗಾಂಧೀಜಿಯನ್ನು ಬಳಸಿಕೊಂಡು ಬೃಹನ್ನಳೆ ನಾಟಕ ಮಾಡುತ್ತಿದೆ. ಒಂದು ಕಡೆ ಗಾಂಧೀಜಿ ಸಾರಾಯಿಯ ವಿರುದ್ಧ ಹೋರಾಡಿದ್ದರೆ, ಗಾಂಧೀಜಿಯ ತತ್ವ ಸಿದ್ಧಾಂತದ ವಿರುದ್ಧ ನಡೆದುಕೊಳ್ಳುತ್ತಿದೆ. ಅಬಕಾರಿ ಸಚಿವ ತಿಮ್ಮಾಪುರ 6 ಸಾವಿರ ಕೋಟಿ ವಸೂಲಿ ಮಾಡಿದ್ದು, ಕಾಂಗ್ರೆಸ್ ನಂತಹ ಭ್ರಷ್ಟ ಸರ್ಕಾರವನ್ನು ರಾಜ್ಯ ಹಿಂದೆಂದೂ ಕಂಡಿಲ್ಲ ಎಂದರು. ಗೋಷ್ಠಿಯಲ್ಲಿ ಬಿಜೆಪಿ ನಗರ ಪ್ರಧಾನ ಕಾರ್ಯದರ್ಶಿಗಳಾದ, ಸಿ.ಕೆ.ರುದ್ರಮೂರ್ತಿ, ಸೋಮ ಸುಂದರ್, ವಕ್ತಾರ ಮೋಹನ್, ಮಾಧ್ಯಮ ಪ್ರಮುಖ ಮಹೇಶ್ ರಾಜೇ ಅರಸ್ ಇದ್ದರು.

# ಮಹಾರಾಣಿ ಮಹಿಳಾ ಕಲಾ ಕಾಲೇಜಿನಲ್ಲಿ ಖಾದ್ರಿ ಶಾಮಣ್ಣ ಜನ್ಮ ಶತಮಾನೋತ್ಸವ

ಮೈಸೂರು: ಇಲ್ಲಿನ ಜೆಎಲ್ಬಿ ರಸ್ತೆಯಲ್ಲಿರುವ ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪತ್ರಿಕೋದ್ಯಮ ವಿಭಾಗ ಹಾಗೂ ಮೇಲುಕೋಟೆಯ ಖಾದ್ರಿ ಶಾಮಣ್ಣ ಸ್ಮಾರಕ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ಜನವರಿ 31 ರಂದು ಶನಿವಾರ ಬೆಳಗ್ಗೆ 10.30 ಗಂಟೆಗೆ ಕಾಲೇಜಿನ ಸಭಾಂಗಣದಲ್ಲಿ ಹಿರಿಯ ಸ್ವಾತಂತ್ರ್ಯಯೋಧ, ಹೆಸರಾಂತ ಪತ್ರಕರ್ತ ಖಾದ್ರಿ ಶಾಮಣ್ಣ ಅವರ ಜನ್ಮ ಶತಮಾನೋತ್ಸವ ಸಮಾರಂಭವನ್ನು ಏರ್ಪಡಿಸಲಾಗಿದೆ.



ಖಾದ್ರಿ ಶಾಮಣ್ಣ

ಅಸ್ಸಾಂನ ಸಿಲ್ಚಾರಿನ ಕೇಂದ್ರೀಯ ವಿಶ್ವವಿದ್ಯಾನಿಲಯದ ವಿಶ್ರಾಂತ ಸಮ ಕುಲಪತಿ ಪ್ರೊ.ಕೆ.ವಿ.ನಾಗರಾಜ್ ಅವರು ಸಮಾರಂಭವನ್ನು ಉದ್ಘಾಟಿಸುವರು. ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಅಸೋಸಿಯೇಟ್ ಎಡಿಟರ್ ಅಶ್ವಿನಿ ಶ್ರೀಪಾದ್ ಮಹಿಳಾ ಪತ್ರಕರ್ತರ ದೃಷ್ಟಿಯಲ್ಲಿ ಮಾಧ್ಯಮ ಕುರಿತು ವಿಶೇಷ ಉಪನ್ಯಾಸ ನೀಡುವರು. ಮಹಾರಾಣಿ ಮಹಿಳಾ ಕಲಾ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಎಂ.ಎಸ್.ಅನಿತಾ ಅಧ್ಯಕ್ಷತೆ ವಹಿಸುವರು. ಹಿರಿಯ ಪತ್ರಕರ್ತ ಡಾ. ಕೂಡ್ಲಿ ಗುರುರಾಜ, ಖಾದ್ರಿ ಶಾಮಣ್ಣ ಸ್ಮಾರಕ ಟ್ರಸ್ಟ್ ಅಧ್ಯಕ್ಷ ಎಚ್.ಆರ್.ಶ್ರೀಶ, ಕಾರ್ಯದರ್ಶಿ ಸ್ಮಿತಾ ವೆಂಕಟೇಶ್, ಕಾಲೇಜಿನ ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥೆ ಡಾ.ಅಶ್ವಿನಿ, ಪತ್ರಾಂಕಿತ ವ್ಯವಸ್ಥಾಪಕ ಕೆ.ವೆಂಕಟೇಶ್ ಅವರು ಉಪಸ್ಥಿತರಿರುವರು ಎಂದು ಖಾದ್ರಿ ಶಾಮಣ್ಣ ಸ್ಮಾರಕ ಟ್ರಸ್ಟ್ ಪ್ರಕಟಣೆಯಲ್ಲಿ ತಿಳಿಸಿದೆ.

# ಭಾರತ ಸಂವಿಧಾನದಿಂದ ಸರ್ವರಿಗೂ ಸಾಮಾಜಿಕ ನ್ಯಾಯ : ಶ್ರೀನಿಧಿಕುದರ್

## 77ನೇ ಗಣರಾಜ್ಯೋತ್ಸವ : ಸ್ಕೆಟಿಂಗ್ ಮ್ಯಾರಥಾನ್



ಚಾಮರಾಜನಗರ, ಗಣರಾಜೋತ್ಸವ ಅಂಗವಾಗಿ ನಗರದ ಸ್ಕೆಟಿಂಗ್ ಅಸೋಸಿಯೇಷನ್ ವತಿಯಿಂದ ಸ್ಕೆಟಿಂಗ್ ಮ್ಯಾರಥಾನ್ ನಡೆಯಿತು.

ನಗರದ ಸುಲ್ತಾನ್ ಷರೀಫ್ ವೃತ್ತದ ನಮ್ಮ ಚೆಲುವ ಚಾಮರಾಜನಗರ ನಾಮಫಲಕದ ಮುಂಭಾಗದಲ್ಲಿ ಚಾಲನೆಗೊಂಡು ಅಲ್ಲಿಂದ ದೊಡ್ಡಂಗಡಿ ಬೀದಿ, ನಗರಸಭೆ, ಚಾಮರಾಜೇಶ್ವರ ದೇವಸ್ಥಾನ ರಸ್ತೆ ಮೂಲಕ ಭುವನೇಶ್ವರಿ ವೃತ್ತಕ್ಕೆ ತೆರಳಿ ಕೆಲಕಾಲ ಕರಾಟೆ ಪ್ರದರ್ಶನ, ಸ್ಕೆಟಿಂಗ್ ಪ್ರದರ್ಶನ ನಡೆಯಿತು. ನಂತರ ಬಿ.ರಾಚಯ್ಯ ಜೋಡಿರಸ್ತೆಯ ಮೂಲಕ ಜಿಲ್ಲಾಡಳಿತದ ಮುಖ್ಯಗೇಟ್ ಮುಂಭಾಗಕ್ಕೆ –ತೆರಳಿತು. ಮಕ್ಕಳಿಗೆ ಬಹುಮಾನ, ಪ್ರಶಸ್ತಿ ಪತ್ರ ವಿತರಿಸಲಾಯಿತು. ಉದ್ಯಮಿ ಶ್ರೀನಿಧಿ ಸ್ಕೆಟಿಂಗ್ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿ, 77ನೇ ಗಣರಾಜ್ಯೋತ್ಸವ ಅಂಗವಾಗಿ ಸ್ಕೆಟಿಂಗ್ ಅಸೋಸಿಯೇಷನ್ ವತಿಯಿಂದ ಸ್ಕೆಟಿಂಗ್ ಮಾರಥಾನ್ ಅಯೋಜನೆ ಮಾಡಿರುವುದು ಒಂದು ಸಂತಸದ ಸಂಗತಿಯಾಗಿದೆ. ಗಣರಾಜ್ಯೋತ್ಸವ ದಿನ ಅಂದರೆ ಸಂವಿಧಾನ ಅರ್ಪಣೆ ಮಾಡಿದ ಒಂದು ಐತಿಹಾಸಿಕ ದಿನ. ಭಾರತ ಸಂವಿಧಾನ ದೇಶದ ಸರ್ವರಿಗೂ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯವನ್ನು ಒದಗಿಸಿದೆ. ಸ್ಕೆಟಿಂಗ್ ಸ್ಪರ್ಧೆಯಲ್ಲಿ ಭಾಗವಹಿಸಿರುವ ಮಕ್ಕಳು,. ಸ್ಕೆಟಿಂಗ್, ಶಿಕ್ಷಣದಲ್ಲಿ ಒಳ್ಳೆಯ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತರಲಿ ಎಂದು ಶುಭ ಕೋರಿದರು. ಕಾರ್ಯಕ್ರಮದಲ್ಲಿ ಚೂಡಾ ಅಧ್ಯಕ್ಷ ಮಹಮ್ಮಅಸ್ಕರ್, ಅಂಕುರಂ ಶಾಲೆಯ ಆದರ್ಶ ಅರಸು, ಹಸಿರುಪಡೆ ಸತೀಶ್, ಕೌಶಲ್ಯ ಇಲಾಖೆ ಅನ್ಸಾರ್‌ಖಾನ್, ಸ್ಕೆಟಿಂಗ್, ಕರಾಟೆ ಕೋಚ್ ಫುರ್ಖಾನ್ ಹಾಗೂ ವಿದ್ಯಾರ್ಥಿಗಳು, ಪೋಷಕರು ಭಾಗವಹಿಸಿದ್ದರು.

# ಅಂಬೇಡ್ಕರ್‌ರಿಂದ ಜಗತ್ತೇ ಮೆಚ್ಚುವ ಸಂವಿಧಾನ



ಚಾಮರಾಜನಗರ: ನಗರದ ಸರ್ಕಾರಿ ಪದವಿ ಪೂರ್ವ ಬಾಲಕಿಯರ ಕಾಲೇಜು ಪ್ರೌಢಶಾಲೆ ವಿಭಾಗ ಮತ್ತು ಸರಕಾರಿ ಬಾಲಕರ ಪದವಿಪೂರ್ವ ಕಾಲೇಜು ಗಳ ಆಶ್ರಯದಲ್ಲಿ ಆಯೋಜಿಸಲಾಗಿದ್ದ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಸಿ. ಪುಟ್ಟರಂಗಶೆಟ್ಟಿ ಧ್ವಜಾರೋಹಣ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು ಮಹಾತ್ಮ ಗಾಂಧಿ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದ ಅವರು. ಅಂಬೇಡ್ಕರ್ ಇಡೀ ಜಗತ್ತು ಮೆಚ್ಚುವ ಸಂವಿಧಾನವನ್ನು ರಚಿಸಿದ್ದಾರೆ. ಈ ಮೂಲಕ ಭಾರತ ದೇಶದ ಆಡಳಿತ ವ್ಯವಸ್ಥೆಗೆ ಹೊಸ ಆಯಾಮ ತಂದುಕೊಟ್ಟಿದ್ದಾರೆ. ಹೀಗಾಗಿ ನಾವೆಲ್ಲರೂ ಅಂಬೇಡ್ಕರ್ ಅವರನ್ನು ಸದಾ ಸ್ಮರಿಸಿಕೊಂಡು, ಅವರು ಸಾಗಿ ಬಂದ ದಾರಿಯಲ್ಲಿ ನಡೆಯಬೇಕಿದೆ ಎಂದರು.

ಅಂಬೇಡ್ಕರ್ ಅವರ ಬರಹ ಮತ್ತು ಭಾಷಣಗಳನ್ನು ವಿದ್ಯಾರ್ಥಿಗಳು ವಿದ್ಯಾವಂತರು ಅಧ್ಯಯನ ಮಾಡಬೇಕು. ಅವರ ಆದರ್ಶಗಳನ್ನು ಪಾಲಿಸಿದರೆ ಅವರನ್ನು ಗೌರವಿಸದಂತಾಗುತ್ತದೆ ಎಂದರು. ಪದವಿ ಪೂರ್ವಬಾಲಕಿಯರ ಕಾಲೇಜ್ ಉಪಾಪ್ರಾಂಶುಪಾಲ ಶೀಲಾರಾಣ, ಪ್ರಾಂಶುಪಾಲ ಜಯಕುಮಾರ್, ಸರಕಾರಿ ಬಾಲಕರ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲ ನಾರಾಯಣ್, ಪ್ರೌಢಶಾಲೆ ವಿಭಾಗದ ಮುಖ್ಯ ಶಿಕ್ಷಕ ಮಹದೇವಸ್ವಾಮಿ, ಕಾಲೇಜಿನ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಕಲೀಮುಲ್ಲಾಸರಕಾರಿ ಪದವಿಪೂರ್ವ ಕಾಲೇಜಿನ ನಿವೃತ ಪ್ರಾಂಶುಪಾಲ ಎಂ,ಸೋಮಣ್ಣ, ಉಪನ್ಯಾಸಕರಾದ ಮಧು, ರಂಗಸ್ವಾಮಿ, ಮಹದೇವಸ್ವಾಮಿ, ಕವಿತಾ, ಶೀಲಾ,ದೈಹಿಕ ಶಿಕ್ಷಕ ಲಿಂಗರಾಜು, ಸೇರಿದಂತೆ ಉಪನ್ಯಾಸಕರು ವಿದ್ಯಾರ್ಥಿಗಳು ಹಾಜರಿದ್ದರು.

# ನಿವಾಸಿಗಳಿಂದ ತಹಸೀಲ್ದಾರ್‌ಗೆ ಮನವಿ



ಚಾಮರಾಜನಗರ, ತಾಲೂಕಿನ ಎಚ್.ಡಿ.ಫಾರೆಸ್ಟ್ ಮತ್ತು ಪುಣಜನೂರು ಫಾರೆಸ್ಟ್ ಜಮೀನು ಸಾಗುವಳಿ ಮಾಡುತ್ತಿರುವ ನಗರದ ಡಾ.ಬಿ.ಆರ್. ಅಂಬೇಡ್ಕರ್ ಬಡಾವಣೆಯ ನಿವಾಸಿಗಳು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಡಿ.ಜಿ.ಸಾಗರ್ ಬಣದ ಜಿಲ್ಲಾ ಸಂಚಾಲಕ ಸಿ. ಎಂ.ಶಿವಣ್ಣ ಅವರ ನೇತೃತ್ವದಲ್ಲಿ ತಹಸೀಲ್ದಾರ್ ಗಿರಿಜಾ ಅವರಿಗೆ ಮನವಿ ಸಲ್ಲಿಸಲಾಯಿತು.

ತಾಲೂಕಿನ ಎಚ್.ಡಿ.ಫಾರೆಸ್ಟ್ ಮತ್ತು ಪುಣಜನೂರು ಫಾರೆಸ್ಟ್ ಜಮೀನಿನಲ್ಲಿ ಸಾಗುವಳಿ ಮಾಡುತ್ತಿರುವ ಬಗ್ಗೆ ಡಾ.ಬಿ.ಆರ್.ಅಂಬೇಡ್ಕರ್ ಬಡಾವಣೆಯ ನಿವಾಸಿಗಳು ಜಿಲ್ಲಾಧಿಕಾರಿ ಗಳಿಗೆ ಸಲ್ಲಿಸಿದ ಮನವಿಯನ್ನು ಪರಿಗಣಿಸಿ ಮುಂದಿನ ಕ್ರಮಕ್ಕಾಗಿ ನಿಮಗೆ ಕಳುಹಿಸಿಕೊಟ್ಟಿರುವ ವರದಿ ಬಗ್ಗೆ ಯಾವ ಕ್ರಮಕೈಗೊಂಡಿದ್ದೀರಿ.ಎಂಬುದರ ಬಗ್ಗೆ ಮಾಹಿತಿ ಕೊಡುವಂತೆ ತಹಸೀಲ್ದಾರ್ ಅವರಿಗೆ ಸಲ್ಲಿಸಿರುವ ಮನವಿಯಲ್ಲಿ ನಿವಾಸಿಗಳ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಆಟೋ ಉಮೇಶ್, ಚಂದ್ರು, ಚಿನ್ನಸ್ವಾಮಿ, ಪರಶಿವಮೂರ್ತಿ ಇತರರು ಹಾಜರಿದ್ದರು.

ಕರ್ನಾಟಕ ಸರ್ಕಾರ
**ಜಿಲ್ಲಾ ಆಯುಷ್ ಕಛೇರಿ**
ಎಸ್.ಬಿ.ಐ. ಬ್ಯಾಂಕ್‌ಎದುರು, ಬೃಂದಾವನ ಬಡಾವಣೆ, ಕೆ.ಆರ್.ಎಸ್. ರಸ್ತೆ, ಮೈಸೂರು–570020.
Email: dao.mysore09@gmail.com Ph/Fax: 0821-2512962
ಸಂಖ್ಯೆ:ಜಿಆಕಮೈ/55/ತಾ.ಹೊ.ಗು/2025–26 ದಿನಾಂಕ: 23.01.2026

**ಸಂಕ್ಷಿಪ್ತ ಇ–ಟೆಂಡರ್ ಪ್ರಕಟಣೆ**

ಜಿಲ್ಲಾ ಆಯುಷ್ ಕಛೇರಿ, ಮೈಸೂರು ಇಲ್ಲಿಗೆ ಸರ್ಕಾರದಿಂದ ಮಾನ್ಯತೆ ಪಡೆದ ಮಾನವ ಸಂಪನ್ಮೂಲ ಸಂಸ್ಥೆ ವತಿಯಿಂದ ಹೊರಗುತ್ತಿಗೆ ಸಿಬ್ಬಂದಿ ಸೇವೆಯನ್ನು ಇ–ಟೆಂಡರ್ ಮೂಲಕ ಪಡೆಯುವ ಸಂಬಂದ ಇ–ಪ್ರಕ್ಯೂರ್‌ಮೆಂಟ್ ಮುಖಾಂತರ ಇ–ಟೆಂಡರ್ ಕರೆಯಲಾಗಿದೆ. ಟೆಂಡರ್ ಅವಧಿ ಕಾರ್ಯದೇಶ ನೀಡಿದ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಇರುತ್ತದೆ. ಟೆಂಡರ್ ವಿವರಗಳಿಗಾಗಿ ವೆಬ್‌ಸೈಟ್ http://www.kppp.karnataka.gov.in ನ್ನು ಗಮನಿಸುವುದು ಟೆಂಡರ್ ವಿವರಗಳನ್ನು ಅಪ್ಲೋಡ್ ಮಾಡಿಕೊಳ್ಳಲು ಕೊನೆಯ ದಿ: 06.02.2026ರ ಸಂಜೆ 5.00 ಗಂಟೆವರೆಗೆ ಕಾಲಾವಕಾಶವಿರುತ್ತದೆ. ಹಾಗೂ ಟೆಂಡರ್ ತೆರೆಯುವ ದಿ: 09.02.2026ರಂದು ಬೆಳಿಗ್ಗೆ 11.00 ಗಂಟೆಗೆ ಮತ್ತು ಇ.ಎಂ.ಡಿ ಮೊತ್ತ ರೂ.61,000.00 (ರೂಪಾಯಿ ಆರವತ್ತೊಂದು ಸಾವಿರ ಮಾತ್ರ)ಗಳನ್ನು ನಿಗದಿಪಡಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ಜಿಲ್ಲಾ ಆಯುಷ್ ಕಛೇರಿ, ಎಸ್.ಬಿ.ಐ. ಬ್ಯಾಂಕ್ ಎದುರು, ಬೃಂದಾವನ ಬಡಾವಣೆ, ಕೆ.ಆರ್.ಎಸ್. ರಸ್ತೆ, ಮೈಸೂರು–570020. ಇಲ್ಲಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ.

**ಸಹಿ/– ಜಿಲ್ಲಾ ಆಯುಷ್ ಅಧಿಕಾರಿ, ಜಿಲ್ಲಾ ಆಯುಷ್ ಕಛೇರಿ, ಮೈಸೂರು**
DIPR/DDMYS/1568/KSMCA/891/2025-26

ಶಾಸಕ ಹೆಚ್.ಟಿ.ಮಂಜು ಹೇಳಿಕೆ

# ದೇಶದ ಪ್ರತಿಯೊಬ್ಬರೂ ಸಾಮೂಹಿಕ ಜವಾಬ್ದಾರಿ ತೆಗೆದುಕೊಳ್ಳಿ

ಕೆ.ಆರ್.ಪೇಟೆ, ಭಾರತವು ತನ್ನದೇ ಆದ ಸಂವಿಧಾನವನ್ನು ಅರ್ಪಿಸಿಕೊಂಡು, ಸ್ವತಂತ್ರವಾಗಿ ನಮ್ಮನ್ನು ನಾವೇ ಆಡಳಿತ ಮಾಡಲು ಆರಂಭಿಸಿದ ದಿನವೇ ಪವಿತ್ರ ಗಣರಾಜ್ಯೋತ್ಸವ ದಿನವಾಗಿದೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನದಲ್ಲಿ ಪ್ರತಿಪಾದಿಸಲಾದ ಮೌಲ್ಯಗಳು ಹಾಗೂ ಪ್ರಜಾಪ್ರಭುತ್ವದ ಏಕತೆ ಮತ್ತು ಸಾಮಾಜಿಕ ನ್ಯಾಯವನ್ನು ಎತ್ತಿ ಹಿಡಿಯಲು ದೇಶದ ಪ್ರತಿಯೊಬ್ಬರೂ ಸಾಮೂಹಿಕ ಜವಾಬ್ದಾರಿಯನ್ನು ತೆಗೆದುಕೊಳ್ಳಬೇಕಾಗಿದೆ ಎಂದು ಶಾಸಕ ಹೆಚ್.ಟಿ.ಮಂಜು ಹೇಳಿದರು.

ತಾಲ್ಲೂಕು ಆಡಳಿತದ ವತಿಯಿಂದ ಪಟ್ಟಣದ ನಾಲ್ವಡಿ ಕೃಷ್ಣರಾಜ ಒಡೆಯರ್ ತಾಲ್ಲೂಕು ಕ್ರೀಡಾಂಗಣದಲ್ಲಿ ಆಯೋಜಿಸಿದ್ದ 77ನೇ ಭಾರತ ಗಣರಾಜ್ಯೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಮ್ಮ ಸಂವಿಧಾನ ಕರಡು ಸಮಿತಿಯ ಅಧ್ಯಕ್ಷರಾದ ಡಾ.ಬಿ.ಆರ್.ಅಂಬೇಡ್ಕರ್ ಅವರು ಬೇರೆ ಬೇರೆ ದೇಶಗಳ ಸಂವಿಧಾನವನ್ನು ಅಧ್ಯಯನ ಮಾಡಿ ನಮ್ಮ ದೇಶಕ್ಕೆ ಹೊಂದಿಕೆಯಾಗುವ ಅಂಶಗಳನ್ನು ತೆಗೆದುಕೊಂಡು ಸುಮಾರು 3ವರ್ಷಗಳ ಕಾಲ ದೇಶದ ಎಲ್ಲಾ ಜನತೆಗೂ ಸಾಮಾಜಿಕ ನ್ಯಾಯ ಒದಗಿಸುವಂತಹ ಸರ್ವ ಶ್ರೇಷ್ಠ ಸಂವಿಧಾನವನ್ನು ಬರೆದು ಬರೆದು ದೇಶಕ್ಕೆ ಕೊಟ್ಟರು. ಈ ಸಂವಿಧಾನವನ್ನು 1950 ಜ.26 ಸಂವಿಧಾನ ಸಮರ್ಪಣೆ ಮಾಡಲಾಯಿತು. ಅಂಬೇಡ್ಕರ್ ಅವರು ಬರೆದ ಸಂವಿಧಾನದಿಂದ ದೇಶದೆಲ್ಲೆಡೆ ಜನರು ಶಾಂತಿ, ಸಹಬಾಳ್ವೆ ಜೀವನ ನಡೆಸುತ್ತಿದ್ದಾರೆ. ದೇಶದಲ್ಲಿ ಸ್ವಾತಂತ್ರ್ಯ ಮತ್ತು ಸಮಾನವಾಗಿ ಬದುಕುವ ಹಕ್ಕನ್ನು ಭಾರತ ಸಂವಿಧಾನ ನೀಡಿದೆ.ದೇಶದ ಪ್ರತಿಯೊಬ್ಬರೂ ಕೂಡ ಸಂವಿಧಾನ ಗೌರವಿಸುವ ಕೆಲಸ ಮಾಡಬೇಕು ಎಂದರು. ಪಟ್ಟಣದ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಿಂದ ತಾಲೂಕು ಕ್ರೀಡಾಂಗಣದವರೆಗೆ ವಿವಿಧ ಸಂಸ್ಕೃತಿಕ ಕಲಾ ತಂಡಗಳು ಹಾಗೂ ಶಾಲಾ ಮಕ್ಕಳಿಂದ ಮಹಾತ್ಮ ಗಾಂಧೀಜಿ, ಡಾ: ಬಿ.ಆರ್ ಅಂಬೇಡ್ಕರ್, ಸಂಗೊಳ್ಳಿ ರಾಯಣ್ಣ ಸುಭಾಷ್ ಚಂದ್ರಬೋಸ್ ಮತ್ತಿತರ ಗಣ್ಯರ ಭಾವಚಿತ್ರಗಳನ್ನು ಅದ್ದೂರಿ ಮೆರವಣಿಗೆ ಮೂಲಕ ಕರೆತರಲಾಯಿತು.




ತಾಲ್ಲೂಕಿನಲ್ಲಿ ಉತ್ತಮ ಕರ್ತವ್ಯ ನಿರ್ವಹಿಸಿ ಸಾರ್ವಜನಿಕರಿಂದ ಪ್ರಶಂಗೆ ಪಾತ್ರರಾಗಿರುವ ಕಸಬಾ ಉಪ ತಹಸೀಲ್ದಾರ್ ಜ್ಞಾನೇಶ್, ಪೊಲೀಸ್ ಸಿಬ್ಬಂದಿ ಜಯವರ್ಧನ್, ಬಂಡಿಹೊಳೆ ಗ್ರಾ.ಪಂ.ಪಿ.ಡಿ.ಓ ನೂತನ್, ಗ್ರಾಮಲೆಕ್ಕಾಧಿಕಾರಿ ಮಲ್ಲಿಕಾರ್ಜುನ್ ಅವರಿಗೆ ತಾಲೂಕು ಆಡಳಿತ ವತಿಯಿಂದ ಗಣರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕರ್ನಾಟಕ ರಾಜ್ಯ ಕೈಮಗ್ಗ ನಿಗಮ ಮಂಡಳಿಯ ಅಧ್ಯಕ್ಷ ಬಿ.ನಾಗೇಂದ್ರ ಕುಮಾರ್, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಗ್ರಹಾರಬಾಚಹಳ್ಳಿ ಎ.ಬಿ ಕುಮಾರ್, ಟಿಎಪಿಸಿಎಂಎಸ್ ಅಧ್ಯಕ್ಷ ಬಲದೇವ್, ತಾ.ಪಂ ಇಓ ಸುಷ್ಮ, ಕ್ಷೇತ್ರ ಶಿಕ್ಷಣಾಧಿಕಾರಿ ವೈ.ಕೆ. ತಿಮ್ಮೇಗೌಡ, ಚೆಸ್ಕಾಂ ಇಇ ಪುಟ್ಟಸ್ವಾಮೀಗೌಡ, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಸ್.ಆರ್ ಆನಂದ್‌ಕುಮಾರ್, ಪೊಲೀಸ್ ಇನ್ಸ್‌ಪೆಕ್ಟರ್ ಸುಮಾರಾಣಿ, ಆನಂದೇಗೌಡ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ನಡೆಸಿಕೊಟ್ಟ ಪಥಸಂಚಲನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿದರು. ಸಾಂಸ್ಕೃತಿಕ ಕಾರ್ಯಕ್ರಮಗಳು ಸಾರ್ವಜನಿಕರ ಗಮನ ಸೆಳೆದವು

## ಫೆ. 1 ರಂದು ಚಂಡಿಕಾ ಹೋಮ

ಮಂಡ್ಯ: ಶ್ರೀಕಾಳಿಕಾಂಬ ಸೇವಾ ಸಮಿತಿ ವತಿಯಿಂದ 20ನೇ ವರ್ಷದ ನವ ಚಂಡಿಕಾ ಮಹಾಯಾಗವನ್ನು ಕಾಳಿಕಾಂಬ ದೇವಾಲಯದ ಆವರಣದಲ್ಲಿ ಜ.31 ಮತ್ತು ಫೆ.1ರಂದು ಆಯೋಜಿಸಲಾಗಿದೆ.

ನಗರದ ಗುತ್ತಲು ಬಡಾವಣೆಯ ಬಲಮುರಿ ಗಣಪತಿ ದೇವಾಲಯದ ಅರ್ಚಕರು ಹಾಗೂ ಪೂರ್ಣಪ್ರಜ್ಞಾ ಕೇಂದ್ರದ ಅರ್ಜುನ್ ಎಸ್. ರಾವ್ ಶಾಸ್ತ್ರೋಕ್ತ ವಿಧಿ ವಿಧಾನಗಳಿಂದ ನವಚಂಡಿಕಾ ಮಹಾಯಾಗ ನೆರವೇರಿಸುವರು. ಜ.31ರಂದು ಸಂಜೆ 5.30ಕ್ಕೆ ಸಾಮೂಹಿಕ ದೇವತಾ ಪ್ರಾರ್ಥನೆ, ಗುರು ಗಣಪತಿ ಪೂಜೆ, ಪುಣ್ಯಾಹ ವಾಚನ, ಋತ್ವಿಕ್ ವರ್ಣನೆ, ನವಚಂಡಿಕಾ ಪಾರಾಯಣ, ರಾತ್ರಿ 8ಕ್ಕೆ ಮಹಾಸುದರ್ಶನ ಹೋಮ, ಪೂರ್ಣಾಹುತಿ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಫೆ.1ರಂದು ಬೆಳಿಗ್ಗೆ 6ಕ್ಕೆ ಶ್ರೀಕಾಳಿಕಾಂಬ ದೇವಿ ಸನ್ನಿಧಿಯಲ್ಲಿ ಫಲಪಂಚಾಮೃತ ಸಹಿತ ನವಕ ಕಳಶಾಭಿಷೇಕ, 8.30ಕ್ಕೆ ನವಚಂಡಿಕಾ



ಮಹಾಯಾಗ ಪ್ರಾರಂಭ, 12ಕ್ಕೆ ಮಹಾಪೂಜೆ, ಮಹಾಮಂಗಳಾರತಿ, ಪೂರ್ಣಾಹುತಿ, ಸುವಾಸಿನಿ, ಕನ್ನಿಕಾ ಪೂಜೆ, ಶ್ರೀದೇವಿ ಮೂಲ ಸನ್ನಿಧಿಯಲ್ಲಿ ಮಹಾನೈವೇದ್ಯ ಸಮರ್ಪಣೆ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಈ ಮಹಾಯಾಗಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾಧಿಗಳು ಆಗಮಿಸಿ ಪ್ರಸಾದ ಸ್ವೀಕರಿಸಿ ಕೃತಾರ್ಥರಾಗುವಂತೆ ಆಡಳಿತ ಮಂಡಳಿ ಮನವಿ ಮಾಡಿದೆ.

# ಅಕ್ರಮ ಖಾಸಗಿ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯ

ಚಾಮರಾಜನಗರ, ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಖಾಸಗಿ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕನ್ನಡಿಗರ ವಿಜಯಸೇನೆ ಜಿಲ್ಲಾ ಘಟಕದ ವತಿಯಿಂದ ಗುರುವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.




ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಜಮಾಯಿಸಿದ ಪ್ರತಿಭಟನಾಕರರು ಅಲ್ಲಿಂದ ಮೆರವಣಿಗೆ ಮೂಲಕ ಶ್ರೀ ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ ಮಾರ್ಗವಾಗಿ ಜಿಲ್ಲಾಡಳಿತ ಭವನಕ್ಕೆ ತೆರಳಿ ಕೆಲಕಾಲ ಪ್ರತಿಭಟನೆ ನಡೆಸಿ,ವಿವಿಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಅಪರ ಜಿಲ್ಲಾಧಿಕಾರಿ ಜವರೇಗೌಡ ಅವರ ಮೂಲಕ ಮುಖ್ಯಮಂತ್ರಿ ಹಾಗೂ ಶಾಲಾ ಶಿಕ್ಷಣ ಸಚಿವರಿಗೆ ಮನವಿಪತ್ರ ಸಲ್ಲಿಸಿದರು.

**▸▸ ಕನ್ನಡಿಗರ ವಿಜಯಸೇನೆ ಜಿಲ್ಲಾ ಘಟಕದಿಂದ ನಗರದಲ್ಲಿ ಪ್ರತಿಭಟನೆ**

ಚಾಮರಾಜನಗರ ಜಿಲ್ಲೆಯೊಳಗೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಳ ಸಮಗ್ರ ತನಿಖೆ ನಡೆಸಬೇಕು. ಕಾನೂನುಬಾಹಿರವಾಗಿ ಮತ್ತು ನಿಯಮ ಉಲ್ಲಂಘಿಸಿ ನಡೆಯುತ್ತಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಮಾನ್ಯತೆಯನ್ನು ಕೂಡಲೇ ರದ್ದು ಪಡಿಸಬೇಕು. ಅಕ್ರಮ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಯಾವುದೇ ರೀತಿಯ ವಿನಾಯಿತಿ ಅಥವಾ ರಕ್ಷಣೆ ನೀಡಬಾರದು.ಅಕ್ರಮಗಳಿಗೆ ಪರೋಕ್ಷ ಅಥವಾ ಪ್ರತ್ಯಕ್ಷವಾಗಿ ಸಹಕರಿಸಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು. ವಿದ್ಯಾರ್ಥಿಗಳ ಭವಿಷ್ಯ ಮತ್ತು ಜೀವದ ಸುರಕ್ಷತೆ ದೃಷ್ಟಿಯಿಂದ ತಕ್ಷಣವೇ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಚಾಮರಾಜನಗರ ಜಿಲ್ಲೆಯೊಳಗೆ ಅನೇಕ ಖಾಸಗಿ ಶಿಕ್ಷಣ ಸಂಸ್ಥೆಗಳು ಸರ್ಕಾರದ ನಿಯಮಾವಳಿಗಳನ್ನು ಉಲ್ಲಂಘಿಸಿ, ಅಗತ್ಯವಾದ ಅನುಮತಿಗಳು, ಮಾನ್ಯತೆಗಳು, ಮೂಲಭೂತ ಸೌಕರ್ಯಗಳು ಇಲ್ಲದೆ ಅಕ್ರಮವಾಗಿ ಕಾರ್ಯನಿರ್ವಹಿಸುತ್ತಿರುವುದು ನಮ್ಮ ಗಮನಕ್ಕೆ ಬಂದಿದೆ. ವಿಶೇಷವಾಗಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಸಂಬಂಧಪಟ್ಟ ಇಲಾಖೆಗಳ ಬೈಲಾಗಳನ್ನು ಲೆಕ್ಕಿಸದೇ, ಕಾನೂನುಬಾಹಿರವಾಗಿ ಈ ಸಂಸ್ಥೆಗಳು ನಡೆಯುತ್ತಿರುವುದು ಗಂಭೀರ ವಿಚಾರವಾಗಿದೆ. ಜಿಲ್ಲೆಯ ಬಹುತೇಕ ಖಾಸಗಿ ಶಿಕ್ಷಣ ಸಂಸ್ಥೆಗಳು ಅಗ್ನಿ ಸುರಕ್ಷತೆ, ಕನ್ನಡ ಭದ್ರತೆ, ವಿದ್ಯಾರ್ಥಿಗಳ ಜೀವ ರಕ್ಷಣೆ ಸಂಬಂಧಿಸಿದ ಯಾವುದೇ ಮಾನದಂಡಗಳನ್ನು ಪಾಲಿಸದೇ ತಾತ್ಸಾರತೆಯಿಂದ ವರ್ತಿಸುತ್ತಿರುವುದು ಅತ್ಯಂತ ಆತಂಕಕಾರಿ ವಿಷಯವಾಗಿದೆ ಎಂದು ದೂರಿದರು.

ಪ್ರತಿಭಟನೆಯಲ್ಲಿ ಸಂಸ್ಥಾಪಕ ರಾಜ್ಯಾಧ್ಯಕ್ಷ ಎಂ.ಎಸ್.ವಿಜಯಕುಮಾರ್, ಜಿಲ್ಲಾಧ್ಯಕ್ಷ ಮಂಜು. ಎಂ.ನಾಯಕ್, ಕಾರ್ಯದರ್ಶಿ ಶಿವು, ಹರದನಹಳ್ಳಿ ಚಂದ್ರಶೇಖರ್, ಕೃಷ್ಣ, ರಂಜಿತ್, ನವೀನ್, ಹೊಂಡರಬಾಳು ವಾಸು, ನಗರಸಭೆ ಮಾಜಿಸದಸ್ಯ ಶಿವರಾಜು, ಎಸ್.ಪಿ.ಮಹೇಶ್ ಸೇರಿದಂತೆ ಕಾರ್ಯಕರ್ತರು, ಪದಾಧಿಕಾರಿಗಳು ಭಾಗವಹಿಸಿದ್ದರು.

## ಪಕ್ಷದ ಸಂಘಟನೆಗೆ ಆದ್ಯತೆ ನೀಡಿ"–ಒಬಿಸಿ ಜಿಲ್ಲಾಧ್ಯಕ್ಷ ಚೇತನ್‌ಕುಮಾರ್



ಚಾಮರಾಜನಗರ, ಜಿಲ್ಲಾ, ತಾಲೂಕು ಪಂಚಾಯತಿ ನಗರಸಭೆ, ಪುರಸಭೆ, ಪಟ್ಟಣಪಂಚಾಯಿತಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲು ಪಕ್ಷವನ್ನು ಸಂಘಟನೆ ಮಾಡಬೇಕು ಎಂದು ಒಬಿಸಿ ವಿಭಾಗದ ಜಿಲ್ಲಾಧ್ಯಕ್ಷ ಚೇತನ್‌ಕುಮಾರ್ ಹೇಳಿದರು.

ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ನಡೆದ ಹಿಂದುಳಿದ ವರ್ಗಗಳ ವಿಭಾಗದ ಬ್ಲಾಕ್ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಪದಾಧಿಕಾರಿಗಳ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಮುಂಬರುವ ಜಿಲ್ಲಾ, ತಾಲ್ಲೂಕು ಪಂಚಾಯತ್ ನಗರಸಭೆ, ಪುರಸಭೆ, ಪಟ್ಟಣಪಂಚಾಯಿತಿ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದ ಗದ್ದುಗೆಗೇರಲು ಜಿಲ್ಲೆಯ ಎಲ್ಲ ಹಿಂದುಳಿದ ವರ್ಗಗಳ ವಿಭಾಗದ 8 ಬ್ಲಾಕ್ ಅಧ್ಯಕ್ಷರು ಉಪಾಧ್ಯಕ್ಷರು ಈಗಿನಿಂದಲೇ ಕಾರ್ಯಪ್ರವೃತ್ತರಾಗಬೇಕು ಪಕ್ಷದ ಬಲವರ್ಧನೆಗಾಗಿ ಒಂದೊಂದು ಬ್ಲಾಕ್ ನಲ್ಲಿ 30 ಮಂದಿ ಗುರ್ತಿಸಿ, ಅವರನ್ನು ಆಯ್ಕೆ ಪಟ್ಟಿ ಮಾಡಿ ಎಂದು ಬ್ಲಾಕ್ ಅಧ್ಯಕ್ಷರುಗಳಿಗೆ ಸೂಚಿಸಿದರು, ಬ್ಲಾಕ್ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಪದಾಧಿಕಾರಿಗಳು ಪ್ರತಿ ಸಭೆಗಳಿಗೆ ಹಾಜರಾಗಬೇಕು. ಪಕ್ಷದಲ್ಲಿ ನಿಷ್ಠೆಯಿಂದ ದುಡಿದ ಕಾರ್ಯಕರ್ತರಿಗೆ ಮುಂದಿನದಿನಗಳಲ್ಲಿ ಅವರ ಸೇವೆಯನ್ನು ಪರಿಗಣ ಸಿ ಪಕ್ಷ ಉನ್ನತಸ್ಥಾನಮಾನಕೊಡಲಿದೆ ಎಂದರು. ಪಕ್ಷ ಸಂಘಟನೆಗೆ ಬೇಕಾದ ಸೂಕ್ತ ಸಲಹೆ ಸಹಕಾರಗಳನ್ನು ಒಬಿಸಿ ವತಿಯಿಂದ ನೀಡಲಾಗುವುದು ಎಂದರು. ಹಿಂದುಳಿದ ವರ್ಗಗಳ ಬ್ಲಾಕ್ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಪದಾಧಿಕಾರಿಗಳು ಹಾಜರಿದ್ದರು.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಮೋರ್ಚಾ ಸದೃಢಗೊಂಡರೆ ಗೆಲುವು

## ಎನ್.ಮಹೇಶ್ ಕರೆ । ಜಿಲ್ಲಾ ಬಿಜೆಪಿ ಎಸ್‌ಸಿ ಮೋರ್ಚಾ ಸಭೆ



ಚಾಮರಾಜನಗರ, ಜಿಲ್ಲೆಯಲ್ಲಿ ಬಿಜೆಪಿ ಗೆಲ್ಲಿಸಬೇಕಾದರೆ ಎಸ್‌ಸಿ ಮೋರ್ಚಾ ಬಹಳ ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಮಾಜಿ ಸಚಿವ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಹೇಳಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಎಸ್‌ಸಿ ಮೋರ್ಚಾದ ನೂತನ ಪದಾಧಿಕಾರಿಗಳ ವಿಶೇಷ ಸಭೆಯಲ್ಲಿ ಅವರು ಮಾತನಾಡಿ, ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳಲ್ಲೂ ಮೊದಲು ಅಥವಾ ಎರಡನೆಯ ಸ್ಥಾನದಲ್ಲಿರುವ ಜನಸಂಖ್ಯೆ ಜಿಲ್ಲೆಯಲ್ಲಿದೆ. ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಸಿ ಸಮುದಾಯ ನಂಬರ್ ಒನ್ ಸ್ಥಾನದಲ್ಲಿದ್ದು, 60 ಸಾವಿರ ಮತದಾರರು ಇದ್ದಾರೆ. ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 45 ರಿಂದ 50 ಸಾವಿರ ಇದ್ದಾರೆ. ಚಾಮರಾಜನಗರ, ಹನೂರು ವಿಧಾನಸಭಾ ಕ್ಷೇತ್ರದಲ್ಲೂ ಅಷ್ಟೆ ಇದ್ದಾರೆ ಎಂದರು.

ಬಿಜೆಪಿಯಲ್ಲಿ ಮುಖಂಡರು, ಕಾರ್ಯಕರ್ತರು ಗಮನಿಸಿ ಜಿಲ್ಲೆಯಲ್ಲಿ ಬಿಜೆಪಿಗೆ ಸೋಲಿಗೆ ಕಾರಣ ಎಸ್‌ಸಿ ಸಮುದಾಯವಾಗಿದೆ. ಇದು ವಸ್ತು ಸ್ಥಿತಿ ನಾವು ಅರ್ಥಮಾಡಿಕೊಳ್ಳಬೇಕು. ಸಮುದಾಯವನ್ನು ಜಾಗೃತಿಗೊಳಿಸಿ ಬಿಜೆಪಿಯ ಮೇಲಿರುವ ಅನುಮಾನಗಳು, ಅಪನಂಬಿಕೆಗಳನ್ನು ಹೋಗಲಾಡಿಸಿದರೆ ಯಾವ ಕಾರಣಕ್ಕೂ ಕಾಂಗ್ರೆಸ್ ಗೆಲ್ಲಲು ಸಾಧ್ಯವಿಲ್ಲ. ನಮ್ಮ ಸಮುದಾಯದ ನಡುವೆ ಕಾಂಗ್ರೆಸ್‌ನವರು ಬಿತ್ತಿರುವಂತಹ ಅಪನಂಬಿಕೆ ಇದೆಯಲ್ಲ. ಅದನ್ನು ಜಿಲ್ಲೆಯಲ್ಲಿ ಎಸ್‌ಸಿ ಮೋರ್ಚಾ ಪ್ರವಾಸಕ್ಕೆಗೊಂಡು ಹೋಗಲಾಡಿಸುವ ಕೆಲಸ ಮಾಡಬೇಕು. ನಮ್ಮ ಕಾಲೋನಿಯಲ್ಲಿರುವ ಅಪನಂಬಿಕೆಗಳನ್ನು ನಾವೇ ಕುಳಿತು ಸರಿಪಡಿಸುವ ಮೂಲಕ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯ ನಾಲ್ಕು ವಿಧಾನಸಭಾ ಕ್ಷೇತ್ರಗಳನ್ನು ಗೆಲ್ಲಿಸುವ ಜವಾಬ್ದಾರಿ ಎಸ್‌ಸಿ ಮೋರ್ಚಾದ ಮೇಲಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಎಸ್‌ಸಿ ಮೋರ್ಚಾದ ಜಿಲ್ಲಾಧ್ಯಕ್ಷ ನವೀನ್ ಮೌರ್ಯ ಮಾತನಾಡಿ ಎಸ್‌ಸಿ ಮೋರ್ಚಾದ ಮೊದಲ ವಿಶೇಷ ಸಭೆಯು ಯಶಸ್ವಿಯಾಗಿ ನಡೆದಿರುವುದು ತುಂಬಾ ಸಂತಸವಾಗುತ್ತದೆ. ನನ್ನನ್ನು ಎಸ್‌ಸಿ ಮೋರ್ಚಾದ ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಿದ ಜಿಲ್ಲಾಧ್ಯಕ್ಷರಾದ ಸಿ.ಎಸ್.ನಿರಂಜನ್‌ಕುಮಾರ್, ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ಹಾಗೂ ಎಲ್ಲ ಮುಖಂಡರಿಗೆ ಈ ಅಭಿನಂದನೆ ಸಲ್ಲಿಸುತ್ತೇನೆ. ಪಕ್ಷಕ್ಕೆ ಚ್ಯುತಿಯಾಗದ ರೀತಿಯಲ್ಲಿ ಎಲ್ಲ ಸಹಕಾರ, ಮಾರ್ಗದರ್ಶನದಲ್ಲಿ ಪಕ್ಷವನ್ನು ಸಂಘಟನೆ ಮಾಡುತ್ತೇನೆ ಎಂದರು.

ಎಸ್‌ಸಿ ಮೋರ್ಚಾದ ಉಸ್ತುವಾರಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್ ಮಾತನಾಡಿ, ಕಾಂಗ್ರೆಸ್ ಹಂತಹಂತದಲ್ಲೂ ಬಾಬಾ ಸಾಹೇಬ್ ಡಾ.ಬಿ.ಆರ್. ಅಂಬೇಡ್ಕರ್ ಅವರಿಗೆ ಅವಮಾನ ಮಾಡಿಕೊಂಡು ಬಂದಿದೆ ಎಂದು ಆರೋಪಿಸಿದರು.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೊನ್ನೂರು ಮಹದೇವಸ್ವಾಮಿ, ಎಸ್‌ಸಿ ಮೋರ್ಚಾದ ನಿಕಟಪೂರ್ವ ಅಧ್ಯಕ್ಷ ಮೂಡಹಳ್ಳಿ ಮೂರ್ತಿ, ಮುಖಂಡ ಕೋಡಿಉಗನೆ ಮಂಜು ಮಾತನಾಡಿದರು. ಸಭೆಯಲ್ಲಿ ಉಪಾಧ್ಯಕ್ಷೆ ಉತ್ತುವಳ್ಳಿ ಪದ್ಮ, ಪ್ರಧಾನ ಕಾರ್ಯದರ್ಶಿ ರಾಮಸಮುದ್ರ ಶಿವಣ್ಣ, ನಲ್ಲೂರು ಪರಮೇಶ್ವರ್, ನಗರಸಭಾ ಮಾಜಿ ಸದಸ್ಯ ಕುಮುದಾಕೇಶವಮೂರ್ತಿ, ಡ್ರೈವರ್ ಮಹದೇವಯ್ಯ, ಲಾಟರಿ ಸಿದ್ದರಾಜು, ಭಾನುಪ್ರಕಾಶ್, ಹಸಗೂಲಿ, ಟಗರಪುರ ರೇವಣ್ಣ, ನಾಗಸ್ವಾಮಿ, ವಡ್ಡಲ್‌ಪುರ ನಾಗೇಂದ್ರ, ಕೊತ್ತನೂರು ರಾಜಶೇಖರ್, ನಲ್ಲೂರು ಶ್ರೀನಾಥ್, ಶೇಷಪ್ಪಾಪಾಸ್ವಾನ್, ಶಿವಮ್ಮ, ಹೇಮಂತ್, ರಾಮಸಮುದ್ರರಾಚಪ್ಪ ಭಾಗವಹಿಸಿದ್ದರು.

### ಸಂಘಟನೆಯ ಜಾಲ ಗಟ್ಟಿಯಾಗಲಿ

**ಹಳೇ ಮೈಸೂರು ಭಾಗ ಕಷ್ಟ ಇದೆ. ಆ ಭಾಗದಲ್ಲಿ 12ರಿಂದ 15 ಸೀಟು ಗೆಲ್ಲುವ ತನಕ 113 ದಾಟಲ್ಲ ಎಂದು ಅಮಿತ್‌ಶಾ ಅವರು ಬಹಿರಂಗ ವಾಗಿ ಹೇಳಿದ್ದಾರೆ. ಈ ಭಾಗದಲ್ಲಿ ಕಾಂಗ್ರೆಸ್ ಯಾಕೆ ಪ್ರಾಬಲ್ಯವಾಗಿರುವುದಕ್ಕೆ ಮುಖ್ಯ ಕಾರಣ ದಲಿತರು ಕಾಂಗ್ರೆಸ್ ಮತ ಹಾಕುವುದು ಅಷ್ಟೆ. ಜಿಲ್ಲೆಯಲ್ಲಿ ಎಸ್‌ಸಿ. ಮೋರ್ಚಾದ ಸದೃಢವಾಗ ಬೇಕು ಜಿಲ್ಲೆಯ 8 ಮಂಡಲಗಳಲ್ಲೂ ಪದಾಧಿಕಾರಿಗಳು ಮಾಡಬೇಕು ಜಿಲ್ಲೆಯಲ್ಲಿ ಸಂಘಟನೆಯ ಜಾಲ ಗಟ್ಟಿಗೊಳ್ಳಬೇಕು ಆ ನಿಟ್ಟಿನಲ್ಲಿ ಎಸ್‌ಸಿ ಮೋರ್ಚಾ ಬೆಳೆಯಬೇಕು. ಅದಕ್ಕಾಗಿ ಬೇಕಾದರ ಎಲ್ಲ ಸಹಕಾರವನ್ನು ನೀಡಲು ನಾನು ಬದ್ಧವಾಗಿದ್ದೇನೆ ಎಂದು ಎನ್.ಮಹೇಶ್ ಹೇಳಿದರು..**

## ಅಂಬೇಡ್ಕರ್ ತತ್ವ ಅದರ್ಶಗಳು ದಾರಿದೀಪ

**▸▸ ಶಿವನಾಗಣ್ಣ ಹೇಳಿಕೆ**

ಚಾಮರಾಜನಗರ, ಅಂಬೇಡ್ಕರ್ ಅವರ ತತ್ವ ಅದರ್ಶಗಳನ್ನು ಮೈಗೂಡಿಸಿಕೊಂಡು ಸಮಾನತೆ ಮತ್ತು ಸಾಮಾಜಿಕ ಅಭಿವೃದ್ದಿಯ ಕಡೆ ಎಲ್ಲರು ಸಾಗೋಣ ಎಂದು ಕರ್ನಾಟಕ ರಾಜ್ಯ ಛಲವಾದಿ ಕ್ಷೇಮಾಭಿವೃದ್ದಿ ಸಂಘ ಅಧ್ಯಕ್ಷ ಜಿಲ್ಲಾಧ್ಯಕ್ಷ ಎಂ.ಶಿವನಾಗಣ್ಣ ತಿಳಿಸಿದರು.


ನಗರದ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿ ಮುಂದೆ ಸಂಘದ 2026ನೇ ವರ್ಷದ ಕ್ಯಾಲೆಂಡರ್ ಅನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಸಂಘದ ಎಲ್ಲಾ ಪದಾಧಿಕಾರಿಗಳು ಸಂವಿಧಾನ ಪೀಠಿಕೆಯನ್ನು ಓದುವ ಮೂಲಕ ಪ್ರತಿಜ್ಞೆಯನ್ನು ಪಡೆದುಕೊಂಡರು. ಸ್ವಾತಂತ್ರ್ಯದ ಬಳಿಕ ದೇಶದ ಸಮಗ್ರ ಅಭಿವೃದ್ದಿಗೆ ಪೂರಕವಾದ ಸಂವಿಧಾನವನ್ನು 1949ರ ಜನವರಿ 26 ರಂದು ಅಂಬೇಡ್ಕರ್ ಅವರು ರಚನೆ ಮಾಡಿಕೊಟ್ಟರು. ಇದು ಸಮರ್ಪಕ ಜಾರಿಯಾಗುವ ಮೂಲಕ ಎಲ್ಲರಿಗೂ ಸಮಾನವಾದ ಹಕ್ಕು ಮತ್ತು ಸ್ವಾತಂತ್ರ್ಯ ದೊರೆದಿದೆ. ಅಂಬೇಡ್ಕರ್ ಅವರು ಸರ್ವ ಧರ್ಮ ಹಾಗೂ ಎಲ್ಲರು ಒಪ್ಪುವಂತಹ ಸಂವಿಧಾನವನ್ನು ನೀಡಿದ ಪರಿಣಾಮ ದೇಶದ ಅಭಿವೃದ್ದಿಗೆ ಭದ್ರ ಬುನಾದಿಯನ್ನು ಹಾಕಿಕೊಟ್ಟರು. ಕಾರ್ಯಕ್ರಮದಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿ.ಕೃಷ್ಣರಾಜ್,ಖಜಾಂಚಿ ಎ.ಶಿವಣ್ಣ, ತಾಲೂಕು ಅಧ್ಯಕ್ಷ ಚಾ.ನಗರ ನಟೇಶೇಖರಮೂರ್ತಿ, ಕೊಳ್ಳೇಗಾಲ ಅಧ್ಯಕ್ಷ ಶಾಂತರಾಜು, ಜಿಲ್ಲಾ ಉಪಾಧ್ಯಕ್ಷರಾದ ಎಸ್. ರಾಜಣ್ಣ, ಕುಮಾರಸ್ವಾಮಿ, ಗೌರಮ್ಮ, ನಾಗರಾಜು, ಎಸ್.ಎಂ. ಮರಿಸ್ವಾಮಿ, ಮುರುಗೇಶ್, ಎಸ್.ಎಂ.ಸಿದ್ದರಾಜು, ವೃಷಬೇಂದ್ರ, ಸಿದ್ದರಾಜು ಮೊದಲಾದವರು ಇದ್ದರು.



# ಯುಜಿಸಿಯ ನಿಯಮಾವಳಿ ಜಾರಿಗೆ ಮಾನವ ಸರಪಳಿ

ಮೈಸೂರು: ವಿಶ್ವವಿದ್ಯಾನಿಲಯಗಳ ಕ್ಯಾಂಪಸ್ ನಲ್ಲಿ ಜಾತಿ, ಧರ್ಮ, ಲಿಂಗ ಆಧಾರಿತ ಶೋಷಣೆಯನ್ನು ತಡೆಗಟ್ಟಲು 2026ರ ಹೊಸ ನಿಯಮಾವಳಿಗಳನ್ನು ಯುಜಿಸಿ ಜಾರಿಗೆ ತರಲು ಮುಂದಾಗಿದೆ. ಈ ಕಾಯಿದೆಯನ್ನು ಜಾರಿಗೊಳಿಸಬೇಕು ಎಂದು ಒತ್ತಾಯಿಸಿ ಮೈವಿವಿ ಸಂಶೋಧಕರ ಸಂಘ ಹಾಗೂ ದಲಿತ ವಿದ್ಯಾರ್ಥಿ ಒಕ್ಕೂಟದ ವಿದ್ಯಾರ್ಥಿಗಳು ಮಾನವ ಸರಪಳಿ ನಿರ್ಮಾಣ ಮಾಡಿ ಪ್ರತಿಭಟನೆ ಮಾಡಲಾಯಿತು.

ಮಾನಸಗಂಗೋತ್ರಿಯ ಕ್ಲಾಕ್ ಟವರ್ ನ ಬಳಿ ಜಾಮಾವಣೆಗೊಂಡ ಸಂಶೋಧನಾ ವಿದ್ಯಾರ್ಥಿಗಳು ಹಾಗೂ ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ಯುಜಿಸಿಯ ಹೊಸ ನಿಯಮಾವಳಿಯನ್ನು ಬೆಂಬ ಲಿಸಿ, ಜಾರಿ ಮಾಡುವಂತೆ ಘೋಷಣೆ ಕೂಗಿದರು. ಪ್ರತಿಭಟನಾ ವಿದ್ಯಾರ್ಥಿಗಳು, ಎಐ ಯುಗ ಅನ್ನೋ ಕಾಲದಲ್ಲೂ ಕ್ಯಾಂಪಸ್ ನಲ್ಲಿ ನಡೆಯುತ್ತಿರುವ ನಾನಾ ಸ್ವರೂಪದ ಶೋಷಣೆಯನ್ನು ತಡೆಗಟ್ಟಲು ಯುಜಿಸಿ ತನ್ನ ವ್ಯಾಪ್ತಿಯಲ್ಲಿ ಹೊಸ ನಿಯಮಗಳನ್ನು ಜಾರಿಗೆ ತರಲು ಮುಂದಾಗಿದೆ. ಇದಕ್ಕೆ ಕೆಲವು ಸಂಘಟನೆಗಳು ವಿರೋಧ ವ್ಯಕ್ತಪಡಿಸಿದ್ದಾರೆ. ವಿರೋಧ ಯಾಕೆ ಎಂದು ಪ್ರಶ್ನಿಸಿದರು. ಹಾಗಾದರೇ ಕ್ಯಾಂಪಸ್ ನಲ್ಲಿ ಶೋಷಣೆಯೇ ಇಲ್ಲವೆ? ರೋಹಿತ್ ವೇಮುಲ ಆತ್ಮಹತ್ಯೆಗೆ ಕಾರಣ ಏನು? ಅರ್ಟಿಕಲ್ 17 ಇದ್ದರೂ ಅಸ್ಪೃಶ್ಯತೆ ಇಲ್ಲವೇ? ಈ ನಿಯಮಾವಳಿಯನ್ನು ವಿರೋಧಿಸಲು ನ್ಯಾಯುತ ಕಾರಣ ಏನು? ಕ್ಯಾಂಪಸ್‌ಗಳು ಸಮಾನತೆ ಬಿತ್ತುವ ಕೇಂದ್ರಗಳಾಗಬೇಕು. ಶೋಷಣೆ ರಹಿತ ಕ್ಯಾಂಪಸ್ ಗಳಾಗಬೇಕು ಎಂದರು. ಸಂಶೋಧಕರ ಸಂಘದ




> **ಸುಪ್ರಿಂ ಕೋರ್ಟ್ ಈ ನಿಯಮಾವಳಿ ಜಾರಿಗೆ ತಡೆವೊಡ್ಡಿದೆ. ಆದರೆ ನಿಯಮಾವಳಿಯಲ್ಲಿ ನ್ಯಾಯವಿದ್ದರೇ ಪರಶೀಲಿಸಿ ಜಾರಿ ಮಾಡಲು ಸೂಚಿಸಬೇಕು ಎಂದೂ ಸುಪ್ರಿಂ ಕೋರ್ಟ್ ಅನ್ನು ವಿನಂತಿಸುತ್ತೇನೆ.**
> ▸▸ **–ವರಹಳ್ಳಿ ಆನಂದ** ಅಧ್ಯಕ್ಷ, ಸಂಶೋಧಕರ ಸಂಘ

ಗೌರವಾಧ್ಯಕ್ಷ ಕಲ್ಲಹಳ್ಳಿ ಕುಮಾರ್, ಉಪಾಧ್ಯಕ್ಷ ಮಲ್ಲೇಶ್ ಬಾಚಹಳ್ಳಿ, ಕಾರ್ಯಾಧ್ಯಕ್ಷ ರೋಹನ್ ಹೊಂಗನೂರು, ಸದಸ್ಯರಾದ ಮಾದೇಶ್ ಸೀಗಿ, ಕಿರಣ್, ಡಾ. ಪ್ರತಾಪ್ ಕವಲಂದೆ, ದಲಿತ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷ ಗಜೇಂದ್ರ ಚಿನ್ನಸ್ವಾಮಿ, ಒಕ್ಕೂಟದ ಗೌರವಾಧ್ಯಕ್ಷ ಶಿವು ಕೋಟೆ, ಕಾರ್ಯದರ್ಶಿ ಗೌತಮ್, ಉಪಾಧ್ಯಕ್ಷರಾದ ನಚೀಕೇತ್, ಸೋಮಶೇಖರ್, ಮಹೇಶ್ ಯಶ್ವಂತ್, ಎಲ್.ಗೌತಮ್, ಒಕ್ಕೂಟದ ಸದಸ್ಯರಾದ ಪ್ರವೀಣ್, ಕಿಶೋರ್, ಮಹಾದೇವಸ್ವಾಮಿ, ಅಪ್ಪು, ಅಭಿ, ಸಿದ್ದರಾಜು, ಮನೋಜ್, ಶುಭಾಷ್, ಸಚಿನ್ ಬಸವರಾಜು, ನವೀನ್ ಕೋಳೂರು, ಅಭಿಜಿತ್ ಹಾಗೂ ಇತರರು ಹಾಜರಿದ್ದರು.

# ವಿದ್ಯಾರ್ಥಿಗಳಿಗೆ ಏನೂ ಬೋಧಿಸಬೇಕೆಂಬ ಅರಿವಿರಲಿ

ಮೈಸೂರು: ವಿದ್ಯಾರ್ಥಿಗಳಿಗೆ ಏನು ಬೋಧಿಸಬೇಕು ಎಂಬ ಅರಿವು ಉಪನ್ಯಾಸಕರಿಗೆ ಇಲ್ಲದಿದ್ದರೆ ಕಲಿಕಾ ಪ್ರಕ್ರಿಯೆಯಲ್ಲಿ ಯಾವುದೇ ಪ್ರಯೋಜನವಿರುವುದಿಲ್ಲ ಎಂದು ಮೈಸೂರು ವಿಶ್ವವಿದ್ಯಾನಿಲಯದ ಪರೀಕ್ಷಾಂಗ ಕುಲಸಚಿವ ಪ್ರೊ.ಎನ್.ನಾಗರಾಜು ಅಭಿಪ್ರಾಯಪಟ್ಟರು.



ನಗರದ ಮಾನಸ ಗಂಗೋತ್ರಿಯ ಆವರಣದಲ್ಲಿ ಇರುವ ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದಲ್ಲಿ ರೂಸಾ 2.0 ಪ್ರಾಯೋಜಿತ ಅಧ್ಯಾಪಕರ ಅಭಿವೃದ್ಧಿ ಕಾರ್ಯಕ್ರಮದ ಅಡಿಯಲ್ಲಿ ಮೈಸೂರು ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರುಗಳಿಗಾಗಿ ಆಯೋಜಿಸಿರುವ " ಪರಿಣಾಮಕಾರಿ ಬೋಧನೆಗೆ ಅಗತ್ಯವಾದ ಕೌಶಲಗಳು " ಕುರಿತ ಎರಡು ದಿನಗಳ ವಿಚಾರ ಸಂಕಿರಣವವನ್ನು ಗುರುವಾರ ಉದ್ಘಾಟಿಸಿ ಮಾತನಾಡಿದರು. ಉಪನ್ಯಾಸಕರು ಅಥವಾ ಬೋಧಕರು ತರಗತಿಯಲ್ಲಿ ಪಾಠ ಮಾಡುವ ಸಮಯದಲ್ಲಿ ತಮ್ಮಿಂದ ಆಗುವ ತಪ್ಪುಗಳನ್ನು ತಾವೇ ಸ್ವತಹ ಗುರುತಿಸಿ ತಿದ್ದಿಕೊಳ್ಳಬೇಕು. ಪ್ರತಿಯೊಂದು ತರಗತಿಯ ನಂತರ ಸ್ವಯಂ ವಿಮರ್ಶೆ ಮಾಡಿಕೊಳ್ಳಬೇಕು. ಎಲ್ಲಿ ತಪ್ಪಾಗಿದೆ ಅದನ್ನು ಮುಂದಿನ ತರಗತಿ ತಗೆದುಕೊಂಡಾಗ ಸರಿಪಡಿಸಿಕೊಂಡು ಪಾಠ ಮಾಡಮಾಡಬೇಕು. ಇಲ್ಲದಿದ್ದರೇ 20 ವರ್ಷ ಬೋಧಿಸಿದ್ದರೂ ತಪ್ಪು ತಿದ್ದಿಕೊಳ್ಳದೆ ಹೋದರೆ ವೃತ್ತಿಯಲ್ಲಿ ಉನ್ನತಿಯಾಗುವುದಿಲ್ಲ. ಇದರ ಜೊತೆಗೆ ಮನಸ್ಸು ಕೂಡಾ ವಿಸ್ತಾರವಾಗುವುದಿಲ್ಲ. ಮನಸ್ಸು ವಿಸ್ತಾರವಾಗದೇ ಜೀವನವೂ ಉನ್ನತ ಮಟ್ಟ ತಲುಪಲು ಸಾಧ್ಯವಿಲ್ಲ.

**▸▸ ಮೈವಿವಿ ಪರೀಕ್ಷಾಂಗ ಕುಲಸಚಿವ ಪ್ರೊ. ಎನ್.ನಾಗರಾಜು ಅಭಿಪ್ರಾಯ**

ಆದ್ದರಿಂದ ಬೋಧಕರು ತಪ್ಪುಗಳನ್ನು ತಿದ್ದುಕೊಳ್ಳುವುದನ್ನು ಜೀವನದ ಪ್ರಮುಖ ಭಾಗವೆಂದೇ ಪರಿಗಣಿಸುವುದು ಅವಶ್ಯವಾಗಿದೆ ಎಂದರು.

ಅತಿಥಿ ಉಪನ್ಯಾಸಕರಾಗಿ ವರ್ಷಕ್ಕೆ 3?5 ಅಂಕಗಳು ಸೇರ್ಪಡೆಯಾದರೂ, ಭವಿಷ್ಯ ಭದ್ರವಲ್ಲ. ಅತಿಥಿ ಉಪ ನ್ಯಾಸಕರು ಎಂಬ ಗುರುತನ್ನೇ ಅಂತಿಮ ಗುರಿಯಾಗಿ ಮಾಡಿಕೊಳ್ಳದೇ ಮತ್ತೊಂದು ಆಯಾಮದಲ್ಲಿ ಆಲೋಚನೆ ಮಾಡಿದಾಗ ವೃತ್ತಿಜೀವನಕ್ಕೆ ಅರ್ಥ ಮತ್ತು ದಿಕ್ಕು ದೊರೆಯುತ್ತದೆ. ಹಲವಾರು ಮಂದಿ 10, 15, 20 ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿಯೇ ಕೆಲಸ ಮಾಡುತ್ತ ಇದ್ದಾರೆ. 10–20 ವರ್ಷ ಅನುಭವ ಹೊಂದಿದ್ದರೂ ವಿಶ್ವವಿದ್ಯಾಲಯ ಅಥವಾ ಸರ್ಕಾರದಿಂದ ಯಾವುದೇ ಭದ್ರತೆ ಇಲ್ಲದಿದ್ದರೆ, ಮುಂದಿನ ಪೀಳಿಗೆಗೆ ಯಾವ ಸಂದೇಶ ನೀಡುತ್ತಿದ್ದೇವೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು ಎಂದರು. ಮಾಳವಿಯ ಮಿಷನ್ ಶಿಕ್ಷಕರ ತರಬೇತಿ ಕೇಂದ್ರದ ನಿರ್ದೇಶಕಿ ಪ್ರೊ.ಎಚ್.ಪಿ.ಜ್ಯೋತಿ ಅಧ್ಯಕ್ಷತೆ ವಹಿಸಿದ್ದರು.

# ಪೌರಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಿ

ಕೆ.ಆರ್.ಪೇಟೆ: ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಲಿರುವ 2025–26ನೇ ಸಾಲಿನ ರಾಜ್ಯ ಸರ್ಕಾರದ ಬಜೆಟ್‌ನಲ್ಲಿ ಮಂಡ್ಯ ಜಿಲ್ಲೆ ಏಳೂ ತಾಲ್ಲೂಕುಗಳ ಪುರಸಭೆ ಹಾಗೂ ನಗರಸಭೆ ಸೇರಿದಂತೆ ಕರ್ನಾಟಕ ರಾಜ್ಯಾದ್ಯಂತ ಇರುವ ಮಹಾನಗರ ಪಾಲಿಕೆ, ಪುರಸಭೆ, ಪಟ್ಟಣ ಪಂಚಾಯಿತಿ, ನಗರಸಭೆಗಳಲ್ಲಿ ಪೌರಕಾರ್ಮಿಕರಾಗಿ ಹತ್ತಿಪ್ಪತ್ತು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಪೌರಕಾರ್ಮಿಕರಿಗೆ ವೇತನವನ್ನು ನೇರವಾಗಿ ಖಾತೆಗೆ ಜಮಾ ಮಾಡಬೇಕು. ಪೌರಕಾರ್ಮಿಕ ಪದವನ್ನು ತೆಗೆದು ಆರೋಗ್ಯ ವರ್ಧಕ ಸ್ವಚ್ಚ ಕಾರ್ಮಿಕರು ಎಂದು ಬದಲಾವಣೆ ಮಾಡಬೇಕು. ಟೆಂಡರ್ ಪದ್ಧತಿಯನ್ನು ರದ್ದು ಮಾಡಿ ಸರ್ಕಾರದ ನೇರ ಅನುಧಾನದಲ್ಲಿ ವೇತನ ನೀಡಬೇಕು. ಪೌರಕಾರ್ಮಿಕರ ಹುದ್ದೆಯನ್ನು ಡಿ.ಗ್ರೂಪಿನಿಂದ ಸಿ ದರ್ಜೆಗೆ ಏರಿಸಬೇಕು. ವಸತಿ ರಹಿತ ಪೌರಕಾರ್ಮಿಕರಿಗೆ ವಸತಿ ಸೌಲಭ್ಯ ಒದಗಿಸಿಕೊಡಬೇಕು. ಪೌರಕಾರ್ಮಿಕರು ಮೃತರಾದರೆ ಅವರ ಕುಟುಂಬದವರಿಗೆ ಅನುಕಂಪ ನೌಕರಿ ನೀಡುವ ಯೋಜನೆ ಜಾರಿಗೊಳಿಸಬೇಕು. ವಸತಿ ಶಾಲೆಗಳಲ್ಲಿ ಸೇವೆ



ಸಲ್ಲಿಸುತ್ತಿರುವ ಆರೋಗ್ಯ ವರ್ಧಕ ಸ್ವಚ್ಚ ಕಾರ್ಮಿಕರಿಗೆ ಕೇವಲ 2ರಿಂದ 5ಸಾವಿರ ರೂಪಾಯಿಗಳನ್ನು ವೇತನ ನೀಡುತ್ತಿದ್ದು ಕಾರ್ಮಿಕ ಇಲಾಖೆಯು ನಿಗಧಿ ಪಡಿಸಿರುವ ಕನಿಷ್ಠ ವೇತನ ನೀಡಲು ಕ್ರಮ ವಹಿಸಬೇಕು ಇತ್ಯಾದಿ ಬೇಡಿಗಳನ್ನು ಈಡೇರಿಸುವ ಬಗ್ಗೆ ಬಜೆಟ್‌ನಲ್ಲಿ ಸೇರಿಸಿ ಅಂಗೀಕಾರ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕರ್ನಾಟಕ ಸಫಾಯಿ ಕರ್ಮಚಾರಿ ಪರಿಷತ್ ಮಂಡ್ಯ ಜಿಲ್ಲಾಧ್ಯಕ್ಷ ಕೆ.ಆರ್.ಬನ್ನಾರಿ ಕೆ.ಆರ್.ಪೇಟೆಯಲ್ಲಿ ನಡೆದ ಸಭೆಯಲ್ಲಿ ಮನವಿ ಮಾಡಿದರು.

**▸▸ ಬೇಡಿಕೆಗಳನ್ನು ಬಜೆಟ್‌ನಲ್ಲಿ ಸೇರಿಸಿ ಈಡೇರಿಸುವ ಬಗ್ಗೆ ವರದಿಯನ್ನು ಅಂಗೀಕರಿಸಬೇಕು**

**▸▸ ಮುಖ್ಯಮಂತ್ರಿಗೆ ಒತ್ತಾಯ**

## ಅಧಿಕಾರಿಗಳು ಹಾಗೂ ಸಿಬ್ಬಂದಿಯ ಪ್ರತಿಭೆ ಪ್ರದರ್ಶನ

# ಸೆಸ್ಕ್ ಕಚೇರಿಯಲ್ಲಿ ಕನ್ನಡ ಉತ್ಸವ ಆಚರಣೆ

ಮೈಸೂರು: ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಚಾವಿಸನಿನಿ) ಪ್ರಧಾನ ಕಚೇರಿಯಲ್ಲಿ ನಡೆದ ಕನ್ನಡ ಉತ್ಸವ–2025 ಕಾರ್ಯಕ್ರಮ ನಿಗಮ ಕಚೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಪ್ರತಿಭೆ ಪ್ರದರ್ಶನಕ್ಕೆ ಸಾಕ್ಷಿಯಾಯಿತು.



ವಿಜಯನಗರ ಎರಡನೇ ಹಂತದಲ್ಲಿರುವ ನಿಗಮ ಕಚೇರಿಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನಿಗಮದ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಂಭ್ರಮದಿಂದ ಭಾಗವಹಿಸುವ ಮೂಲಕ ಹಾಡುಗಾರಿಕೆ, ನೃತ್ಯ, ಕಿರು ನಾಟಕ ಸೇರಿದಂತೆ ಇನ್ನಿತರ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಿದರು. ಆ ಮೂಲಕ ದಿನನಿತ್ಯದ ಕೆಲಸದ ಒತ್ತಡದ ನಡುವೆ ಕೆಲಕಾಲ ಸಂಭ್ರಮಿಸಿದರು. ಸಾಂಸ್ಕೃತಿಕ ಕಾರ್ಯಕ್ರಮಗಳ ಜತೆಗೆ ನಿಗಮ ಕಚೇರಿಯಲ್ಲಿ ಆಯೋಜಿಸಿದ್ದ ಆಹಾರ ಮೇಳದಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿ, ಒಲೆ ರಹಿತವಾಗಿ ಹಲವು ಬಗೆಯ ತಿಂಡಿ ತಿನಿಸುಗಳನ್ನು ತಯಾರಿಸಿ ಗಮನ ಸೆಳೆದರು. ಇದೇ ಸಂದರ್ಭದಲ್ಲಿ ಕನ್ನಡ ಉತ್ಸವದ ಪ್ರಯುಕ್ತ ನಡೆಸಿದ ರಂಗೋಲಿ ಸ್ಪರ್ಧೆ, ಕೇರಂ, ರಸಪ್ರಶ್ನೆ, ಮೊಬೈಲ್ ಫೋಟೋಗ್ರಫಿ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಇದಕ್ಕೂ ಮುನ್ನ ಕಾರ್ಯಕ್ರಮವನ್ನು ನಿಗಮದ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲ್ ರಾಜು ಉದ್ಘಾಟಿಸಿದರು. ಬಳಿಕ ಮಾತನಾಡಿ, ಕನ್ನಡ ಉತ್ಸವದ ಅಂಗವಾಗಿ ನಡೆದ ಕಾರ್ಯಕ್ರಮಗಳು ಅರ್ಥಪೂರ್ಣವಾಗಿತ್ತು. ಕನ್ನಡವನ್ನು ಕೇವಲ ನವೆಂಬರ್ ತಿಂಗಳಿಗೆ ಮೀಸಲಿಡದೆ, ಪ್ರತಿನಿತ್ಯ ಆಚರಿಸುತ್ತೇವೆ ಎಂಬುದನ್ನು ಈ ಮೂಲಕ ತೋರಿಸಲಾಗಿದೆ. ಕನ್ನಡ ನಮ್ಮ ಮಾತೃಭಾಷೆ ಎಂಬುದು ಹೆಮ್ಮೆಯ ಸಂಗತಿಯಾಗಿದೆ. ಕೆಲಸದ ಒತ್ತಡದ ನಡುವೆ ನಮ್ಮಲ್ಲಿರುವ ಪ್ರತಿಭೆಗಳನ್ನು ಗುರುತಿಸುವುದನ್ನೇ ಮರೆತಿದ್ದೇವೆ ಎಂದ ಅವರು, ಈ ಎಲ್ಲ ಚಟುವಟಿಕೆಗಳ ಜೊತೆಗೆ ಕಚೇರಿ ಕೆಲಸಗಳನ್ನು ಉತ್ತಮ ರೀತಿಯಲ್ಲಿ ನಿರ್ವಹಿಸಿ, ನಿಗಮದ ಪ್ರಗತಿಗೆ ಎಲ್ಲರೂ ಸಹಕರಿಸಬೇಕಿದೆ ಎಂದು ಸಲಹೆ ನೀಡಿದರು. ಸಮಾರಂಭದಲ್ಲಿ ಸೆಸ್ಕ್ ತಾಂತ್ರಿಕ ನಿರ್ದೇಶಕ ಡಿ.ಜೆ. ದಿವಾಕರ್, ಮುಖ್ಯ ಪ್ರಧಾನ ವ್ಯವಸ್ಥಾಪಕಿ(ತಾಂತ್ರಿಕ) ಶರಣಮ್ಮ ಎಸ್.ಜಂಗಿನ, ಮುಖ್ಯ ಆರ್ಥಿಕ ಅಧಿಕಾರಿ ಜಿ.ರೇಣುಕಾ, ಮುಖ್ಯ ಲೆಕ್ಕ ಪರಿಶೋಧಕಿ ನಿಂಗರಾಜಮ್ಮ, ಪ್ರಧಾನ ವ್ಯವಸ್ಥಾಪಕರಾದ ಡಾ.ಬಿ.ಆರ್.ರೂಪಾ, ಎಲ್.ಲೋಕೇಶ್, ಎಚ್.ಆರ್. ದಿನೇಶ್, ಟಿ.ರಾಮಸ್ವಾಮಿ ಇದ್ದರು.

## ಸಂಕ್ಷಿಪ್ತ ಸುದ್ದಿ

### ಬ್ಯೂಟಿಶಿಯನ್ ಕೋರ್ಸ್‌ಗೆ ಅರ್ಜಿ

**ಮೈಸೂರು:** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬೆಂಗಳೂರು ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ, ಇವರ ಸಂಯುಕ್ತ ಆಶ್ರಯದಲ್ಲಿ ಮೈಸೂರು ಜಿಲ್ಲೆಯಲ್ಲಿ ಸ್ವಂತ ಉದ್ದಿಮೆಯನ್ನು ಸ್ಥಾಪಿಸುವ ಆಸಕ್ತ ಮಹಿಳೆಯರಿಂದ 30 ದಿನಗಳ ಕೌಶಲ್ಯಾಧಾರಿತ ಬ್ಯೂಟಿಷಿಯನ್ ಕೋರ್ಸ್‌ಗೆ ಅರ್ಜಿ ಆಹ್ವಾನಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಬ್ಯೂಟಿಷಿಯನ್ ಉದ್ಯಮ ಕುರಿತ ಕೌಶಲ್ಯ ತರಬೇತಿ ಮತ್ತು ಉದ್ಯಮಶೀಲತಾ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗಾಗಿ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಉದ್ಯಮದಾರರಿಗೆ ದೊರೆಯುವ ಸೌಲಭ್ಯಗಳು ಮಾರುಕಟ್ಟೆ ಮುಂತಾದ ವಿಷಯಗಳ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ತರಬೇತಿಯಲ್ಲಿ ಮಾಹಿತಿಯನ್ನು ನೀಡಲಾಗುವುದು. ತರಬೇತಿಯು ಉಚಿತವಾಗಿದ್ದು, ಜಿಲ್ಲೆಯ ಆಸಕ್ತ ಮಹಿಳೆಯರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಯೋಜನ ಪಡೆಯಬಹುದಾಗಿದೆ.

ಮಹಿಳೆಯರು ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿರಬೇಕು ಮತ್ತು 35 ವರ್ಷದ ವಯೋಮಿತಿಯಲ್ಲಿ ಇರಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳಿಗೆ ಆದ್ಯತೆ ನೀಡಲಾಗುವುದು. ಭಾಗವಹಿಸುವವರು ಜನವರಿ 30 ರ ಒಳಗೆ ಅರ್ಜಿಯನ್ನು ಈ ಕೆಳಕಂಡ ವಿಳಾಸದಲ್ಲಿ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ ಅಥವಾ ಕರೆ ಮೂಲಕ ಹೆಸರು ನೋಂದಾವಣೆ ಮಾಡಿಕೊಳ್ಳಲು ತಿಳಿಸಲಾಗಿದೆ. ತರಬೇತಿ ಮುಗಿದ ನಂತರ ಉದ್ಯಮ ಪ್ರಾರಂಭಿಸಲು ಬೆಂಬಲ ಸೇವೆ ನೀಡಲಾಗುವುದು ಹೆಚ್ಚಿನ ಮಾಹಿತಿಗಾಗಿ ಸಯ್ಯಾಜಿರಾವ್ ರಸ್ತೆಯಲ್ಲಿರುವ ಜಂಟಿ ನಿರ್ದೇಶಕರ ಕಛೇರಿ, ಸಿಡಾಕ್, ಜಿಲ್ಲಾ ಕೈಗಾರಿಕಾ ಕೇಂದ್ರದ ದೂ ಸಂ: 6361611136/7760145784 ನ್ನು ಸಂಪರ್ಕಿಸಬಹುದು ಎಂದು ಸಿಡಾಕ್‌ನ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದಾರೆ.

### ವಿಶೇಷ ಉಪನ್ಯಾಸ ಕಾರ್ಯಕ್ರಮ

**ಮೈಸೂರು:** ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಜನವರಿ 31 ರಂದು 'ಮೈಸೂರಿನ ಅರಮನೆ ಚಿತ್ರಕಲೆಗಳು' ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಬೆಳಗ್ಗೆ 11.00 ಗಂಟೆಗೆ ಕರ್ನಾಟಕ ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣ (Dasara Exhibition Ground) ದಲ್ಲಿ ಹಮ್ಮಿಕೊಳ್ಳಲಾಗುತ್ತದೆ. ಕಲಾವಿದರು– ಪ್ರಾದೇಶಿಕ ಶಿಕ್ಷಣ ಸಂಸ್ಥೆ, ಸಂಪನ್ಮೂಲ ವ್ಯಕ್ತಿಗಳಾದ ಡಾ॥ ಅನುಪಮ ಸಿ.ಎಸ್ ಅವರು ಉಪನ್ಯಾಸ ನೀಡಲಿದ್ದಾರೆ.

ಆಸಕ್ತ ವಿದ್ಯಾರ್ಥಿಗಳು/ ಇತಿಹಾಸ ಆಸಕ್ತರು/ ಸಾರ್ವಜನಿಕರು ಉಚಿತವಾಗಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಥಮ ದರ್ಜೆ ಸಹಾಯಕರಾದ ಶಶಿಧರ.ಎಸ್ (ಮೊ. 7349057976) ಅವರನ್ನು ಸಂಪರ್ಕಿಸಬಹುದಾಗಿದೆ ಎಂದು ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಂದುಕೊರತೆಗಳ ನಿವಾರಣಾ ವ್ಯವಸ್ಥೆಯ ಪೋರ್ಟಲ್ ಅನುಷ್ಠಾನ

**ಮೈಸೂರು:** ರಾಜ್ಯ ಸರ್ಕಾರ ಕಾರ್ಮಿಕ ಇಲಾಖೆಯು ಸಾರ್ವಜನಿಕ ಕುಂದುಕೊರತೆಗಳ ನಿರ್ವಹಣೆ ಹಾಗೂ ಇತರೆ ದೂರುಗಳನ್ನು ದಾಖಲಿಸಲು ಏಕೀಕೃತ ಸಾರ್ವಜನಿಕ ಕುಂದುಕೊರತೆಗಳ ನಿವಾರಣೆ ವ್ಯವಸ್ಥೆಯ ಪೋರ್ಟಲ್ ಅನ್ನು ಅನುಷ್ಠಾನಗೊಳಿಸಿದೆ. ಪೋರ್ಟಲ್‌ನಲ್ಲಿ ಸಾರ್ವಜನಿಕರಿಗೆ ಬಾಲ ಹಾಗೂ ಕಿಶೋರ ಕಾರ್ಮಿಕರು ಕಂಡು ಬಂದಲ್ಲಿ ದೂರನ್ನು ನೇರವಾಗಿ ಏಕೀಕೃತ ಸಾರ್ವಜನಿಕ ಕುಂದುಕೊರತೆಗಳ ನಿವಾರಣ ವ್ಯವಸ್ಥೆಯ ಪೋರ್ಟಲ್‌ನಲ್ಲಿ ದಾಖಲು ಮಾಡಲು ಅನುವು ಮಾಡಿಕೊಡಲಾಗಿರುತ್ತದೆ. ಹಾಗೂ ಜನಸ್ಪಂದನ–ಏಕೀಕೃತ ಸಾರ್ವಜನಿಕ ಕುಂದುಕೊರತೆಗಳ ನಿವಾರಣ ವ್ಯವಸ್ಥೆಯ ಪೋರ್ಟಲ್‌ನಲ್ಲಿ ದಾಖಲಿಸಿದ ದೂರುಗಳು ನೇರವಾಗಿ ಸಂಬಂಧಿಸಿದ ಕಾರ್ಯವ್ಯಾಪ್ತಿಯ ಕಾರ್ಮಿಕ ಅಧಿಕಾರಿಗಳ ಲಾಗ್ ಇನ್ ತಲುಪುತ್ತದೆ.

ಸಾರ್ವಜನಿಕರು ನಿಮ್ಮ ಸುತ್ತಮುತ್ತಲ ಪ್ರದೇಶದಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರು ಕಂಡು ಬಂದಲ್ಲಿ ಏಕೀಕೃತ ಸಾರ್ವಜನಿಕ ಕುಂದುಕೊರತೆಗಳ ನಿವಾರಣ ವ್ಯವಸ್ಥೆಯ ಪೋರ್ಟಲ್‌ನಲ್ಲಿ ನಿಮ್ಮ ದೂರನ್ನು ನೇರವಾಗಿ ಪೋರ್ಟಲ್ ಮುಖಾಂತರ ನೀಡಬಹುದು ಎಂದು ತಿಳಿಸಿದ್ದಾರೆ.

# 5.50 ಕೋಟಿ ರು ವೆಚ್ಚದಲ್ಲಿ ಕನ್ನಡ ಭವನ ನಿರ್ಮಾಣ

# ಜ. 30 ರಂದು ಕನ್ನಡ ಭವನ ಕಟ್ಟಡದ ಶಂಕುಸ್ಥಾಪನೆ

**ಮಂಡ್ಯ:** ಕನ್ನಡದ ಐಕ್ಯತೆಯ ಧ್ಯೋತಕವಾಗಿ ನಮ್ಮ ಸಾಹಿತ್ಯ ? ಸಂಸ್ಕೃತಿ ? ಪರಂಪರೆಯನ್ನು ಬಿಂಬಿಸುವ ಹಾಗೂ ನಾಡು–ನುಡಿಯ ಬಗೆಗಿನ ಅಭಿಮಾನವನ್ನು ಜನ ಮನದಲ್ಲಿ ಮೂಡಿಸುವ ನಿಟ್ಟಿನಲ್ಲಿ ಮಂಡ್ಯದಲ್ಲಿ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು 2024 ರ ಡಿಸೆಂಬರ್ 20, 21 ಮತ್ತು 22 ರವರೆಗೆ ಬಹಳ ಅರ್ಥಪೂರ್ಣವಾಗಿ, ವೈಭವಯುತವಾಗಿ ಹಾಗೂ ಯಶಸ್ವಿಯಾಗಿ ಆಚರಿಸಲಾಯಿತು.

ಸಾಹಿತ್ಯಾಸಕ್ತರ ಸಹಕಾರದಿಂದ ಅಭೂತಪೂರ್ವವಾಗಿ ಯಶಸ್ವಿಯಾಗಿ ಕಾರ್ಯಕ್ರಮ ಜರುಗಿದ್ದು, ನಾಡಿನ ಸಮಸ್ತರು ಪ್ರಶಂಸಿದರು. 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸವಿ ನೆನಪಿಗಾಗಿ ಕನ್ನಡ ಭವನವೊಂದನ್ನು ನಿರ್ಮಿಸಬೇಕು ಎಂಬ ಅಭಿಲಾಷೆಯನ್ನು ಜನಪ್ರತಿನಿಧಿಗಳು, ಸಾಹಿತ್ಯಾಸಕ್ತರು ಹಾಗೂ ಮಂಡ್ಯದ ಜನತೆ ವ್ಯಕ್ತ ಪಡಿಸಿರುತ್ತಾರೆ.

**ಕನ್ನಡ ಭವನ ಎಲ್ಲಿ ?**

ಮಂಡ್ಯ ನಗರದ ಸರ್ ಎಂ. ವಿಶ್ವೇಶ್ವರಯ್ಯ ಒಳಾಂಗಣ ಕ್ರೀಡಾಂಗಣದ ಆವರಣದಲ್ಲಿ, ಸರ್ವೆ ನಂ 2 ರಲ್ಲಿ 0.13ಗುಂಟೆ ಸರ್ಕಾರಿ ಜಮೀನನ್ನು ಕನ್ನಡ ಭವನ ನಿರ್ಮಿಸುವ ಉದ್ದೇಶಕ್ಕಾಗಿ ಜಾಗವನ್ನು ಗುರುತಿಸಲಾಗಿದೆ.




**ಹಣ ಹೊಂದಾಣಿಕೆ ಹೇಗೆ ?**

ಕನ್ನಡ ಸಾಹಿತ್ಯ ಸಮ್ಮೇಳನವನ್ನು ಅರ್ಥಪೂರ್ಣ ಮತ್ತು ಯಶಸ್ವಿಯಾಗಿ ಆಯೋಜನೆ ಮಾಡಿದ ಸವಿನೆನಪಿಗಾಗಿ ಸಮ್ಮೇಳನದಲ್ಲಿ ವಿವಿಧ ಮೂಲಗಳಿಂದ ಸಂಗ್ರಹಿಸಿದ ಹಣದ ಉಳಿತಾಯ ರೂ.2.50 ಕೋಟಿ ಹಾಗೂ ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ರೂ.3.00 ಕೋಟಿ ಒಟ್ಟು ರೂ.5.50 ಕೋಟಿ ವೆಚ್ಚದಲ್ಲಿ ಕನ್ನಡ ಭವನ ನಿರ್ಮಾಣ ಸಂಬಂಧ ಕಟ್ಟಡ ಕಾಮಗಾರಿಗೆ ಇದೇ ಜನವರಿ 30 ರಂದು ಬೆಳಿಗ್ಗೆ 8.30 ಗಂಟೆಗೆ ಕಟ್ಟಡ ಶಂಕುಸ್ಥಾಪನೆ ನೆರವೇರಲಿದೆ.

ಕಾರ್ಯಕ್ರಮವನ್ನು ಪರಮಪೂಜ್ಯ ಜಗದ್ಗುರು ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಹಾಗೂ ಎನ್ ಚಲುವರಾಯಸ್ವಾಮಿ, ಮಾನ್ಯ ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಎಲ್ಲಾ ಜನಪ್ರತಿನಿಧಿಗಳು, ಸಾಹಿತ್ಯಾಸಕ್ತರು, ಸಾರ್ವಜನಿಕರ ಸಮ್ಮುಖದಲ್ಲಿ ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದ್ದಾರೆ.

## ಬೀದಿ ಬದಿ ವ್ಯಾಪಾರಿಗಳಿಗೆ ಸೂಕ್ತ ರಕ್ಷಣೆ ಒದಗಿಸಲು ಅಧಿಕಾರಿಗಳು ಮುಂದಾಗಿ: ಶಿವಕುಮಾರ್ ಒತ್ತಾಯ




**ಮಂಡ್ಯ:** ನಗರಸಭೆ ವ್ಯಾಪ್ತಿಯ ಬೀದಿ ಬದಿ ವ್ಯಾಪಾರಿಗಳಿಗೆ ವ್ಯಾಪಾರ ಮಾಡಲು 2014ರ ಕಾಯ್ದೆಯ ಅನುಸಾರ ಸೂಕ್ತ ರಕ್ಷಣೆ ಒದಗಿಸಲು ಅಧಿಕಾರಿಗಳು ಮುಂದಾಗಬೇಕು ಎಂದು ನಗರಸಭೆ ಮಾಜಿ ಸದಸ್ಯ ಶಿವಕುಮಾರ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದಲ್ಲಿ ಬೀದಿ ಬದಿ ವ್ಯಾಪಾರ ಮಾಡುತ್ತಿರುವವರನ್ನು ತೆರವುಗೊಳಿಸಲು ಅಧಿಕಾರಿಗಳು ಮುಂದಾಗಿದ್ದಾರೆ. ಅದನ್ನು ಬಿಟ್ಟು ಅವರಿಗೆ ಕಾಯ್ದೆಯಡಿ ವ್ಯಾಪಾರ ಮಾಡಲು ಅನುವು ಮಾಡಿಕೊಡಬೇಕೆಂದು ಮನವಿ ಮಾಡಿದರು.

ಯಾವುದೇ ಬೀದಿ ಬದಿ ವ್ಯಾಪಾರಿಗಳನ್ನು ಪೊಲೀಸರು ಅಥವಾ ಯಾವುದೇ ಅಧಿಕಾರಿಗಳು ತೆರವುಗೊಳಿಸುವಂತಿಲ್ಲವೆಂದು ಕಾಯ್ದೆಯ ನಿಯಮದಂತೆ ಸುಪ್ರೀಂ ಕೋರ್ಟ್ ಸೂಚನೆ ನೀಡಿದೆ. 5 ವರ್ಷಗಳಿಗೊಮ್ಮೆ ಬೀದಿಬದಿ ವ್ಯಾಪಾರಿಗಳನ್ನು ಪರಿಶೀಲಿಸಿ ಗುರುತಿನ ಚೀಟಿ ನೀಡಬೇಕು. ಸಾರ್ವಜನಿಕರಿಗೆ ತೊಂದರೆ ಕೊಡುವ ವ್ಯಾಪಾರಿಗಳನ್ನು ತೆರವುಗೊಳಿಸುವ ಸಂಬಂಧ ಬೀದಿಬದಿ ವ್ಯಾಪಾರಿಗಳ ಸಮಿತಿ ರಚಿಸಿ ಸಭೆ ಕರೆದು ನಿರ್ಣಯ ಕೈಗೊಳ್ಳಬೇಕು. ತೆರವುಗೊಳಿಸಿದ ವ್ಯಾಪಾರಿಗಳಿಗೆ ಪ್ರಧಾನಮಂತ್ರಿ ಆತ್ಮನಿರ್ಭರ್ ಭಾರತ್ ಯೋಜನೆಯಡಿ ಪ್ರತಿ ತಿಂಗಳು 10 ಸಾವಿರ ನೀಡಬೇಕು ಎಂದು ಒತ್ತಾಯಿಸಿದರು.

ಕಾಯ್ದೆಯ ನಿಯಮಾವಳಿಗಳನ್ನು ಗಾಳಿಗೆ ತೂರಿ ಅಧಿಕಾರಿಗಳು ವ್ಯಾಪರಸ್ಥರಿಗೆ ನೋಟಿಸ್ ನೀಡದೇ ಕಾನೂನು ಬಾಹಿರ ತೆರವುಗೊಳಿಸುವುದು ನಿಲ್ಲಿಸಬೇಕು. ಬದಲಾಗಿ ಅವರಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ವ್ಯಾಪಾರ ನಡೆಸಲು ಅನುವು ಮಾಡಿಕೊಡುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ಕೃಷ್ಣ, ಪ್ರಸನ್ನಕುಮಾರ್, ಮನೋಹರ್, ಪ್ರದೀಪ್ ಇದ್ದರು.

## ಎಲ್.ಆರ್.ಶಿವರಾಮೇಗೌಡ ಬಹಿರಂಗ ಕ್ಷಮೆಯಾಚಿಸಲಿ: ಸೋಮಶೇಖರ್

**ಮಂಡ್ಯ:** ಮಾಜಿ ಸಚಿವ ಎಂ.ಎಚ್.ಅಂಬರೀಶ್ ಅವರ ವಿರುದ್ಧ ಅಶ್ಲೀಲ ಹೇಳಿಕೆ ನೀಡಿದ ಮಾಜಿ ಸಂಸದ ಎಲ್.ಆರ್.ಶಿವರಾಮೇಗೌಡ ಅವರು ಬಹಿರಂಗ ಕ್ಷಮೆಯಾಚಿಸಬೇಕು. ಇಲ್ಲವಾದಲ್ಲಿ ಜ.30ರಂದು ಬೆಂಗಳೂರಿನಲ್ಲಿ ಪ್ರತಿಭಟನೆ ಮಾಡಲಾಗುವುದು ಎಂದು ಅಖಿಲ ಕರ್ನಾಟಕ ಅಂಬರೀಶ್ ಅಭಿಮಾನಿಗಳ ಸಂಘದ ರಾಜ್ಯಾಧ್ಯಕ್ಷ ಬೇಲೂರು ಸೋಮಶೇಖರ್ ಎಚ್ಚರಿಕೆ ನೀಡಿದರು.




ಸುದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಲ್.ಆರ್.ಶಿವರಾಮೇಗೌಡ ಅವರು ಮಾಜಿ ಜಿಲ್ಲೆಯ ಹೆಗ್ಗಳಿಕೆಗೆ ಪಾತ್ರರಾದ ಸಂಸದ ಜಿ.ಮಾದೇಗೌಡ ಹಾಗೂ ಮಾಜಿ ಸಚಿವ ಎಂ.ಎಚ್.ಅಂಬರೀಶ್ ಅವರ ತೇಜೋವಧೆ ಮಾಡಿರುವ ಆಡಿಯೋ ವೈರಲ್ ಆಗಿದೆ. ಅವರ ಹೇಳಿಕೆಗೆ ಮಾದೇಗೌಡ ಹಾಗೂ ಅಂಬರೀಶ್ ಅಭಿಮಾನಿಗಳ ತೀವ್ರ ಖಂಡನೆ ವ್ಯಕ್ತವಾಗಿದೆ ಎಂದರು.

ಅಧಿಕಾರದ ಚುಕ್ಕಾಣಿ ಹಿಡಿಯಲು 2009ರಿಂದ ವಿವಿಧ ಪಕ್ಷಗಳಿಗೆ ಹಾರಿ ಹೋದ ಇವರು ತಮ್ಮನ್ನು ತಾವು ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರೆಂದು ಹೇಳಿಕೊಳ್ಳುತ್ತಾರೆ. ಎಲ್ಲ ಪಕ್ಷಗಳನ್ನು ಸುತ್ತಿಬಂದ ಇವರು ಇದೀಗ ಕಾಂಗ್ರೆಸ್ ಪಕ್ಷದ ಬಗ್ಗೆ ಚಿಂತಿಸುತ್ತಿರುವುದು ಹಾಸ್ಯಾಸ್ಪದವಾಗಿದೆ ಎಂದು ಟೀಕಿಸಿದರು.

ಬದುಕಿರುವವರೆಗೂ ಕಾಂಗ್ರೆಸ್ ಪಕ್ಷಕ್ಕೆ ದುಡಿತ ಇಬ್ಬರು ಮಹನೀಯರ ವಿರುದ್ಧ ಅವಹೇಳನವಾಗಿ ಮಾತನಾಡಿದ ಅವರಿಗೆ ಕೆಪಿಸಿಸಿ ಅಧ್ಯಕ್ಷರು ನೋಟಿಸ್ ನೀಡಿ ಅಮಾನತು ಮಾಡದಿರುವುದು ಸರಿಯಲ್ಲ. ಮಾದೇಗೌಡರು, ಅಂಬರೀಶ್ ಅವರ ಬಗ್ಗೆ ಪಕ್ಷಕ್ಕೆ ಕಿಂಚಿತ್ತು ಗೌರವವಿದ್ದರೆ ಶಿವರಾಮೇಗೌಡರನ್ನು ಪಕ್ಷದಿಂದ ಅಮಾನತು ಮಾಡುವಂತೆ ಒತ್ತಾಯಿಸಿದರು.

ಸಿದ್ದರಾಮಯ್ಯ ನೇತೃತ್ವದ ಸಂಪುಟ ಸಭೆಯಲ್ಲಿ ಪ್ರಚೋದನಾಕಾರಿ ಹೇಳಿಕೆ ನೀಡುವವರನ್ನು ಬಂಧಿಸಲು ಪೊಲೀಸ್ ಇಲಾಖೆಗೆ ಅಧಿಕಾರ ನೀಡಲಾಗಿದೆ. ಪೊಲೀಸರು ಕೂಡಲೇ ಸುಮೋಟೊ ಪ್ರಕರಣ ದಾಖಲಿಸಿ ಎಲ್.ಆರ್.ಶಿವರಾಮೇಗೌಡರನ್ನು ಬಂಧಿಸಬೇಕು ಎಂದು ಆಗ್ರಹಿಸಿದರು.

## ಮರಣಾನಂತರ ಅಂಗಾಂಗ ದಾನ

### ದಾನಿಗಳ ಕುಟುಂಬಸ್ಥರಿಗೆ ಸಚಿವರು ಅಧಿಕಾರಿಗಳಿಂದ ಗೌರವ ಅರ್ಪಣೆ




**ರಾಮನಗರ:** ರಾಮನಗರ: ಕಳೆದ ಸಾಲಿನಲ್ಲಿ ಮರಣಾನಂತರ ಅಂಗಾಂಗ ದಾನ ಮಾಡಿದ ಜಿಲ್ಲೆಯ ವ್ಯಕ್ತಿಗಳ ಕುಟುಂಬದ ಸದಸ್ಯರನ್ನು ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಸಾರಿಗೆ ಸಚಿವ ರಾಮಲಿಂಗಾರೆಡ್ಡಿಯವರು ಹಾಗೂ ಅಧಿಕಾರಿಗಳು ಸನ್ಮಾನಿಸಿ ಗೌರವಿಸಿದ್ದಾರೆ.

2025ರ ಜುಲೈನಿಂದ ಡಿಸೆಂಬರ್ ಅವಧಿಯಲ್ಲಿ ಜಿಲ್ಲೆಯ ಕರಿಯಪ್ಪನ ದೊಡ್ಡಿಯ ರುದ್ರಯ್ಯ ಅವರ ಮರಣಾನಂತರ ಅವರ ಹೃದಯ, ಕಾರ್ನಿಯಾ, ಮೂತ್ರ ಪಿಂಡಗಳನ್ನು ದಾನ ಮಾಡಿದ್ದರು. ವೆಂಕಟೇಶ್ ಎಂಬುವರು ತಮ್ಮ ಶ್ವಾಸಕೋಶ, ಹೃದಯ, ಯಕೃತ್ ಮತ್ತು ಮೂತ್ರಪಿಂಡಗಳನ್ನು, ಉಮೇಶ್ ಎಂಬುವರು ಯಕೃತ್, ಮೂತ್ರಪಿಂಡ, ಕಾರ್ನಿಯಾ, ಹೃದಯ ಕವಾಟ ಮತ್ತು ಚರ್ಮವನ್ನು ದಾನ ಮಾಡಿದ್ದರು.

ಈ ದಾನಿಗಳ ಕಾರ್ಯವನ್ನು ಶ್ಲಾಘಿಸಿ ಅವರ ಅಂಗಾಂಗ ಕುಟುಂಬದವರಿಗೆ ಜಿಲ್ಲಾಡಳಿತ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಸಾರಿಗೆ ಸಚಿವ ರಾಮಲಿಂಗರೆಡ್ಡಿ, ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್, ಜಿಪಂ ಸಿಇಒ ಅನ್ಮೋಲ್ ಜೈನ್, ಎಸ್ಪಿ ಶ್ರೀನಿವಾಸ ಗೌಡ ಅವರು ಗೌರವಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲೆಯಾದ್ಯಂತ ಒಟ್ಟು 634 ಜನ ಅಂಗಾಂಗ ದಾನಗಳಿಗಾಗಿ ನೋಂದಣಿ ಮಾಡಿಸಿದ್ದಾರೆ. ಹೃದಯಕ್ಕಾಗಿ 363, ಯಕೃತ್‌ಗಾಗಿ 330, ಶ್ವಾಸಕೋಶಕ್ಕಾಗಿ 310, ಕರುಳು ಮತ್ತು ಪ್ಯಾಂಕ್ರಿಯಾಸ್‌ಗಾಗಿ 290, ಮೂತ್ರಪಿಂಡಕ್ಕಾಗಿ 60, ಟಿಶ್ಯೂಗಳಾದ (ಅಂಗಾಂಶ) – ಚರ್ಮ 215, ಮೂಳೆ 209, ರಕ್ತನಾಳ 210, ಕಾರ್ಟಿಲೆಜ್ 208, ಕಾರ್ನಿಯಾ 54, ಹೃದಯ ಕವಾಟವನ್ನು 48 ಜನರು ನೋಂದಣಿ ಮಾಡಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ಕೊಟ್ಟರು.

ಕಾರ್ಯಕ್ರಮದಲ್ಲಿ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಬಿ.ಚೇತನ್ ಕುಮಾರ್, ಜಿಲ್ಲಾ ಶಸ್ತ್ರ ಚಿಕತ್ಸಕರಾದ ಡಾ. ಮಂಜುನಾಥ್, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ರಾಜು, ಜಿಲ್ಲಾ ಮಲೇರಿಯ ರೋಗ ನಿರ್ಮೂಲನಾಧಿಕಾರಿ ಡಾ. ಪದ್ಮಾವತಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಅರ್ಪಿತ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ದಾಸಪ್ಪ ಹಾಗೂ ಸಿಬ್ಬಂದಿ ಹಾಜರಿದ್ದರು.

### ಶಾಸಕ ಡಿ.ರವಿಶಂಕರ್ ಅವಧಿಯಲ್ಲೇ ಚುಂಚನಕಟ್ಟೆ ಸಕ್ಕರೆ ಕಾರ್ಖಾನೆ ಪ್ರಾರಂಭ

## ಸಿದ್ದರಾಮಯ್ಯ ರೈತ ಸಂಘಕ್ಕೆ ಭರವಸೆ

**ಕೆ.ಆರ್ .ನಗರ :** ಕಾಂಗ್ರೆಸ್ ಸರ್ಕಾರದ ಶಾಸಕ ಡಿ. ರವಿಶಂಕರ್ ಅವಧಿಯಲ್ಲೇ ಚುಂಚನಕಟ್ಟೆ ಸಕ್ಕರೆ ಕಾರ್ಖಾನೆ ಪ್ರಾರಂಭವಾಗುತ್ತದೆ. ಸಕ್ಕರೆ ಸಚಿವರೊಂದಿಗೆ ಮಾತನಾಡಿ ಕಾರ್ಖಾನೆ ಸಮಸ್ಯೆಯ ವರದಿಯನ್ನು ತರಿಸಿಕೊಳ್ಳುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರೈತ ಸಂಘಕ್ಕೆ ಭರವಸೆ ನೀಡಿದರು. ರಾಜ್ಯ ಕಬ್ಬು ಬೆಳೆಗಾರರ ಸಂಘದ ಉಪಾಧ್ಯಕ್ಷ ಅಂಕನಹಳ್ಳಿ ತಿಮ್ಮಪ್ಪ ಮತ್ತು ಸಂಘದ ಪದಾಧಿಕಾರಿಗಳು ಶಾಸಕ ರವಿಶಂಕರ್ ಜೊತೆ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ವಿಧಾನ ಸೌಧದಲ್ಲಿ ಭೇಟಿ ಮಾಡಿ ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆ ಪ್ರಾರಂಭದ ಬಗ್ಗೆ ಚರ್ಚಿಸಿದರು.

ಕೆ. ಆರ್. ನಗರ ಹುಣಸೂರು ಸೇರಿದಂತೆ ಐದಾರು ತಾಲೂಕುಗಳ ರೈತರ ಜೀವನಹಡಿಯಾಗಿರುವ ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆ ಸ್ಥಗಿತಗೊಂಡು ಹಲವು ವರ್ಷಗಳೇ ಆಗಿದೆ ಇದರಿಂದ ಕಬ್ಬು ಬೆಳೆಗಾರರು ಸಾಕಷ್ಟು ಸಂಕಷ್ಟದ ಪರಿಸ್ಥಿತಿ ಎದುರಿಸುತ್ತಿದ್ದಾರೆ. ಮೈಸೂರು ಜಿಲ್ಲೆಯವರೇ ಮುಖ್ಯಮಂತ್ರಿ ನೀವಾಗಿರುವುದರಿಂದ ರೈತರ



ಭವಿಷ್ಯ ನಿಮ್ಮ ಕೈಯಲ್ಲಿದೆ. ಈ ಕಾರ್ಖಾನೆಯನ್ನ ರೈತರಿಗಾಗಿ ಉಳಿಸಿಕೊಡಿ ಎಂದು ರೈತ ಸಂಘದ ಪದಾಧಿಕಾರಿಗಳು ಮನವಿ ಮಾಡಿದರು.

ಇದಕ್ಕೆ ಉತ್ತರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು. ಈ ಹಿಂದೆ ಇದರ ಸಮಸ್ಯೆಯನ್ನು ನಮ್ಮ ಸರ್ಕಾರದ ಅವಧಿಯಲ್ಲೇ ಬಗೆಹರಿಸಲಾಯಿತು. ಮತ್ತೆ ಏಕೆ ಈ ಸಮಸ್ಯೆ ಉದ್ಭವವಾಗಿದೆ ಸರಿ ಬಿಡಿ ನನ್ನ ಗಮನಕ್ಕೆ ಬಂದಿರುವುದರಿಂದ ಇದರ ಬಗ್ಗೆ ಸಂಬಂಧಪಟ್ಟ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಮಾತನಾಡುತ್ತೇನೆ ಇದರ ಸಮಸ್ಯೆ ಬಿಡಿಸುವ ಜವಾಬ್ದಾರಿಯನ್ನು ನಿಮ್ಮ ತಾಲೂಕಿನ ಶಾಸಕ ರವಿಗೆ ನೀಡುತ್ತೇನೆ. ನಂತರ ಎಲ್ಲರೂ ಕುಳಿತು ಮಾತನಾಡಿ ಪ್ರಾರಂಭಕ್ಕೆ ಏನು ಆಗಬೇಕು ಅವುಗಳನ್ನು ಒದಗಿಸಲು ಸರ್ಕಾರ ರೈತರೊಂದಿಗೆ ಇರುತ್ತದೆ ಎಂದರು.

# ಅಯೋಧ್ಯೆ ಮಾದರಿ ದೇವಾಲಯ ನಿರ್ಮಾಣಕ್ಕೆ ಪ್ರಮೋದ್ ಮುತಾಲಿಕ್ ಆಗ್ರಹ

**ರಾಮನಗರ:** ರಾಮನಗರ: ಶಾಸಕ ಇಕ್ಬಾಲ್ ಹುಸೇನ್ ಅವರು ನೀಡಿರುವ ಭರವಸೆಯಂತೆ ರಾಮನಗರದ ರಾಮದೇವರ ಬೆಟ್ಟದಲ್ಲಿ ಅಯೋಧ್ಯೆ ಮಾದರಿಯ ಶ್ರೀರಾಮ ದೇಗುಲವನ್ನು ನಿರ್ಮಿಸಬೇಕು ಎಂದು ಶ್ರೀರಾಮ ಸೇನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಆಗ್ರಹಿಸಿದ್ದಾರೆ.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. ಶಾಸಕ ಇಕ್ಬಾಲ್ ಹುಸೇನ್ ಅವರು ತಮ್ಮ ಧರ್ಮವನ್ನು ಮೀರಿ ರಾಮೋತ್ಸವವನ್ನು ಆಚರಿಸಿದ್ದಾರೆ. ಕ್ಷೇತ್ರದ ಪ್ರತಿ ಮನವನ್ನು ಗೆದ್ದಿದ್ದಾರೆ. ಆದರೆ ರಾಮದೇವರ ಬೆಟ್ಟದಲ್ಲಿ ಶ್ರೀರಾಮನ ದೇಗುಲ ನಿರ್ಮಾಣದ ಬಗ್ಗೆ ಚಕಾರ ಎತ್ತಲಿಲ್ಲವೇಕೆ ಎಂದು ಪ್ರಶ್ನಿಸಿದರು.

ಈ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರ ಶ್ರೀರಾಮ ದೇವರ ಬೆಟ್ಟದಲ್ಲಿ ಶ್ರೀರಾಮ ದೇವರ ದೇವಾಲಯವನ್ನು ನಿರ್ಮಿಸುವುದಾಗಿ ಘೋಷಿಸಿತ್ತು. ನಂತರ ಬಂದ ಚುನಾವಣೆಯ ವೇಳೆ ಕಾಂಗ್ರೆಸ್ ಪಕ್ಷ ಸಹ ದೇವಾಲಯವನ್ನು ನಿರ್ಮಿಸುವುದಾಗಿ ಹೇಳಿ ಹಿಂದೂಗಳನ್ನು ಭಾವನಾತ್ಮಕವಾಗಿಸಿ ಮತಗಳನ್ನು ಕ್ರೋಢೀಕರಿಸಿದ್ದರು. ಈಗ ಶಾಸಕ ಇಕ್ಬಾಲ್ ಹುಸೇನ್ ರಾಮೋತ್ಸವವನ್ನು ಆಚರಿಸಿದ್ದಾರೆ. ದೇವಾಲಯ ನಿರ್ಮಾಣದ ಬಗ್ಗೆಯೂ ಅವರು ಕ್ರಮವಹಿಸಬೇಕು ಎಚಿದರು.

**ಮನವಿ, ಕಾಲಾವಕಾಶ, ರಾಮನಗರ ಚಲೋ!**

ಶ್ರೀರಾಮ ದೇವರ ಬೆಟ್ಟದಲ್ಲಿ ಅಯೋಧ್ಯೆ ಮಾದರಿಯ ದೇವಾಲಯ ನಿರ್ಮಾಣಕ್ಕೆ ಆಗ್ರಹಿಸಿ ಶ್ರೀರಾಮ ಸೇನೆಚುವತಿಯಿಚಿದ ಶಾಸಕರಿಗೆ ಮನವಿ ಪತ್ರ ಸಲ್ಲಿಸಲಾಗುವುದು. ದೇವಾಲಯ ನಿರ್ಮಾಣಕ್ಕೆ ಕಾಲಾವಕಾಶವನ್ನು ನೀಡಲಾಗುತ್ತದೆ. ಹಾಗೊಮ್ಮೆ ಅವರು ನಿಗಧಿತ ಸಮಯದಲ್ಲಿ ದೇವಾಲಯ ನಿರ್ಮಾಣದ ವಿಚಾರದಲ್ಲಿ ಪ್ರಗತಿ ಕಾಣದಿದ್ದರೆ, ರಾಜ್ಯಾದ್ಯಂತ ಶ್ರೀರಾಮ ಸೇನೆಯ ಕಾರ್ಯಕರ್ತರನ್ನು ಸಂಘಟಿಸಿ ರಾಮನಗರ ಚಲೋ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದಾಗಿ ಪ್ರಮೋದ್ ಮುತಾಲಿಕ ಎಚ್ಚರಿಸಿದರು.



- ಶಾಸಕ ಇಕ್ಬಾಲ್ ಹುಸೇನ್ ರಾಮೋತ್ಸವ ಆಚರಿಸಿದ್ದಕ್ಕೆ ಅಭಿನಂದನೆ
- ದೇವಾಲಯ ನಿರ್ಮಿಸುವ ಭರವಸೆಯನ್ನು ಈಡೇರಿಸಲು ಒತ್ತಾಯ

**ನೋಟಿಸ್‌ಗೆ ಅಸಮಾಧಾನ!**

ತಾವು ಮಂಡ್ಯ ಜಿಲ್ಲೆಯ ಕೆರಗೋಡು ಗ್ರಾಮಕ್ಕೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ತೆರಳಬೇಕಾಗಿತ್ತು. ಆದರೆ ಮಂಡ್ಯ ಜಿಲ್ಲಾಡಳಿತ ನೋಟಿಸ್ ಜಾರಿ ಮಾಡಿ ನಿರ್ಬಂಧ ಹೇರಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ತಮ್ಮ ವಿರುದ್ಧ ಇದ್ದ 37 ಪ್ರಕರಣಗಳ ಪೈಕಿ 2 ಪ್ರಕರಣಗಳನ್ನು ಹೊರತುಪಡಿಸಿ ಉಳಿದೆಲ್ಲ ಪ್ರಕರಣಗಳು ಖುಲಾಸೆ ಆಗಿವೆ. ಆದರೆ ಮಂಡ್ಯ ಜಿಲ್ಲಾಧಿಕಾರಿಗಳಿಗೆ ಈ ವಿಚಾರಗೊತ್ತಿಲ್ಲ. ತಮಗೆ ಜಾರಿಯಾಗಿರುವ ನೋಟಿಸಿನಲ್ಲಿ 37 ಪಕ್ರರಣಗಳಿವೆ ಎಂದು ಉಲ್ಲೇಖಿಸಿದ್ದಾರೆ. ಹೀಗಾಗಿ ಮಂಡ್ಯ ಜಿಲ್ಲಾಧಿಕಾರಿಗಳ ವಿರುದ್ಧ ಹೈಕೋರ್ಟಿನಲ್ಲಿ ದಾವೆ ಹೂಡುವುದಾಗಿ ತಿಳಿಸಿದರು.



ಮಂಡ್ಯದಲ್ಲಿ ಗೂಂಡಗಳನ್ನು ಮಟ್ಟ ಹಾಕಬೇಕು, ಮಟ್ಕಾ, ಗಾಂಜಾದಲ್ಲಿ ತೊಡಗಿಸುವವರನ್ನು ಹಿಡಿಯಬೇಕು. ಅದು ಬಿಟ್ಟು, ಹಿಂದೂಪರ ಶ್ರಮಿಸುವ ಕಾರ್ಯಕರ್ತರನ್ನು ನಿರ್ಬಂಧಿಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಂಡ್ಯ ಜಿಲ್ಲೆಯ ಕೆರೆಗೋಡಿನಲ್ಲಿ ದೇವಾಲಯದ ಎದುರು 108 ಅಡಿ ಎತ್ತರದ ಭಾಗವದ್ವಜ ಹಾರಿಸಲಾಗಿತ್ತು. ಅದು ಯಾವುದೇ ಜಾತಿ, ಸಂಘಟನೆಚು ಧ್ವಜವಲ್ಲ. ಆದರೂ ಅಲ್ಲಿನ ಶಾಸಕರ ಕುಮ್ಮಕ್ಕಿನಿಂದಾಗಿ ಅದಕ್ಕೂ ವಿರೋಧ ವ್ಯಕ್ತವಾಗಿತ್ತು. ಧ್ವಜ ಹಾರಿಸಲು ಸ್ಥಳೀಯ ಗ್ರಾಮ ಪಂಚಾಯಿತಿ 22 ಸದಸ್ಯರ ಪೈಕಿ 20 ಸದಸ್ಯರು ಸಮ್ಮತಿಸಿದ್ದರು ಎಂಬುದು ಮುಖ್ಯ.

ಮೊದಲು ರೋಹಿಂಗ್ಯಗಳನ್ನು ಬ್ಯಾನ್ ಮಾಡಿ

ರಾಜ್ಯದಲ್ಲಿ 25 ಲಕ್ಷ ಬಾಂಗ್ಲದೇಶ ನಿವಾಸಿಗಳು ವಾಸಿಸುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ರಾಜ್ಯ ಸರ್ಕಾರ ಮೊದಲು ಅಕ್ರಮವಾಗಿ ವಾಸಿಸುತ್ತಿರುವವನ್ನು ಬ್ಯಾನ್ ಮಾಡಲಿ ನಚಿತರ ತಮ್ಮ ಬ್ಯಾನ್ ಬಗ್ಗೆ ಯೋಚಿಸಲಿ ಎಚಿದರು. ಮಂಡ್ಯದ ಶಾಸಕ ಗಣಿಗ ರವಿ ಮತ್ತು ಕಾಂಗ್ರೆಸ್ಸಿಗರು ಎಚ್ಚೆತ್ತುಕೊಳ್ಳಬೇಕು. ಕಾಂಗ್ರೆಸ್ಸಿಗರ ಧೋರಣೆಯಿಂದಾಗಿ ದೇಶ ಅಪಾಯದ ಸ್ಥಿತಿ ತಲುಪಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಶ್ರೀರಾಮ ಸೇನೆ ಸಂಘಟನೆಯ ಪದಾಧಿಕಾರಿಗಳಾದ ರಾಜೇಶ್, ಪರಮೇಶ್ ಗೌಡ, ನಾಗಾರ್ಜುನ್ ಗೌಡ ಸೇರಿದಂತೆ ಹಲವರು ಇದ್ದರು.

### ಬೀದಿ ಬದಿ ವ್ಯಾಪಾರಿಗಳಿಗೆ ಸೂಚನೆ

**ತುಮಕೂರು:** ತುಮಕೂರು ಮಹಾನಗರಪಾಲಿಕೆ ವ್ಯಾಪ್ತಿಯ ವಿವಿಧ ವಾರ್ಡ್‌ಗಳಲ್ಲಿ ಬೀದಿ ಬದಿ ವ್ಯಾಪಾರಿಗಳು ಪಾದಾಚಾರಿ ರಸ್ತೆ(ಫುಟ್ ಪಾತ್) ಒತ್ತುವರಿ ಮಾಡಿಕೊಂಡು ಸಾರ್ವಜನಿಕರ ಓಡಾಟಕ್ಕೆ ಹಾಗೂ ಸಂಚಾರಿ ಸಮಸ್ಯೆ ಉಂಟು ಮಾಡುತ್ತಿದ್ದು, ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬರುತ್ತಿವೆ.

ಸಾರ್ವಜನಿಕರ ಹಿತದೃಷ್ಟಿಯಿಂದ ಪಾಲಿಕೆಯ ಎಲ್ಲಾ ವಾರ್ಡ್‌ಗಳಲ್ಲಿನ ಬೀದಿ ಬದಿ ವ್ಯಾಪಾರಿಗಳು ಫುಟ್ ಪಾತ್ ಒತ್ತುವರಿಯನ್ನು ತೆರವುಗೊಳಿಸಿ ಸಾರ್ವಜನಿಕ ಸಂಚಾರಕ್ಕೆ ಸಮಸ್ಯೆಯಾಗದಂತೆ ವ್ಯಾಪಾರ ಮಾಡಬೇಕು. ಪಾಲಿಕೆಯ ವಿವಿಧ ವಾರ್ಡ್‌ಗಳಲ್ಲಿ ರಸ್ತೆ ಬದಿ/ಪಾದಾಚಾರಿ ರಸ್ತೆಗಳಲ್ಲಿ ನಿಷ್ಕ್ರಿಯ ತಳ್ಳುವ ಗಾಡಿಗಳನ್ನು ನಿಲ್ಲಿಸಿರುವುದು ಕಂಡು ಬಂದಿದ್ದು, ಸದರಿ ವಾಹನಗಳ ಮಾಲೀಕರು ಪ್ರಕಟಣೆ ಹೊರಡಿಸಿದ 7 ದಿನದೊಳಗಾಗಿ ತೆರವುಗೊಳಿಸಲು ಸೂಚಿಸಲಾಗಿದೆ. ತಪ್ಪಿದ್ದಲ್ಲಿ ನಿಯಮಾನುಸಾರ ಕ್ರಮವಹಿಸಲಾಗುವುದು ಎಂದು ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿವಿಧ ತರಬೇತಿಗಾಗಿ ಅರ್ಜಿ ಆಹ್ವಾನ


**ತುಮಕೂರು:** ತುಮಕೂರು ಜಿಲ್ಲೆಯಲ್ಲಿ ಸ್ವಂತ ಉದ್ದಿಮೆಯನ್ನು ಸ್ಥಾಪಿಸುವ ಆಸಕ್ತ ಯುವಕ ಹಾಗೂ ಯುವತಿಯರಿಗೆ 30 ದಿನಗಳ ಉಚಿತ ಕೌಶಲ್ಯಾ ಆಧಾರಿತ ಬ್ಯೂಟಿಷಿಯನ್ ಕೋರ್ಸ್ ಹಾಗೂ ಡೆಸ್ಕ್‌ಟಾಪ್ ಪಬ್ಲಿಷಿಂಗ್ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಪಡೆಯಲಿಚ್ಛಿಸುವವರು ಕನಿಷ್ಠ 10ನೇ ತರಗತಿ ಉತ್ತೀರ್ಣರಾಗಿದ್ದು, 35 ವರ್ಷ ವಯೋಮಾನದವರಾಗಿರಬೇಕು. ಪ.ಜಾತಿ, ಪ.ಪಂಗಡ ಮತ್ತು ಹಿಂದುಳಿದ ವರ್ಗಗಳಿಗೆ ಆದ್ಯತೆ ನೀಡಲಾಗುವುದು.

ಆಸಕ್ತರು ಭರ್ತಿ ಮಾಡಿದ ಅರ್ಜಿಯನ್ನು ಜನವರಿ 30ರೊಳಗಾಗಿ ಜಂಟಿ ನಿರ್ದೇಶಕರ ಕಚೇರಿ, ಜಿಲ್ಲಾ ಕೈಗಾರಿಕ ಕೇಂದ್ರ, ರಿಸರ್ವ್ ಪೊಲೀಸ್ ಮೈದಾನದ ಎದುರು, ಎಸ್.ಐ.ಟಿ. ಬಸ್ ನಿಲ್ದಾಣ, ತುಮಕೂರು ಇವರಿಗೆ ಸಲ್ಲಿಸಬೇಕು ಅಥವಾ ದೂ.ವಾ.ಸಂ. 7022746755ಕ್ಕೆ ಕರೆ ಮಾಡಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.







## ಸೀತಾ ಪಯಣ ಭಾವನೆಗಳ ಪಯಣ



ಅರ್ಜುನ್ ಸರ್ಜಾ ನಿರ್ದೇಶನದ, ಶ್ರೀ ರಾಮ್ ಫಿಲಂಸ್ ಇಂಟರ್ನ್ಯಾಷನಲ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗಿರುವ ಹಾಗೂ ನಿರಂಜನ್ – ಐಶ್ವರ್ಯ ಅರ್ಜುನ್ ನಾಯಕ – ನಾಯಕಿಯಾಗಿ ನಟಿಸಿರುವ "ಸೀತಾ ಪಯಣ" ಚಿತ್ರ ಫೆಬ್ರವರಿ 14 ರಂದು ತೆರೆಗೆ ಬರಲಿದೆ.

'ಸೀತಾ ಪಯಣ" ನಾನು ನಿರ್ದೇಶಿಸಿರುವ ಕನ್ನಡದ ಎರಡನೇ ಸಿನಿಮಾ. ಈವರೆಗೂ ಸುಮಾರು ಹದಿನೈದು ಚಿತ್ರಗಳ ನಿರ್ದೇಶನ ಮಾಡಿದ್ದೇನೆ. "ಸೀತಾ ಪಯಣ"ದ ಕಥೆಯನ್ನು ಹದಿಮೂರು ವರ್ಷಗಳ ಹಿಂದೆಯೇ ಸಿದ್ದಮಾಡಿಕೊಂಡಿದೆ. ಯಾವಾಗ ಇದನ್ನು ಚಿತ್ರ ಮಾಡುತ್ತೇನೊ ಎಂದು ಕಾಯುತ್ತಿದೆ. ಈಗ ಕಾಲ ಕೂಡಿಬಂದಿದೆ. ನನ್ನ ಮಗಳು ಐಶ್ವರ್ಯ ನಾಯಕಿಯಾಗಿ, ನಿರಂಜನ್ ನಾಯಕನಾಗಿ ನಟಿಸಿರುವ ಚಿತ್ರವಿದು. ಪ್ರಕಾಶ್ ರೈ, ಸತ್ಯರಾಜ್, ಕೋವೈ ಸರಳ ಅವರಂತಹ ಅನುಭವಿ ಕಲಾವಿದರ ತಾರಾಬಳಗವಿರುವ ಈ ಚಿತ್ರದಲ್ಲಿ ನಾನು ಕೂಡ ಅಭಿನಯಿಸಿದ್ದೇನೆ. ಧ್ರುವ ಸರ್ಜಾ ವಿಶೇಷಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಧ್ರುವ ಅವರ ಅಭಿಮಾನಿಗಳಿಗೆ ಈ ಪಾತ್ರ ಮೆಚ್ಚುಗೆಯಾಗುತ್ತದೆ. ಅನೂಪ್ ರುಬೆನ್ಸ್ ಸಂಗೀತ ಸಂಯೋಜನೆ, ಬಾಲಮುರುಗನ್ ಛಾಯಾಗ್ರಹಣ ಹಾಗೂ ಆಯೂಬ್ ಅವರ ಸಂಕಲನ ಈ ಚಿತ್ರಕ್ಕಿದೆ. "ಸೀತಾ ಪಯಣ", ಇದು ಬರೀ ವ್ಯಕ್ತಿಯ ಪಯಣವಲ್ಲ. ಮನಸ್ಸಿನ ಪಯಣ, ನಾವು ತಿಳಿದುಕೊಳ್ಳಬೇಕಿರುವ ಮೌಲ್ಯಗಳ ಪಯಣ ಹಾಗೂ ಭಾವನೆಗಳ ಜೊತೆಗಿನ ಸುಂದರ ಪಯಣ. ಒಟ್ಟಿನಲ್ಲಿ ಈ ಚಿತ್ರ ನೋಡಿದವರು ಚಿತ್ರಮಂದಿರದಿಂದ ಹೋಗುವಾಗ ಒಂದು ನಗುವಿನ ಜೊತೆ ಹೋಗುವುದು ಖಂಡಿತ ಎ0ದ ರು.

ಬಹಳ ದಿನಗಳ ನಂತರ "ಸೀತಾ ಪಯಣ" ಚಿತ್ರದಲ್ಲಿ ನಟಿಸಿದ್ದೇನೆ. ಎಂದು ನಾಯಕಿ ಐಶ್ವರ್ಯ ಅರ್ಜುನ್ ತಿಳಿಸಿದರು.

"ಸೀತಾ ಪಯಣ" ದಲ್ಲಿ ನಟಿಸಿದ್ದು ಬಹಳ ಸಂತೋಷವಾಗಿದೆ. ಬೇರೆ ಚಿತ್ರದಲ್ಲಿ ಅಭಿನಯಿಸಿದ್ದು ಅಂತ ಅನಿಸಲಿಲ್ಲ. ನಮ್ಮ ಕುಟುಂಬದವರ ಜೊತೆಗೆ ಇದ್ದ ಹಾಗೆ ಇತ್ತು. ನನ್ನ ಪಾತ್ರ ಕೂಡ ಚೆನ್ನಾಗಿದೆ ಎಂದು ನಾಯಕ ನಿರಂಜನ್ ಹೇಳಿದರು. ಹಾಡುಗಳ ಬಗ್ಗೆ ಸಂಗೀತ ನಿರ್ದೇಶಕ ಅನೂಪ್ ರುಬೆನ್ಸ್ ಮಾಹಿತಿ ನೀಡಿದರು. ಚಿತ್ರದ ತಂತ್ರಜ್ಞರಾದ ಅಂಜನ ಅರ್ಜುನ್ ಹಾಗೂ ಸೂರಜ್ ಸರ್ಜಾ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಫೆಬ್ರವರಿ ತಿಂಗಳಲ್ಲಿ ತೆರೆಗಾಣಲಿದೆ ವೀರ ಕಂಬಳ!

ಹಿರಿಯ ನಿರ್ದೇಶಕ ರಾಜೇಂದ್ರ ಸಿಂಗ್ ಬಾಬು ಅವರು ನಿರ್ದೇಶನ ಮಾಡಿರುವ ಬಹು ನಿರೀಕ್ಷಿತ ಚಿತ್ರ 'ವೀರ ಕಂಬಳ'. ಕಂಬಳ ಎಂಬುದು ತುಳುನಾಡಿನ ನೆಲಮೂಲದ ಸಂಸ್ಕೃತಿಯ ಸೆಲೆಯಂಥಾ ಕ್ರೀಡೆ. ಅದಕ್ಕೆ ಎಂಟುನೂರು ವರ್ಷಗಳಿಗೂ ಹೆಚ್ಚಿನ ಸಮೃದ್ಧವಾದ ಇತಿಹಾಸವಿದೆ. ಕಾಲ ಕಳೆದಂತೆ ಒಂದಷ್ಟು ಕಾನೂನು ತೊಡಕುಗಳೆದುರಾಗುವ ಮೂಲಕ ಕಂಬಳ ಒಂದಷ್ಟು ರೂಪಾಂತರಗಳನ್ನು ಹೊಂದಿದೆ. ಅದರ ನಿಖರ ಇತಿಹಾಸದ ಜಾಡಿನಲ್ಲಿ ಹೆಜ್ಜೆಯಿಡುವ ಮೂಲಕ ರಾಜೇಂದ್ರ ಸಿಂಗ್ ಬಾಬು, ಕನ್ನಡ ಹಾಗೂ ತುಳು ಭಾಷೆಗಳಲ್ಲಿ ಈ ಚಿತ್ರವನ್ನು ರೂಪಿಸಿದ್ದಾರೆ. ಆರಂಭದಿಂದಲೂ ಸುದ್ದಿ ಕೇಂದ್ರದಲ್ಲಿರುವ ವೀರ ಕಂಬಳ ಚಿತ್ರವನ್ನು ಇದೇ ಫೆಬ್ರವರಿ ತಿಂಗಳಿನಲ್ಲಿ ತೆರೆಗಾಣಿಸಲು ಚಿತ್ರತಂಡ ನಿರ್ಧರಿಸಿದೆ.

ಕಂಬಳವನ್ನು ಕೇಂದ್ರವಾಗಿಟ್ಟುಕೊಂಡು ಈ ಕಥೆ, ಚಿತ್ರಕಥೆ ಸಿದ್ಧಪಡಿಸಲು ನಿರ್ದೇಶಕರು ಎರಡು ವರ್ಷಗಳ ಕಾಲ ಶ್ರಮ ವಹಿಸಿದ್ದಾರೆ. ತುಳು ರಂಗಭೂಮಿಯ ಪ್ರಸಿದ್ಧ ನಿರ್ದೇಶಕ ವಿಜಯ್ ಕೊಡಿಯಾಲ್ ಬೈಲ್ ಚಿತ್ರಕಥೆ ಮತ್ತು ಸಂಭಾಷಣೆಯ ಮೂಲಕ ಈ ಚಿತ್ರಕ್ಕೆ ಜೊತೆಯಾಗಿದ್ದಾರೆ. ಡೆಲ್ಲಿ ಸೋಮ ಖ್ಯಾತಿಯ ಆದಿತ್ಯ ನಾಯಕನಾಗಿ ಸವಾಲಿನ ಪಾತ್ರಕ್ಕೆ ಜೀವ ತುಂಬಿದ್ದಾರೆ. ಪ್ರತಿಯೊಂದು ಸೂಕ್ಷ್ಮ ವಿಚಾರಗಳನ್ನು ಗಮನದಲ್ಲಿಟ್ಟುಕೊಂಡು, ತುಳುನಾಡಿನ ಪ್ರಾಜ್ಞರ ಮಾರ್ಗದರ್ಶನದಲ್ಲಿ ಯಾವುದೇ ತೊಡಕಿಲ್ಲದಂತೆ ವೀರ ಕಂಬಳವನ್ನು ಅಣಿಗೊಳಿಸಿರುವುದಾಗಿ ರಾಜೇಂದ್ರ ಸಿಂಗ್ ಬಾಬು ಹೇಳಿಕೊಂಡಿದ್ದಾರೆ.

ದಕ್ಷಿಣ ಕನ್ನಡದ ಮೂಡುಬಿದರೆಯ ಬಳಿಯಲ್ಲಿ ವಿಶಾಲವಾದ ಕಂಬಳದ ಗದ್ದೆಯನ್ನು ಸಿದ್ಧಪಡಿಸಿ, ಅಲ್ಲಿ ಪ್ರಧಾನ ದೃಷ್ಯಗಳನ್ನು ಸೆರೆಹಿಡಿಯಲಾಗಿದೆ. ಪ್ರತೀ ದಿನವೂ ಇಪ್ಪತ್ತು ಜೊತೆ ಕೋಣಗಳು ಹಾಗೂ ಐನೂರಕ್ಕೂ ಅಧಿಕ ಮಂದಿ ಚಿತ್ರೀಕರಣದಲ್ಲಿ ಪಾಲ್ಗೊಳ್ಳುತ್ತಿದ್ದರಂತೆ. ವಿಶೇಷವೆಂದರೆ, ಕಂಬಳದಲ್ಲಿ ಕೋಣಗಳನ್ನು ಓಡಿಸೋದರಲ್ಲಿ ದಾಖಲೆ ಬರೆದಿರುವ ಶ್ರೀನಿವಾಸ್ ಗೌಡ ಇಲ್ಲಿಯೂ ಅದೇ ಪಾತ್ರವನ್ನು ನಿರ್ವಹಿಸಿದ್ದಾರೆ. ಸ್ವರಾಜ್ ಶೆಟ್ಟಿ ಅವರಿಗೆ ಜೊತೆಯಾಗಿದ್ದಾರೆ. ದುಬೈನಲ್ಲಿಯೂ ಚಿತ್ರೀಕರಣ ನಡೆಸಲಾಗಿದೆ. ಇದೀಗ ಪೋಸ್ಟ್ ಪ್ರೊಡಕ್ಷನ್ ಕೆಲಸ ಕಾರ್ಯಗಳ ಅಂತಿಮ ಘಟ್ಟದಲ್ಲಿರುವ ಚಿತ್ರತಂಡ ಇಷ್ಟರಲ್ಲಿಯೇ ಬಿಡುಗಡೆಯ ನಿಖರ ದಿನಾಂಕ ಘೋಷಿಸಲಿದೆ.



ಈ ಚಿತ್ರವನ್ನು ಬಾಬಾ'ಸ್ ಬ್ಲೆಸಿಂಗ್ ಫಿಲ್ಮ್ಸ್ ಬ್ಯಾನರಿನಡಿಯಲ್ಲಿ ಡಾ. ವಿನಿತ ವಿಜಯ್ ಕುಮಾರ್ ರೆಡ್ಡಿ ಹಾಗೂ ಅರುಣ್ ರೈ ತೊಡಾರ್ ನಿರ್ಮಾಣ ಮಾಡಿದ್ದಾರೆ. ಪ್ರಕಾಶ್ ರೈ, ರವಿಶಂಕರ್ ಪ್ರಧಾನ ಪಾತ್ರಗಳಲ್ಲಿ ನಟಿಸಿದ್ದರೆ, ರಾಧಿಕಾ ಚೇತನ್ ವಿಶೇಷ ಪಾತ್ರಕ್ಕೆ ಜೀವ ತುಂಬಿದ್ದಾರೆ. ತುಳು ಭಾಷೆಯಲ್ಲಿಯೂ ಬಿಡುಗಡೆಗೊಳ್ಳಲಿರುವ ಸದರಿ ಚಿತ್ರದಲ್ಲಿ ನವೀನ್ ಪಡೀಲ್, ಗೋಪಿನಾಥ್ ಭಟ್, ಭೋಜರಾಜ್ ವಾಮಂಜೂರು ಸೇರಿದಂತೆ ಪ್ರಸಿದ್ಧ ತುಳು ರಂಗಭೂಮಿ ಹಿನ್ನೆಲೆಯ ನಟರು ನಟಿಸಿದ್ದಾರೆ. ವಿಜಯ್ ಕೊಡಿಯಾಲ್‌ಬೈಲ್ ಚಿತ್ರಕಥೆ ಸಂಭಾಷಣೆ, ಮಣಿಕಾಂತ್ ಕದ್ರಿ ಸಂಗೀತ ನಿರ್ದೇಶನ, ಆರ್. ಗಿರಿ ಛಾಯಾಗ್ರಹಣ, ಶ್ರೀನಿವಾಸ್ ಎಸ್ ಬಾಬು ಸಂಕಲನ, ಚಂದ್ರಶೇಖರ್ ಸುವರ್ಣ ಮುಲ್ಕಿ ಕಲಾ ನಿರ್ದೇಶನ, ಕಾಂತ ಪ್ರಸಾದನ ಹಾಗೂ ಭಾಷಾ ಅವರ ವಸ್ತ್ರವಿನ್ಯಾಸದೊಂದಿಗೆ ವೀರ ಕಂಬಳ ಕಳೆಗಟ್ಟಿಕೊಂಡಿದೆ.

## ಕಟ್ಲೆ ಟ್ರೇಲರ್ ಮತ್ತು ಹಾಡು ಬಿಡುಗಡೆ

ಹಾಸ್ಯ ಕಲಾವಿದ ಕೆಂಪೇಗೌಡ ಮೊದಲಬಾರಿ ನಾಯಕನಾಗಿ ನಟಿಸಿರುವ ?ಕಟ್ಲೆ? ಚಿತ್ರದ ಟ್ರೇಲರ್ ಮತ್ತು ಹಾಡು ಬಿಡುಗಡೆ ಸಮಾರಂಭನಡೆಯಿತು. ಮಲ್ಲೇಶ್ವರ ಶಾಸಕ ಡಾ.ಸಿ.ಎನ್.ಅಶ್ವಥ್‌ನಾರಾ ಯಣ್, ಮಂಡ್ಯ ಶಾಸಕ ರವಿಕುಮಾರ್ ಬಿಗ್‌ಬಾಸ್ ಪ್ರಥಮ್, ಕಾಕ್ರೋಚ್ ಸುಧಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಶುಭ ಹಾರೈಸಿದರು. ಇದಕ್ಕೂ ಮುನ್ನ ಕಲಾವಿದರುಗಳು ತಂಡಕ್ಕೆ ಶುಭ ಹಾರೈಸಿದ ತುಣುಕುಗಳು ಬಿತ್ತರಗೊಂಡಿತು.

ಶ್ರೀವಿಧಾ ಅಭಿನಂದನ್ ಕತೆ,ಚಿತ್ರಕತೆ,ಸಂಭಾಷಣೆ ಬರೆದು ನಿರ್ದೇಶನ ಮಾಡಿದ್ದಾರೆ. ಹೊಸಕೋಟೆ ಮೂಲದ ಭರತ್‌ಗೌಡ ಸಿನಿಮಾ ಕೃಷಿಗೆ ಬಂಡವಾಳ ಹೂಡಿರುವುದು ಹೊಸ ಅನುಭವ.

ಸನ್ಮಿತ ಮತ್ತು ಅಮೃತ ನಾಯಕಿಯರು. ಮತ್ತೋಂದು ಮುಖ್ಯ ಪಾತ್ರದಲ್ಲಿ ಹರ್ಷಿಕಾಪೂರ್ಣಚ್ಚ ಇವರೊಂದಿಗೆ ಟೆನ್ನಿಸ್‌ಕೃಷ್ಣ, ತಬಲನಾಣಿ, ಹರೀಶ್‌ರಾಜ್, ಗಣೇಶ್‌ರಾವ್ ಕೇಸರಕರ್,ಪವನ್‌ಕುಮಾರ್, ಬಿರಾದಾರ್, ಎಂ.ಎಸ್. ಉಮೇಶ್,ಯತಿರಾಜ್, ಕರಿಸುಬ್ಬು ಮುಂತಾದವರು ನಟಿಸಿದ್ದಾರೆ. ಬೆಂಗಳೂರು, ಸಿರ್ಸಿ, ಮಲೆನಾಡು ಭಾಗಗಳಲ್ಲಿ ಚಿತ್ರೀಕರಣ ನಡೆಸಲಾಗಿದೆ. ಡಾ.ವಿ.ನಾಗೇಂದ್ರಪ್ರಸಾದ್, ಭರ್ಜರಿಚೇತನ್‌ಕುಮಾರ್ ಹಾಗೂ ಕಿನ್ನಾಳ್‌ರಾಜ್ ಸಾಹಿತ್ಯದ ಗೀತೆಗಳಿಗೆ ಶ್ರೀಧರ್.ವಿ.ಸಂಭ್ರಮ್ ಸಂಗೀತ ಸಂಯೋಜಿಸಿದ್ದಾರೆ. ಅನಿರುದ್ ಛಾಯಾಗ್ರಹಣ, ಚಲುವಮೂರ್ತಿ ಸಂಕಲನ, ಅಲ್ಟಿಮೇಟ್‌ಶಿವು ಸಾಹಸ, ನೃತ್ಯ ಭಜರಂಗಿಮೋಹನ್ ಅವರದಾಗಿದೆ.

ನಂತರ ಮಾತನಾಡಿದ ನಿರ್ದೇಶಕರು, ಕಟ್ಲೆಗೆ ಬೇರೆ ಬೇರೆ ಪ್ರಾಂತ್ಯಗಳಲ್ಲಿ ಅದರದೇ ಆದ ಅರ್ಥ ಇರುತ್ತದೆ. ನಮ್ಮ ಸಿನಿಮಾಕ್ಕೆ ಅವಧಿ ಎಂದು ಹೇಳಲಾಗಿದೆ. ಪ್ರತಿಯೊಂದು ಜೀವ ರಾಶಿಗೆ ಕಾಲ ಅನ್ನೋದು ಇರುತ್ತೆ. ಅದು ಸರಿಯಾಗಿ ಆಗಲಿಲ್ಲ ಅಂದ್ರೆ, ಕಾಲಚಕ್ರದಲ್ಲಿ ಸ್ಥಗಿತಗೊಳ್ಳುತ್ತದೆ. ಇದರ ಆಧಾರದ ಮೇಲೆ ಚಿತ್ರ ಸಾಗುತ್ತದೆ. ಪೂರ್ಣ ತಿಳಿಯಲು ನೀವುಗಳು ಟಾಕೀಸ್‌ಗೆ ಬರಬೇಕು. ಕಟ್ಲೆ ಅಳಿಸುತ್ತೆ, ನಗಿಸುತ್ತೆ, ಕಾಡುತ್ತೆ, ಕಾಡಿಸುತ್ತೆ. ಕ್ಲೈಮಾಕ್ಸ್‌ದಲ್ಲಿ ಸಂದೇಶದೊಂದಿಗೆ ಕೊನೆಗೊಳ್ಳುತ್ತದೆಂದು ಶ್ರೀವಿಧಾ ಅಭಿನಂದನ್ ಸಣ್ಣದೊಂದು ಮಾಹಿತಿಯನ್ನು ತೆರೆದಿಟ್ಟರು. ಹದಿನೆಂಟು ವರ್ಷದ ಸಿನಿಪಯಣದಲ್ಲಿ 75ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿ, ಈಗ ಬಡ್ತಿ ಎನ್ನುವಂತೆ ನಾಯಕನಾಗಿ ಅಭಿನಯಿಸಿದ್ದೇನೆ. ನಿರ್ಮಾಪಕರು ಕಾಮಿಡಿ ಕಲಾವಿದನನ್ನು ಹೀರೋ ಪಟ್ಟ ಕಟ್ಟಿ, ದೊಡ್ಡ ಸಿನಿಮಾ ನಿರ್ಮಾಣ ಮಾಡಿದ್ದಾರೆಎ0ದರು





ದಕ್ಷಿಣ ಭಾರತದ ಖ್ಯಾತ ಕೊರಿಯೋಗ್ರಾಫರ್ ನಂದಿನಿ ಇತ್ತೀಚಿಗೆ ಆರಂಭಿಸಿರುವ ನೃತ್ಯ ಶಾಲೆಯ ಉದ್ಘಾಟಿಸಿದ ಕಲಾವಿದೆ ಸಪ್ನಾ ದೀಕ್ಷಿತ್

## ಸೀತಾರಾಮ್ ಸಿನಿಮಾದ ಟೀಸರ್ ಬಂತು

ವಿಜಯ ರಾಘವೇಂದ್ರ ನಟನೆಯ ಹೊಸ ಸಿನಿಮಾ ಸೆಕೆಂಡ್ ಕೇಸ್ ಆಫ್ ಸೀತಾರಾಮ್‌ದ ಟೀಸರ್ ಬಿಡುಗಡೆಯಾಗಿದೆ.

ನಟಿ ಭಾವನ ಮೆನನ್, ನಟರಾದ ಶಿವರಾಜ್ ಕುಮಾರ್, ಡಾಲಿ ಧನಂಜಯ್ , ಉನ್ನಿ ಮುಕುಂದ್ ಹಾಗೂ ನವೀನ್ ಶಂಕರ್ ಸೋಷಿಯಲ್ ಮೀಡಿಯಾದಲ್ಲಿ ಸೆಕೆಂಡ್ ಕೇಸ್ ಆಫ್ ಸೀತಾರಾಮ್ ಟೀಸರ್ ನ್ನು ರಿಲೀಸ್ ಮಾಡಿ ಇಡೀ ತಂಡಕ್ಕೆ ಶುಭ ಹಾರೈಸಿದರು.

ಸೆಕೆಂಡ್ ಕೇಸ್ ಆಫ್ ಸೀತಾರಾಮ್ ಸಿನಿಮಾದ ಟೀಸರ್ ಪ್ರೇಕ್ಷಕರಲ್ಲಿ ಕುತೂಹಲ ಹೆಚ್ಚುವಂತೆ ಮಾಡಿದೆ. ವಿಜಯ್ ರಾಘವೇಂದ್ರ, ಪೊಲೀಸ್ ಅಧಿಕಾರಿಯಾಗಿ ಮತ್ತೊಂದು ಪ್ರಕರಣವನ್ನು ಇಲ್ಲಿ ಕೈಗೆತ್ತಿಕೊಂಡಿದ್ದಾರೆ.

2021ರಲ್ಲಿ ತೆರೆಕಂಡ ವಿಜಯ ರಾಘವೇಂದ್ರ ನಟನೆಯ ಸೀತಾರಾಮ್ ಬಿನೋಯ್ ಸಿನಿಮಾದ ಸೀಕ್ವೆಲ್ ಇದಾಗಿದೆ. ಇದರಲ್ಲಿ ಪೊಲೀಸ್ ಅಧಿಕಾರಿಯಾಗಿ ಮಿಂಚಿದ್ದ ವಿಜಯ ರಾಘವೇಂದ್ರ ಬಳಿಕ ಸೀತಾರಾಮ್ ಬಿನೋಯ್ ನಲ್ಲಿ ನಟಿಸಿದ್ದರು. ಇದನ್ನು ದೇವಿಪ್ರಸಾದ್ ಶೆಟ್ಟಿ ಅವರೇ ನಿರ್ದೇಶಿಸಿದ್ದರು. ಇದೀಗ ಮತ್ತೊಮ್ಮೆ ದೇವಿ ಪ್ರಸಾದ್ ಶೆಟ್ಟಿ ಜೊತೆ ಸಿನಿಮಾ ಮಾಡಿದ್ದಾರೆ.





ಪ್ರೊಡಕ್ಷನ್ ನಂಬರ್ ವನ್ ಚಿತ್ರದಲ್ಲಿ ಶ್ವೇತಾ ನಂದಕುಮಾರ್



## ಒಬ್ಬನೆ ಶಿವ" ಚಿತ್ರೀಕರಣ ಪ್ರಗತಿಯಲ್ಲಿ

ನಟ ಚೇತನ್ ಚಂದ್ರ, "ಒಬ್ಬನೆ ಶಿವ" ಎಂಬ ಚಿತ್ರದಲ್ಲಿ ನಾಯಕನಾಗಿ ನಟಿಸುತ್ತಿದ್ದಾರೆ. URBAN LEGEND ಲಾಂಛನದಲ್ಲಿ ವಿ.ಪಿ.ಶಂಕರ್ ಅವರು ಈ ಚಿತ್ರವನ್ನು ನಿರ್ಮಿಸಿ, ನಿರ್ದೇಶಿಸುತ್ತಿದ್ದಾರೆ. ಕನ್ನಡ ಹಾಗೂ ತಮಿಳು ಎರಡು ಭಾಷೆಗಳಲ್ಲಿ ಈ ಚಿತ್ರ ನಿರ್ಮಾಣವಾಗುತ್ತಿದೆ. ಕೋಲಾರ ಹಾಗೂ ಬೆಂಗಳೂರಿನಲ್ಲಿ ಈಗಾಗಲೇ ಶೇಕಡಾ 80ರಷ್ಟು ಚಿತ್ರೀಕರಣ ಮುಕ್ತಾಯವಾಗಿದೆ. ಏಪ್ರಿಲ್ ನಲ್ಲಿ ತೆರೆಗೆ ತರುವ ಸಿದ್ದತೆ ನಡೆಯುತ್ತಿದೆ. ಮೂರು ಹಾಡುಗಳಿರುವ ಈ ಚಿತ್ರಕ್ಕೆ ಸತ್ಯ ಕಶ್ಯಪ್ ಸಂಗೀತ ನೀಡುತ್ತಿದ್ದಾರೆ. ಖ್ಯಾತ ನಿರ್ದೇಶಕ ರಾಮ್ ಗೋಪಾಲ್ ವರ್ಮ ಅವರ ಚಿತ್ರಕ್ಕೂ ಸತ್ಯ ಕಶ್ಯಪ್ ಸಂಗೀತ ನೀಡಿದ್ದಾರೆ. ಕೋರ್ಟ್ ರೂಮ್ ಡ್ರಾಮ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ನಿರ್ದೇಶಕ ವಿ.ಪಿ.ಶಂಕರ್ ಅವರೆ ಕಥೆ, ಚಿತ್ರಕಥೆ ಬರೆದಿದ್ದಾರೆ. ಸಜನ್ ಛಾಯಾಗ್ರಹಣ ಹಾಗೂ ಅನ್ಸು ಸಂಕಲನ "ಒಬ್ಬನೆ ಶಿವ" ಚಿತ್ರಕ್ಕಿದೆ. ಚೇತನ್ ಚಂದ್ರ, ಮಹಾಲಕ್ಷ್ಮೀ, ತೇಜ, ಕಿಂಗ್ ಮೋಹನ್, ವಿಶಾಲ್, ರತನ್ ಗಣಪತಿ ಮುಂತಾದವರು ಈ ಚಿತ್ರದ ತಾರಾಬಳಗದಲ್ಲಿದ್ದಾರೆ.



## ಬೆಂಗಳೂರಿನ ಹೃದಯಭಾಗದಲ್ಲೊಂದು ಮಲ್ಟಿಪ್ಲೆಕ್ಸ್ AMB ಸಿನಿಮಾಸ್ ಕಪಾಲಿ ಮಾಲ್

ಏಷ್ಯಾದಲ್ಲಿಯೇ ಅತೀ ದೊಡ್ಡ ಥಿಯೇಟರ್ ಎಂದು ಖ್ಯಾತಿ ಪಡೆದಿದ್ದ ಕಪಾಲಿ ಚಿತ್ರಮಂದಿರ 50 ವರ್ಷಗಳ ಕಾಲ ಸಿನಿಪ್ರಿಯರಿಗೆ ಮನರಂಜನೆ ನೀಡಿತ್ತು..

ಚಿತ್ರಮಂದಿರ ಮತ್ತು ಅದರ ಹೆಸರು ಕೇವಲ ಹೆಸರಾಗಿ ಉಳಿದಿರಲಿಲ್ಲ, ಭಾವನೆಯಾಗಿ ಬೆಳೆದಿತ್ತು. ಕಪಾಲಿ ನೆಲಸಮ ಆಯಿತು..

ಈಗ ಅದೇ ಜಾಗದಲ್ಲಿ ಬೃಹತ್ ಮಲ್ಟಿಪ್ಲೆಕ್ಸ್ ಪ್ರಾರಂಭವಾಗಿದೆ. ಟಾಲಿವುಡ್ ನಟ ಮಹೇಶ್‌ಬಾಬು ಒಡೆತನದ "ಎಎಂಬಿ ಸಿನಿಮಾಸ್" ಇದೇ ಜಾಗದಲ್ಲಿ ಬೃಹತ್ ಮಲ್ಟಿಪ್ಲೆಕ್ಸ್ ನಿರ್ಮಾಣವಾಗಿದೆ. 'ಎಎಂಬಿ ಸಿನಿಮಾಸ್ ಕಪಾಲಿ ಎನ್ನುವ ಹೆಸರಿನಲ್ಲಿ ಈ ಮಲ್ಟಿಪ್ಲೆಕ್ಸ್ ಕಾರ್ಯ ಆರಂಭಿಸಿದೆ. ಇದು ದಕ್ಷಿಣ ಭಾರತದ ಮೊಟ್ಟ ಮೊದಲ ಡಾಲ್ಬಿ ವಿಷನ್ ವಿಥ್ ಇಂದು ಚಿತ್ರಮಂದಿರವಾಗಿದ್ದು 9 ಸ್ಕ್ರೀನ್‌ಗಳು ಇದೆ. ಸ್ಕ್ರೀನ್‌ಗಳು ಅತ್ಯುತ್ತಮ ವಿಡಿಯೋ ಗುಣಮಟ್ಟ ಹೊಂದಿದ್ದು ಪ್ರೇಕ್ಷಕರಿಗೆ ಅತ್ಯುತ್ತಮ ಚಿತ್ರ ವೀಕ್ಷಣೆ ಅನುಭವ ನಿಡುತ್ತದೆ. ವಿಶೇಷವಾಗಿ ಎಲ್ಲಾ ಸ್ಕ್ರೀನ್ ಗಳಲ್ಲಿ ಅತ್ಯುತ್ತಮ ಬಣ್ಣ ಹಾಗೂ ದೃಶ್ಯ ಸ್ಪಷ್ಟತೆಗಾಗಿ ಬಾರ್ಕೋ ಲೇಸರ್ ಪ್ರೊಜೆಕ್ಷನ್ ತಂತ್ರಜ್ಞಾನವನ್ನು "ಎಎಂಬಿ ಸಿನಿಮಾಸ್"ನಲ್ಲಿ ಬಳಸಲಾಗಿದೆ. ಇನ್ನು ಸ್ಕ್ರೀನ್ 6 ಎಲ್ಲಕ್ಕಿಂತ ವಿಶೇಷವಾಗಿದ್ದು, ಇದು ದಕ್ಷಿಣ ಭಾರತದ ಮೊದಲ ಡಾಲ್ಬಿ ಸಿನಿಮಾ ಪರದೆಯಾಗಿದೆ. ಇದು ಕ್ರಿಸ್ಟಿ 6ಪಿ ಡಾಲ್ಬಿ ವಿಷನ್ ಪ್ರೊಜೆಕ್ಟರ್ ಮತ್ತು ಇಮ್ಮರ್ಸಿವ್ ಸೌಂಡ್ ವ್ಯವಸ್ಥೆಯನ್ನು ಹೊಂದಿದೆ. ಪ್ರೇಕ್ಷಕರಿಗೆ ಐಷಾರಾಮಿ ಸೌಕರ್ಯ ನೀಡಲು ಎಂ–ಲೌಂಜ್ ಎಂಬ ವಿಶೇಷ ಲೌಂಜ್ ಮತ್ತು ಆಸನ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ. ಆಹಾರ ಮತ್ತು ಪಾನೀಯ ಚಲನಚಿತ್ರ ವೀಕ್ಷಕರಿಗಾಗಿ ವಿಶೇಷವಾಗಿ ಆಯ್ಕೆ ಮಾಡಿದ ರುಚಿಕರವಾದ ಆಹಾರ ಮತ್ತು ಪಾನೀಯಗಳ ವ್ಯವಸ್ಥೆ ಇಲ್ಲಿದೆ.

ಇಲ್ಲಿನ ಟಿಕೆಟ್ ದರ ದುಬಾರಿ ಅಲ್ಲದೆ ಎಲ್ಲರ ಕೈ ಗೆಟಕುವ ದರದಲ್ಲಿರುತ್ತದೆ.

ಸರ್ಕಾರದ ನಿಯಮಾವಳಿಯಂತೆ ಬೆಳಿಗ್ಗೆ ಆರು ಗಂಟೆಯಿಂದ ಪ್ರಥಮ ಪ್ರದರ್ಶನ ಪ್ರಾರಂಭವಾಗುತ್ತದೆ ಮತ್ತು ಕಡೆಯ ಪ್ರದರ್ಶನ ರಾತ್ರಿ 10.30ಕ್ಕೆ ಇರುತ್ತದೆ. ಅದರ ನಡುವೆ ಐದು, ಆರು ಪ್ರದರ್ಶನಗಳನ್ನು ನೀಡಲು ಯೋಜಿಸಲಾಗುತ್ತದೆ.

ಇಲ್ಲಿ ಲೈವ್ ಕಿಚನ್ ತೆರೆಯಲಾಗಿದ್ದು ಪ್ರೇಕ್ಷಕರಿಗೆ ಅತ್ಯುತ್ತಮ ಗುಣಮಟ್ಟದ ಆಹಾರ ಪೂರೈಸುವ ಉದ್ದೇಶವಿದೆ.

ಮುಂಬರುವ ದಿನಗಳಲ್ಲಿ ಕರ್ನಾಟಕದ ಇತರೆ ಭಾಗಗಳಲ್ಲೂ ಎಎಂಬಿ ಸಿನಿಮಾಸ್ ತೆರೆಯುವ ಯೋಜನೆ ಇದೆ. ಬಹಳ ಹಿಂದಿನಿಂದ "ಎಎಂಬಿ ಸಿನಿಮಾಸ್' ಹಾಗೂ ಕ್ಯೂಬ್ ನಡುವೆ ಒಪ್ಪಂದವಿದೆ ಎಂದು "ಎಎಂಬಿ ಸಿನಿಮಾಸ್" ನ ಎಂ.ಡಿ ಭರತ್ ನಾರಂಗ್ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.




Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,